ಸಂಪುಟ: 14 Volume | ಸಂಚಿಕೆ: 25 Issue | ಪುಟಗಳು 08 Pages | ಬುಧವಾರ 29 ಏಪ್ರಿಲ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ಜೀವನದಲ್ಲಿಬುದ್ಧಿವಂತಿಕೆಯೊಂದೇ ಸಾಲದು. ತಾಳ್ಮೆ ಮತ್ತು ವಿವೇಚನೆ ಕೂಡ ಮುಖ್ಯ.

–ವಿನೋಬಾ ಭಾವೆ

ಬಸ್ ನಿಲ್ದಾಣ ಸ್ವಚ್ಛಗೊಳಿಸಿದ ಸಿಬ್ಬಂದಿ 6

ಉತ್ತಮ ಸಾಧನೆಗೈದ ವಿದ್ಯಾರ್ಥಿಗೆ ಸನ್ಮಾನ 7

ಒಳಮೀಸಲಾತಿ ತೀರ್ಮಾನ: ಸಂಗಮ 8



ಬೆಂಗಳೂರಿನ ಲೋಕಭವನದ ಆವರಣದಲ್ಲಿ ಗೋಶಾಲೆ "ಕಾಮಧೇನು ಲೋಕ" ಹಾಗೂ ನವೀಕೃತ ಸ್ವಾಗತ ಕೇಂದ್ರವನ್ನು ರಾಜ್ಯಪಾಲ ಥಾವರ್ ಚಂದ್ ಗೆಹಲೊಟ್ ಅವರು ಮಂಗಳವಾರ ಉದ್ಘಾಟಿಸಿದರು. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ ಕೆ ಶಿವಕುಮಾರ್, ಶಾಸಕ ಪೊನ್ನಣ್ಣ ಮತ್ತಿತರರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಡಿಸಿಎಂ ಶಿವಕುಮಾರ್ ಅವರು ಕಾಮಧೇನು ಲೋಕದ ಎದಿರು ಮಹಾಘನಿ ಸಸಿ ನೆಟ್ಟರು.

## ಹೈಕಮಾಂಡ್ ಕ್ರಮಕ್ಕೆ ಎಲ್ಲರೂ ಬದ್ಧ

**ಕಲಬುರಗಿ:** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಹೈ ಕಮಾಂಡ್ ತೀರ್ಮಾನ ಕೈಗೊಳ್ಳಲಿದೆ. ಹೈ ಕಮಾಂಡ್ ಕೈಗೊಳ್ಳುವ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕಾಗುತ್ತದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಗೊಂದಲ ಏನಿಲ್ಲ. ಸರ್ಕಾರ, ಆಡಳಿತ, ಕಾರ್ಯಕ್ರಮ ಎಲ್ಲವೂ ಸರಿಯಾಗಿ ನಡೆಯುತ್ತಿವೆ. 4 ಲಕ್ಷ ಕೋಟಿ ಬಜೆಟ್ ನೀಡಿದ್ದೇವೆ. ಏನೇ ಗೊಂದಲಗಳಿದ್ದರು ಅದನ್ನು ಹೈಕಮಾಂಡ್ ಬಗೆ ಹರಿಸುತ್ತದೆ. ಎಲ್ಲದಕ್ಕೂ ಆದಷ್ಟು ಶೀಘ್ರದಲ್ಲಿ ಪರಿಹಾರ ಸಿಗಲಿದೆ ಎಂದಿದ್ದಾರೆ.



ಬೆಂಗಳೂರು: ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ರಾಜಕೀಯ ಜನಸೇವೆಯಲ್ಲಿ 50 ವರ್ಷ ಪೂರೈಸಿದ ಅಭಿಮಾನೋತ್ಸವ ಕಾರ್ಯಕ್ರಮದ ಪ್ರಯುಕ್ತ ಮಾಧ್ಯಮ ವಿಭಾಗದ ಪೂರ್ವ ತಯಾರಿ ಸಭೆ ಇಂದು ನಡೆಯಿತು. ಯುವ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಶಾಸಕ ಹರೀಶ್ ಪೂಂಜ, ನಿವೃತ್ತ ಐಪಿಎಸ್ ಅಧಿಕಾರಿ ಭಾಸ್ಕರ್ ರಾವ್, ರಾಜ್ಯ ಮಾಧ್ಯಮ ವಿಭಾಗದ ಸಂಚಾಲಕ ಕರುಣಾಕರ ಖಾಸಲೆ, ಜಿಲ್ಲೆಯ ಮಾಧ್ಯಮ ವಿಭಾಗದ ಪ್ರಮುಖರು ಉಪಸ್ಥಿತರಿದ್ದರು.

## ಮತ ಎಣಿಕೆ: ಸಿಬ್ಬಂದಿಗೆ ತರಬೇತಿ

**ಬಾಗಲಕೋಟೆ:** ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ–2026ರ ಮತ ಎಣಿಕೆ ಕಾರ್ಯ ಮೇ 4 ರಂದು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆದಿದೆ. ಈ ಹಿನ್ನಲೆಯಲ್ಲಿ ಮತ ಎಣಿಕೆ ಸಿಬ್ಬಂದಿಗಳಿಗೆ ಮಂಗಳವಾರ ತರಬೇತಿ ಕಾರ್ಯಕ್ರಮ ಜರುಗಿತು. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಹಮ್ಮಿಕೊಂಡ ತರಬೇತಿಯನ್ನು ಉದ್ದೇಶಿಸಿ, ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ ಅವರು ಎಣಿಕೆ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿ ಹಾಗೂ ಸಿಬ್ಬಂದಿಗಳು ತಮ್ಮ ಕಾರ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಮತ ಎಣಿಕೆ ಕಾರ್ಯ ನಡೆಸಲಾಗುತ್ತಿದೆ.

## ಶ್ವಾಸತಾಣಗಳ ಸಂರಕ್ಷಣೆ, ಸಂವರ್ಧನೆಗೆ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮ ತಗ್ಗಿಸಲು ಕರ್ನಾಟಕ ರಾಜ್ಯ ಕ್ರಿಯಾ ಯೋಜನೆ ರೂಪಿಸಲಾಗಿದ್ದು, ಇದರ ಸಮರ್ಪಕ ಅನುಷ್ಠಾನಕ್ಕೆ ಕ್ರಮ ವಹಿಸಲು ಸೂಚಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಕರ್ನಾಟಕ ಮಾಧ್ಯಮ ಅಕಾಡಮಿ ಆಯೋಜಿಸಿದ್ದ ವಿತರೀತ ಬಿಸಿ ಮತ್ತು ಬೆಂಗಳೂರಿನ ಮೇಲೆ ಅದರ ಪರಿಣಾಮ ಕುರಿತ ವಿಚಾರ ಸಂಕಿರಣದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಕ್ರಿಯಾ ಯೋಜನೆಯನ್ನು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಜಾರಿಗೆ ತರಲು



ಪರಿಸರ ಇಲಾಖೆ ವ್ಯಾಪ್ತಿಗೆ ಒಳಪಡುವ ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ –ಎಂಪ್ರಿ ಕ್ರಮ ಕೈಗೊಂಡಿದೆ ಎಂದರು.

ಜಿಲ್ಲಾ ಪಂಚಾಯತ್ ಕಚೇರಿಗಳ ಸಹಯೋಗದೊಂದಿಗೆ ಕೆಎಪಿಸಿಸಿ ಅನುಷ್ಠಾನ ಮತ್ತು ಅದರ ಪ್ರಗತಿಯ ಕುರಿತು ಜಿಲ್ಲಾ ಅಧಿಕಾರಿಗಳು ಮತ್ತು ಇತರ ಸಂಬಂಧಿತ ಸಂಸ್ಥೆಗಳಿಗೆ ತರಬೇತಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು.

## ಎಗ್ಗಿಲ್ಲದೆ ನಡೆಯುತ್ತಿದೆ ಮಣ್ಣು ಮಾಫಿಯಾ...!

• ಮಲ್ಲಮ್ಮ ನುಡಿ ವಾರ್ತೆ ಜಮಖಂಡಿ

ಬಿಜೆಪಿ ಶಾಸಕ ಜಗದೀಶ್ ಗುಳಗುಂಟಿ ಕ್ಷೇತ್ರದಲ್ಲಿ ಬೆಳ್ಳಂ ಬೆಳಿಗ್ಗೆ ಕೃಷ್ಣಾ ನದಿಯ ತೀರದಲ್ಲಿ ಮಣ್ಣು ಬಗೆಯು ಕಾರ್ಯ ಬಲು ಜೋರು. ಜಮಖಂಡಿ ತಾಲೂಕಿನ ಜಂಬಗಿ ಗ್ರಾಮದಲ್ಲಿ ಅಕ್ರಮವಾಗಿ ಮಣ್ಣು ಸಾಗಾಟ ಮಾಡಲಾಗುತ್ತಿದೆ.

ಜೆ ಸಿ ಬಿ 50 ಟ್ರ್ಯಾಕ್ಟರ್ ಬಳಸಿ ನಿರಂತರವಾಗಿ ಮಣ್ಣು ಅಗೆಯುವ ಕಾರ್ಯ,ಜಮಖಂಡಿ ತಾಲೂಕಿನ ಅಧಿಕಾರಿಗಳು ಮಾತ್ರ ಜಾಣ ಮೌನ,ಕೃಷ್ಣಾ ನದಿಯಲ್ಲಿ ನೀರಿನ ಮಟ್ಟ ಕಡಿಮೆ ಆಗುತ್ತಿದ್ದಂತೆ ಕೃಷ್ಣೆಯ ಒಡಲನ್ನು ಬಗೆಯುತ್ತಿರುವ ದಂದೆ ಕೋರರು,ಕೃಷ್ಣಾ ನದಿಯ ಭೂ ಸ್ವಾಧೀನ ವಾಗಿರುವ ಜಾಮೀನು,



ಕೃಷ್ಣಾನದಿ ತೀರದಲ್ಲಿ ಅಕ್ರಮ ಮಣ್ಣು ಮಾಫಿಯಾ ಸದ್ದು.ಪರವಾಗಿನಿಗೆ ಇಲ್ಲದೆ, ನಿತ್ಯ ಮಣ್ಣು ಅಗೆಯುತ್ತಿರುವ ದುರುಳರು.ಅಕ್ರಮ ಮಣ್ಣು ಸಾಗಾಟ ನಡೆಯುತ್ತಿದ್ದರು ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳು,ಜಿಲ್ಲಾಡಳಿತ– ತಾಲೂಕು ಆಡಳಿತ ಮೌನ ವಹಿಸಿದೆ.

# ದಿಲ್ಲಿ ಕೈಯಲಿ ಹೈವೋಲ್ಟೇಜ್

### ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆ | ಒಂದೇ ಕಾರಲ್ಲಿ ಬಂದು ಗಮನ ಸೆಳೆದ ಸಿಎಂ, ಡಿಸಿಎಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆ, ಮುಖ್ಯಮಂತ್ರಿ ಗಾದಿಗಾಗಿ ಪೈಪೋಟಿ ಜೋರಾಗಿದೆ. ಇದರ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಒಂದೇ ಕಾರಿನಲ್ಲೇ ವಿಧಾನಸೌಧಕ್ಕೆ ಇಂದು ಆಗಮಿಸಿ ತೀವ್ರ ಕುತೂಹಲ ಕೆರಳಿಸಿದ್ದಾರೆ. ಲೋಕಭವನದಲ್ಲಿ ನೂತನವಾಗಿ ನಿರ್ಮಿಸಿರುವ ನವೀಕೃತ ಸ್ವಾಗತ ಕೇಂದ್ರ ಮತ್ತು ಕಾಮಧೇನು ಲೋಕ ಗೋಶಾಲೆಯ ಉದ್ಘಾಟನೆಯ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಇಬ್ಬರೂ ನಾಯಕರು ಅಲ್ಲಿಂದ ಒಂದೇ ಕಾರಿನಲ್ಲಿ ವಿಧಾನಸೌಧಕ್ಕೆ ಆಗಮಿಸಿದ್ದಾರೆ.

**ಯಾವ ವಿಚಾರ ಬಗ್ಗೆ ಚರ್ಚೆ?:** ವಿಧಾನಸೌಧದಲ್ಲಿರುವ ಮುಖ್ಯಮಂತ್ರಿಯವರ ಕೊಠಡಿಯಲ್ಲಿ ಇಬ್ಬರೂ ನಾಯಕರು ಕೆಲ ಕಾಲ ಸಮಾಲೋಚನೆ ನಡೆಸಿದ್ದು, ತೀವ್ರ ಕುತೂಹಲವನ್ನುಂಟು ಮಾಡಿತು. ಯಾವ ವಿಚಾರದ ಬಗ್ಗೆ ಇಬ್ಬರೂ ನಾಯಕರು ಮಾತುಕತೆ ನಡೆಸಿದರು ಎಂಬುದು ಸದ್ಯಕ್ಕೆ ತಿಳಿದುಬಂದಿಲ್ಲ.

**ಆಯ್ಕೆ ಸಮಿತಿ ಸಭೆಯ:** ಯಾವ ವಿಚಾರದ ಬಗ್ಗೆ ಇಬ್ಬರೂ ನಾಯಕರು ಮಾತುಕತೆ ನಡೆಸಿದರು ಎಂಬುದು ಸದ್ಯಕ್ಕೆ ತಿಳಿದುಬಂದಿಲ್ಲ. ಬಳಿಕ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ನೇಮಕಾತಿಗೆ ಸಂಬಂಧಿಸಿದ ಆಯ್ಕೆ ಸಮಿತಿ ಸಭೆಯಲ್ಲಿ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ಭಾಗವಹಿಸಿದ್ದರು.

### ಬದಲಾವಣೆ ಕುರಿತ ಚರ್ಚೆ

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತ ಚರ್ಚೆ ತೀವ್ರಗೊಂಡಿದ್ದು, ಮುಖ್ಯಮಂತ್ರಿ ಆಪ್ತರು ಹಾಗೂ ಉಪ ಮುಖ್ಯಮಂತ್ರಿ ಆಪ್ತರು ಕಾಂಗ್ರೆಸ್ ವರಿಷ್ಠರನ್ನು ಭೇಟಿ ಮಾಡುತ್ತಿದ್ದಾರೆ. ಅಲ್ಲದೆ, ಸಂಪುಟ ಪುನಾರಚನೆಗೂ ಶಾಸಕರು ಮನವಿ ಮಾಡಿದ್ದಾರೆ. ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ಹೈ ಕಮಾಂಡ್ನಿಂದ ಸ್ಪಷ್ಟ ಸಂದೇಶ ರವಾನೆಯಾಗದಿರುವುದು ಗೊಂದಲಕ್ಕೆ ಎಡೆ ಮಾಡಿಕೊಟ್ಟಿದೆ.



### ರಾಹುಲ್ ಸೂಚನೆಗೂ ಬದ್ಧ

ಸಿಎಂ ಜೊತೆಗೆ ಸಭೆ ಮಾಡಿದಾಗಲೂ ಒಪನ್ ಮೈಂಡ್‌ನಲ್ಲಿ ಇದ್ದಾರೆ. ರಾಹುಲ್ ಗಾಂಧಿ ಸೂಚನೆ ಪಾಲನೆ ಮಾಡುತ್ತೇನೆ, ಆಗ ನಿಮ್ಮೆಲ್ಲರ ಸಹಕಾರ ಇರಬೇಕು ಎಂಬುದು ಸಿಎಂ ಅಭಿಮತವಾಗಿದೆ. ಏನು ತೀರ್ಮಾನ ರಾಹುಲ್ ಗಾಂಧಿ ಕೊಡ್ತಾರೆ ಅದರಂತೆ ನಡೆ–ಯೋಣ. ಅಧಿಕಾರ ಶಾಶ್ವತವಲ್ಲ, ಅಧಿಕಾರ ಕಳೆದುಕೊಂಡವರು ಗಳಿಸ್ತಾರೆ. ಸಿಎಂ ಮನಸ್ಥಿತಿ ರಾಹುಲ್ ನಿರ್ದೇಶನದಂತೆ ಹೋಗಬೇಕು ಎಂಬುದಾಗಿದೆ ಎಂದಿದ್ದಾರೆ ರಾಜಣ್ಣ.

### ಪದ ತ್ಯಾಗಕ್ಕೂ ಸಿದ್ಧ

ಸಿದ್ದರಾಮಯ್ಯ ಅಧಿಕಾರ ಮುಂದುವರಿಕೆಗೂ ಸಿದ್ಧ ಅಥವಾ ಪದತ್ಯಾಗಕ್ಕೂ ಸಿದ್ಧರಿದ್ದಾರೆ ಎಂದು ಮಾಜಿ ಸಚಿವ ಕೆಎನ್‌ರಾಜಣ್ಣ ಸ್ಫೋಟಕ ಹೇಳಿಕೆ ನೀಡಿದ್ದಾ–ರೆ. ಬೆಂಗಳೂರಿನಲ್ಲಿ ಮಂಗಳವಾರ ಮಾತನಾಡಿದ ಅವರು, ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಮಹತ್ವದ ಮಾಹಿತಿ ಹಂಚಿಕೊಂಡರು. ರಾಜ್ಯದಲ್ಲಿ ನಾಯಕತ್ವಕ್ಕೆ ಸಂಬಂಧಿಸಿದಂತೆ ನಡೆಯುತ್ತಿರುವ ಬೆಳವಣಿಗೆ ಹಿನ್ನೆಲೆಯಲ್ಲಿ ಹೈಕಮಾಂಡ್ ಗೊಂದಲ ಬಗೆಹರಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

### ಹೈ ಗೊಂದಲ ಬಗೆಹರಿಸ್ಬೇಕು

ರಾಜ್ಯ ಕಾಂಗ್ರೆಸ್ನಲ್ಲಿ ಉಂಟಾಗಿರುವ ಗೊಂದಲವನ್ನು ಹೈಕಮಾಂಡ್ ಬಗೆಹರಿಸಬೇಕು. ಗೊಂದಲ ಬಗೆಹರಿಸಿದಷ್ಟು ರಾಜ್ಯಕ್ಕೆ ಒಳ್ಳೆಯದು. ಗೊಂದಲ ಮುಂದುವರಿಯಲು ಹೈಕಮಾಂಡ್ ಅವಕಾಶ ನೀಡಬಾರದು. ನಾಯಕತ್ವ ಬದಲಾವಣೆ ಆತುರದಲ್ಲಿ ತೆಗೆದುಕೊಳ್ಳುವ ನಿರ್ಧಾರ ಅಲ್ಲ. ಪಕ್ಷದ ಭವಿಷ್ಯ ಇದರಲ್ಲಿ ಅಡಗಿರುತ್ತದೆ. ಸೂಕ್ತ ನಿರ್ಧಾರ ಹೈಕಮಾಂಡ್ ತೆಗೆದುಕೊಳ್ಳುವ ವಿಶ್ವಾಸವಿದೆ ಎಂದಿದ್ದಾರೆ ರಾಜಣ್ಣ.

## ಸಮಾನತೆಯ ಹರಿಕಾರ ಬಸವಣ್ಣ

• ಮಲ್ಲಮ್ಮ ನುಡಿ ವಾರ್ತೆ ಚಿತ್ತಾಪುರ

ಬ್ರಿಟನ್ ದೇಶದವರು ತಮ್ಮ ಸಂಸತ್ ಪ್ರಥಮ ಎನ್ನುವರು ಆದರೆ ಅದಕ್ಕೂ ಮೊದಲೇ ಕರುನಾಡಿನಲ್ಲಿ ವಿವಿಧ ವರ್ಗಗಳ ಶರಣರ ಅಭಿಪ್ರಾಯ ಪಡೆದು, ಎಲ್ಲರಿಗೂ ಮಾನ್ಯತೆ ನೀಡಿದ ಸಮಾನತೆಯ ಹರಿಕಾರ ಬಸವಣ್ಣನವರು ಜಗತ್ತಿನಲ್ಲಿಯೇ ಪ್ರಪ್ರಥಮ ಪಾರ್ಲಿಮೆಂಟ್ ಅನುಭವ ಮಂಟಪ ನಿರ್ಮಿಸಿದರು ಎಂದು ಲೇಖಕಿ ಪೂಜಾ ಆರ್. ಭಂಕಲಗಿ ಹೇಳಿದ್ದಾರೆ.

ಪಟ್ಟಣದ ಭಾಗೋಡಿ ಗ್ರಾಮದ ಶಾಂತಲಿಂಗೇಶ್ವರ ಮಠದಲ್ಲಿ ಹಮ್ಮಿಕೊಂಡಿದ್ದ ವಿಶ್ವಗುರು ಬಸವಣ್ಣನವರ 893ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಮಾತನಾಡಿದ ಅವರು, ದೇಶದಲ್ಲಿ ಆರ್ಯರು ಬರೋಕೆ ಮುಂಚೆ ನಮ್ಮಲ್ಲಿ ಒಗ್ಗಟ್ಟು ಇತ್ತು. ಅವರು ಬಂದ ಮೇಲೆ ಒಡೆದು ಆಳ್ತಾ ಇದ್ದಾರೆ, ಅವರು ಒಡೆದು ಆಳುವುದೇ ಧರ್ಮ ಮಾಡಿದ್ದಾರೆ ಎಂದಿದ್ದಾರೆ.

ಬುದ್ಧ, ಬಸವಣ್ಣ, ಅಂಬೇಡ್ಕರ್ ಮೂವರು ಜಾತಿ ಪದ್ಧತಿ, ಅಸಮಾನತೆ ವಿರುದ್ಧ ಹೋರಾಡಿದವರು. ಆದರೆ ದುರ್ದೈವ ಇನ್ನೂ ಅದು ಚಾಲ್ತಿಯಲ್ಲಿ ಇದೆ ಎಂದು

## ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಡಿಎಪಿ, ಯುರಿಯಾ ಜತೆ ಇತರ ಉತ್ಪನ್ನಗಳನ್ನು ಒತ್ತಾಯಪೂರ್ವಕವಾಗಿ ಜೋಡಣೆ ಮಾಡುವುದನ್ನು ನಿಲ್ಲಿಸಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಸಗೊಬ್ಬರ, ಕೀಟನಾಶಕ ಹಾಗೂ ಬೀಜ ಮಾರಾಟಗಾರರು ಜಿಲ್ಲೆಯಲ್ಲಿ ಸೋಮವಾರ ಅಂಗಡಿ ಬಂದ್ ಮಾಡಿ ಪ್ರತಿಭಟನೆ ನಡೆಸಿದ್ದಾರೆ.

ಬೀದರ್ ಸೇರಿದಂತೆ ಜಿಲ್ಲೆಯ ಎಲ್ಲೆಡೆ ಬೆಳಿಗ್ಗೆಯಿಂದಲೇ ಅಂಗಡಿಗಳು ಮುಚ್ಚಿದ್ದವು. ಹೀಗಾಗಿ ರೈತರು ರಸಗೊಬ್ಬರ,



ಬೀಜ ಹಾಗೂ ಕೀಟನಾಶಕಕ್ಕಾಗಿ ಪರದಾಡುವಂತಾಯಿತು.

ಜಿಲ್ಲಾ ಆಗ್ರೋ ಇನ್ಪುಟ್ ಡೀಲರ್ಸ್ ಅಸೋಸಿಯೇಷನ್ ಪದಾಧಿಕಾರಿಗಳು ನಿಯೋಗದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಅವರನ್ನು ಭೇಟಿ ಮಾಡಿ ಬೇಡಿಕೆಗಳ ಪತ್ರ ಸಲ್ಲಿಸಿದ್ದಾರೆ.

## ಬಿಜೆಪಿ ಯುವ ಮೋರ್ಚಾ ಪ್ರತಿಭಟನೆ, ಸೆರೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

2020ರ ದೆಹಲಿ ದಂಗೆ ಪ್ರಕರಣದಲ್ಲಿ ಯುಎಪಿಎ ಕಾಯ್ದೆಯಡಿ ತಿಹಾರ್ ಜೈಲಿನಲ್ಲಿರುವ ಉಗ್ರ ಉಮರ್ ಖಾಲಿದ್ ಕುರಿತ ಪುಸ್ತಕ ಬಿಡುಗಡೆಗೆ ರಾಜ್ಯ ಸರ್ಕಾರ ಅವಕಾಶ ನೀಡಿದ್ದನ್ನು ವಿರೋಧಿಸಿ ಬಿಜೆಪಿ ರಾಜ್ಯ ಯುವ ಮೋರ್ಚಾ ವತಿಯಿಂದ ಇಂದು ದೊಮ್ಮಲೂರಿನ ಬೆಂಗಳೂರು ಇಂಟ–ರ್ ನ್ಯಾಷನಲ್ ಸೆಂಟರ್ ಬಳಿ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನಾನಿರತರನ್ನು ಪೊಲೀಸರು ಬಂಧಿಸಿದ್ದಾರೆ.

ಕಾರ್ಯಕ್ರಮಕ್ಕೆ ಅನುಮತಿ ನೀಡದಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ಮನವಿ ನಿನ್ನೆ ಮಾಡಲಾಗಿತ್ತು. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಸಂಸದ ಪಿ.ಸಿ ಮೋಹನ್ ಅವರು, ದೇಶದ್ರೋಹಿ ಉಮರ್ ಖಾಲಿದ್ 2020ರ ದೆಹಲಿ ದಂಗೆಯ ಪ್ರಮುಖ ಆಪಾದಿತ. ಅಂದು ನಡೆದ ಸ್ಫೋಟದಲ್ಲಿ ಸಾಕಷ್ಟು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಆಸ್ತಿ–ಪಾಸ್ತಿಗೆ ಹಾನಿಯಾಗಿದೆ ಎಂದಿದ್ದಾರೆ.

**ದೇಶದ್ರೋಹಿಗಳ ವಿರುದ್ಧ ಕ್ರಮ ಎಂದು?**



### ದೆಹಲಿಯ ಗಲಭೆ ಕೋರ

ಭಯೋತ್ಪಾದಕರ ಕುರಿತು ಪುಸ್ತಕ ಬಿಡುಗಡೆಗೆ ಸಿದ್ಧತೆ ನಡೆದಿದೆ. 2020ರ ಫೆಬ್ರವರಿಯಲ್ಲಿ ನಡೆದ ದೆಹಲಿ ಗಲಭೆ ಸಂಬಂಧ ಸುಪ್ರೀಂ ಕೋರ್ಟ್ ಇವರಿಬ್ಬರ ಜಾಮೀನು ಅರ್ಜಿಯನ್ನು ವಜಾಗೊಳಿಸಿದೆ. ಶಾರ್ಜೀಲ್ ಇಮಾಮ್ ನನ್ನು ಸಿಎಎ ಮತ್ತು ಎನ್‌ಆರ್‌ಸಿ ವಿರೋಧಿ ಪ್ರತಿಭಟನೆಗಳ ಸಂದರ್ಭದಲ್ಲಿ ಮಾಡಿದ ಭಾಷಣಗಳಿಗಾಗಿ ಬಂಧಿಸಲಾಗಿದೆ. ಈಗ ಇವರ ಬಗ್ಗೆಯೇ ಪುಸ್ತಕ ಬಿಡುಗಡೆ ಮಾಡಲಾಗುತ್ತಿದೆ ಎಂದು ಆಕ್ಷೇಪಿಸಿದ್ದಾರೆ.


ದೇಶದ್ರೋಹಿಗಳನ್ನು ವೈಭವೀಕರಿಸಲು ಕಾಂಗ್ರೆಸ್ ಸರ್ಕಾರ ಬೆಂಬಲ ನೀಡುತ್ತದೆ. ಗಾಂಧಿನಗರದ ಗೋಡೆಗಳ ಮೇಲೆ ಬರಹಗಳನ್ನು ಬರೆದಿದ್ದಾರೆ. ಈ ಸರ್ಕಾರ ಇಂತಹುದಕ್ಕೆಲ್ಲ ಅವಕಾಶ ನೀಡಬಾರದು. ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಜರುಗಿಸಬೇಕು ಎಂದು ಪಿಸಿ ಮೋಹನ್ ಆಗ್ರಹಿಸಿದ್ದಾರೆ.

## ಕೆ.ಎಸ್.ಡಿ.ಎಲ್ 507 ಕೋಟಿ ಲಾಭ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನೂರತ್ತು ವರ್ಷಗಳ ಇತಿಹಾಸ ವಿರುವ, ಸರಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತವು (ಕೆಎಸ್‌ಡಿಎಲ್) 2025–26ನೇ ಹಣಕಾಸು ವರ್ಷದಲ್ಲಿ ಇದೇ ಮೊದಲ ಬಾರಿಗೆ 2,016 ಕೋಟಿ ರೂ. ವಹಿವಾಟು ನಡೆಸಿದ್ದು, 507 ಕೋಟಿ ರೂ. ಲಾಭ ಗಳಿಸಿದೆ. ಇದು ಸಂಸ್ಥೆಯ ಪಾಲಿಗೆ ಚಾರಿತ್ರಿಕ ಮೈಲುಗಲ್ಲಾಗಿದ್ದು, ಸಾರ್ವಜನಿಕ ಉದ್ದಿಮೆಗಳ ಸಾಧನೆಯಲ್ಲಿ ಕಿರೀಟಪ್ರಾಯವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಮಂಗಳವಾರ ಹೇಳಿದ್ದಾರೆ.

ಸಂಸ್ಥೆಯ ಈ ಅಪೂರ್ವ ಸಾಧನೆಯ ಸಂಭ್ರಮಾಚರಣೆಯ ನಿಮಿತ್ತವಾಗಿ ನಗರದ ಖಾಸಗಿ ಹೋಟೆಲಿನಲ್ಲಿ ಏರ್ಪಡಿಸಿದ್ದ ಮೈಸೂರು ಸ್ಯಾಂಡೆಲ್ ನ ಸಾಧನೆಯ ಶಿಖರ ಕಾರ್ಯಕ್ರಮದಲ್ಲಿ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾಡಿದ್ದಾರೆ.





**2022–23ರಲ್ಲಿ 1,375 ಕೋಟಿ ರೂ. ವಹಿವಾಟು**

ಸಂಸ್ಥೆಯು ಮೊದಲ ಒಂದು ಸಾವಿರ ಕೋಟಿ ರೂ.ಗಳ ವಹಿವಾಟನ್ನು ತಲುಪಲು 105 ವರ್ಷ ತೆಗೆದುಕೊಂಡಿತ್ತು. ಆದರೆ, ಅಲ್ಲಿಂದ 2 ಸಾವಿರ ಕೋಟಿ ರೂ. ಮಟ್ಟವನ್ನು ಕೇವಲ ನಾಲ್ಕು ವರ್ಷಗಳಲ್ಲಿ ತಲುಪಿದೆ. ಅದರಲ್ಲೂ 2022–23ರಲ್ಲಿ 1,375 ಕೋಟಿ ರೂ. ವಹಿವಾಟು ನಡೆಸಿದ್ದ ಸಂಸ್ಥೆಯು, ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಕಳೆದ ಮೂರು ವರ್ಷಗಳಲ್ಲಿ 2,016 ಕೋಟಿ ರೂ. ತಲುಪಿದೆ. ಇಷ್ಟು ಅಲ್ಪಾವಧಿಯಲ್ಲಿ ಕೆ.ಎಸ್.ಡಿ.ಎಲ್ ವಹಿವಾಟು 641 ಕೋಟಿ ರೂ.ಗಳನ್ನು ಹೆಚ್ಚಳ ಕಂಡಿದೆ ಎಂದಿದ್ದಾರೆ ಸಚಿವ.

**ಕಲಬುರಗಿಯಲ್ಲಿ ತಳವಾರ ಸಮುದಾಯದವರಿಗೆ ಪರಿಶಿಷ್ಟ ಪಂಗಡ ಪ್ರಮಾಣ ಪತ್ರಕ್ಕಾಗಿ ಹೋರಾಟ ನಡೆಸುತ್ತಿದ್ದವರ ಮೇಲೆ ಲಾಠಿ ಪ್ರಹಾರ ಮಾಡಿದ್ದು ಸಲ್ಲ: ಎನ್ ರವಿಕುಮಾರ್**

# ತಕ್ಷಣವೇ ಅತಿಥಿ ಶಿಕ್ಷಕರ ವೇತನ ಬಿಡುಗಡೆಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಕೆಕೆಆರ್‌ಡಿಬಿ ಅಡಿಯಲ್ಲಿ ಭಾಲ್ಕಿ ತಾಲೂಕಿನ 25 ಇಸಿಸಿಇ ಶಾಲೆಗಳಲ್ಲಿ 2025–26ನೇ ಸಾಲಿಗೆ ಆಯ್ಕೆಯಾದ ಪೂರ್ವ ಪ್ರಾಥಮಿಕ (LKG/UKG) ಅತಿಥಿ ಶಿಕ್ಷಕರು ಹಾಗೂ ಆಯಾಗಳು ಕಳೆದ 10 ತಿಂಗಳಿನಿಂದ ಸಂಭಾವನೆ ಸಿಗದೆ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ತಕ್ಷಣವೇ ಬಾಕಿ ವೇತನ ಬಿಡುಗಡೆ ಮಾಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜೂನ್ 2025ರಿಂದ ಮಾರ್ಚ್ 2026ರವರೆಗೆ ಇಲಾಖೆಯ ನಿಯಮಾನುಸಾರ ಮಕ್ಕಳಿಗೆ ಬೋಧನೆ ನಡೆಸಿ, ಹಾಜರಾತಿ ಹಾಗೂ ಅಗತ್ಯ ದಾಖಲೆಗಳನ್ನು ಪ್ರತಿತಿಂಗಳು ಸಲ್ಲಿಸಿದ್ದರೂ, ಶಿಕ್ಷಕರಿಗೆ ರೂ.12,000 ಹಾಗೂ ಆಯಾಗಳಿಗೆ ರೂ.6,250 ಮಾಸಿಕ ಸಂಭಾವನೆ ಇದುವರೆಗೆ ಮಂಜೂರಾಗಿಲ್ಲ ಎಂದು ಅವರು ಅಳಲು ವ್ಯಕ್ತಪಡಿಸಿದ್ದಾರೆ.

ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರ ಗಮನಕ್ಕೂ ವಿಷಯ ತಂದಿದ್ದರೂ, ಇನ್ನೂ ವೇತನ ಬಿಡುಗಡೆ ಆಗದಿರುವುದು ಬೇಸರಕ್ಕೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ.

ಮಕ್ಕಳ ಭವಿಷ್ಯ ರೂಪಿಸುವ ಸೇವೆಯಲ್ಲಿ ತೊಡಗಿರುವ ಶಿಕ್ಷಕರು ಮತ್ತು ಆಯಾಗಳ ಶ್ರಮಕ್ಕೆ ನ್ಯಾಯ ದೊರಕಬೇಕಿದ್ದು, ಕಳೆದ 10 ತಿಂಗಳ ಬಾಕಿ ಸಂಭಾವನೆಯನ್ನು ತಕ್ಷಣ ಬಿಡುಗಡೆ ಮಾಡಿ ಕುಟುಂಬಗಳ ಸಂಕಷ್ಟ ನಿವಾರಿಸಬೇಕೆಂದು ಮನವಿ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಅತಿಥಿ ಶಿಕ್ಷಕರುಗಳಾದ ಸುವರ್ಣಾ, ಜ್ಯೋತಿ, ಮುತ್ತಮ್ಮಾ, ಉಜ್ವಲಾ, ಸಮೀನಾ, ಮಂಜುಳಾ, ಭಾಗ್ಯಶ್ರೀ, ಪೂಜಾ, ಸ್ವೇತಾ, ಮೇಘಾ, ಹೀನಾ, ದತ್ತಾತ್ರಿ ಕಾಟಕರ, ಗಣಪತಿ ಭಕ್ತಾ, ನಿರಂಜಪ್ಪ ಪಾತ್ರೆ, ಸತ್ಯಾವಾನ ಕಾಂಬಳೆ, ಚಂದ್ರಕಾಂತ ತಳವಾಡೆ ಹಾಗೂ ಮುಖ್ಯ ಗುರುಗಳು, ಸಹ ಶಿಕ್ಷಕರು ಹಾಗೂ ಮತ್ತಿತರರು ಅನೇಕರು ಉಪಸ್ಥಿತರಿದ್ದರು.

# ಕಾಲು ಬಾಯಿ ರೋಗ ತಡೆಗೆ ಲಸಿಕೆ ಹಾಕಿಸಿ: ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ, ಔರಾದ



ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಘಮಸುಬಾಯಿ ತಾಂಡಾ, ಬೋಂತಿ ಗೃಹ ಕಛೇರಿಯಲ್ಲಿ ಕಾಲುಬಾಯಿ ರೋಗ ತಡೆಗಟ್ಟುವ 9ನೇ ಸುತ್ತಿನ ಲಸಿಕಾ ಅಭಿಯಾನಕ್ಕೆ ಸೋಮವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಲುಬಾಯಿ ರೋಗವು ಪಶುಗಳಲ್ಲಿ ಅತ್ಯಂತ ವೇಗವಾಗಿ ಹರಡುವ ಸಾಂಕ್ರಾಮಿಕ ರೋಗವಾಗಿದ್ದು, ಹಸು, ಎಮ್ಮೆ, ಕುರಿ, ಮೇಕೆ ಸೇರಿದಂತೆ ವಿವಿಧ ಜಾನುವಾರುಗಳಿಗೆ ತೀವ್ರ ಹಾನಿ ಉಂಟುಮಾಡುತ್ತದೆ ಎಂದು ಹೇಳಿದರು.

ಈ ರೋಗದಿಂದ ಹಾಲು ಉತ್ಪಾದನೆ ಕಡಿಮೆಯಾಗುವುದು, ಪಶುಗಳ ಆರೋಗ್ಯ ಹದಗೆಡುವುದು ಮತ್ತು ರೈತರ ಆದಾಯಕ್ಕೆ ದೊಡ್ಡ ಹೊಡೆತ ಬೀಳುತ್ತದೆ.

ಹಾಗಾಗಿ ಲಸಿಕೆ ನೀಡುವುದು ಅತ್ಯಂತ ಅವಶ್ಯಕ. ಇದು ಪರಿಣಾಮಕಾರಿ ಮತ್ತು ಸುರಕ್ಷಿತ ಲಸಿಕೆಯಾಗಿದೆ. ಲಸಿಕೆ ನೀಡುವುದರಿಂದ ಪಶುಗಳ ಆರೋಗ್ಯ ಕಾಪಾಡಿಕೊಳ್ಳುವುದರ ಜೊತೆಗೆ ರೈತರ ಆರ್ಥಿಕ ನಷ್ಟವನ್ನು ತಪ್ಪಿಸಲು ಸಹಾಯವಾಗುತ್ತದೆ ಎಂದು ಹೇಳಿದರು.

ಲಸಿಕಾ ಅಭಿಯಾನವನ್ನು ಯಾವುದೇ ನಿರ್ಲಕ್ಷ್ಯವಿಲ್ಲದೆ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಂತೆ ಪಶು ವೈದ್ಯಾಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ ಅವರು,

ವ್ಯಾಪ್ತಿಯಲ್ಲಿನ ಪ್ರತಿಯೊಂದು ಹಳ್ಳಿಯಲ್ಲಿಯೂ ಎಲ್ಲಾ ಜಾನುವಾರುಗಳಿಗೆ ಲಸಿಕೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು. ರೈತರು ಈ ಅಭಿಯಾನಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಬಿಸಿಲಿನ ತಾಪಮಾನ ಹೆಚ್ಚುತ್ತಿರುವುದರಿಂದ ರೈತರು ತಮ್ಮ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಹೆಚ್ಚು ನೀರು ಕುಡಿಯಿರಿ, ನೆರಳಿನಲ್ಲಿ ವಿಶ್ರಾಂತಿ ಪಡೆಯಿರಿ. ಜಾನುವಾರುಗಳನ್ನು ತೀವ್ರ ಬಿಸಿಲಿಗೆ ಬಿಡದೇ, ತಂಪಾದ ಸ್ಥಳದಲ್ಲಿ ಇರಿಸಿ ಮತ್ತು ಸಾಕಷ್ಟು ನೀರು ಒದಗಿಸಬೇಕೆಂದು ಶಾಸಕರು ವಿನಂತಿಸಿದ್ದಾರೆ.

ಈ ಸಂದರ್ಭದಲ್ಲಿ ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಫಾಹೀಮ್ ಖುರೇಶಿ, ಡಾ.ಜಕಿಯೋದ್ದಿನ್, ಧನರಾಜ ಸೂರ್ಯವಂಶಿ, ಅನೀಲ ಸೇರಿದಂತೆ ಅಧಿಕಾರಿಗಳು, ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

## ವಿದ್ಯಾರ್ಥಿಗಳಿಗೆ ಮಾರ್ಕ್ಸ್ ಪಡೆಯುವಂತೆ ಒತ್ತಡ ಹೇರಬಾರದು

**ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳ ಜ್ಞಾನಕ್ಕಿಂತ ಅಂಕಗಳಿಗೆ ಹೆಚ್ಚು ಮಹತ್ವ ನೀಡಲಾಗುತ್ತಿದೆ. ಶಾಲೆ, ಕಾಲೇಜು, ಪೋಷಕರು ಹಾಗೂ ಸಮಾಜ ಎಲ್ಲರೂ ವಿದ್ಯಾರ್ಥಿಯ ಸಾಮರ್ಥ್ಯವನ್ನು ಅಳೆಯುವ ಮಾನದಂಡವಾಗಿ "ಮಾರ್ಕ್ಸ್" ಅನ್ನು ಮಾತ್ರ ಪರಿಗಣಿಸುತ್ತಿದ್ದಾರೆ. ಇದರ ಪರಿಣಾಮವಾಗಿ ವಿದ್ಯಾರ್ಥಿಗಳ ಮೇಲೆ ಅತಿಯಾದ ಮಾನಸಿಕ ಒತ್ತಡ ಉಂಟಾಗುತ್ತಿದೆ. ಇದು ಆರೋಗ್ಯಕರ ಶಿಕ್ಷಣ ಪದ್ಧತಿ ಅಲ್ಲ.**

**ಪ್ರತಿಯೊಬ್ಬ ವಿದ್ಯಾರ್ಥಿಯೂ ಒಂದೇ ರೀತಿಯ ಪ್ರತಿಭೆಯನ್ನು ಹೊಂದಿರುವುದಿಲ್ಲ. ಕೆಲವರು ಪಾಠದಲ್ಲಿ ಉತ್ತಮರಾಗಿದ್ದರೆ, ಕೆಲವರು ಕ್ರೀಡೆ, ಕಲೆ, ವಿಜ್ಞಾನ, ತಂತ್ರಜ್ಞಾನ, ಸಂಗೀತ ಅಥವಾ ಸಾಮಾಜಿಕ ಸೇವೆಯಲ್ಲಿ ತಮ್ಮದೇ ಆದ ವಿಶಿಷ್ಟ ಸಾಮರ್ಥ್ಯವನ್ನು ತೋರಿಸುತ್ತಾರೆ. ಆದರೆ ಕೇವಲ ಅಂಕಗಳನ್ನು ಆಧಾರವನ್ನಾಗಿ ಮಾಡಿಕೊಂಡು ಅವರ ಭವಿಷ್ಯವನ್ನು ನಿರ್ಧರಿಸುವುದು ಅನ್ಯಾಯವಾಗಿದೆ.**

**ಹೆಚ್ಚು ಅಂಕಗಳನ್ನು ತರುವ ಒತ್ತಡದಿಂದ ಹಲವಾರು ವಿದ್ಯಾರ್ಥಿಗಳು ಆತಂಕ, ನಿರಾಶೆ ಹಾಗೂ ಮಾನಸಿಕ ಕುಗ್ಗುವಿಕೆಗೆ ಒಳಗಾಗುತ್ತಿದ್ದಾರೆ. ಕೆಲವೊಮ್ಮೆ ಇದು ಆತ್ಮಹತ್ಯೆಯಂತಹ ದುರ್ಘಟನೆಗಳಿಗೂ ಕಾರಣವಾಗುತ್ತಿದೆ. ಶಿಕ್ಷಣವು ಜೀವನ ನಿರ್ಮಾಣಕ್ಕೆ ದಾರಿ ತೋರಬೇಕೇ ಹೊರತು, ಜೀವಕ್ಕೆ ಅಪಾಯವಾಗಬಾರದು. ಪೋಷಕರು ತಮ್ಮ ಮಕ್ಕಳನ್ನು ಇತರರೊಂದಿಗೆ ಹೋಲಿಕೆ ಮಾಡುವ ಬದಲು, ಅವರ ಆಸಕ್ತಿ ಮತ್ತು ಸಾಮರ್ಥ್ಯವನ್ನು ಗುರುತಿಸಬೇಕು. ಶಿಕ್ಷಕರು ಸಹ ವಿದ್ಯಾರ್ಥಿಗಳಿಗೆ ಭಯ ಹುಟ್ಟಿಸುವ ಬದಲು ಪ್ರೋತ್ಸಾಹ ನೀಡಬೇಕು. ಪರೀಕ್ಷೆ ಜೀವನದ ಒಂದು ಭಾಗ ಮಾತ್ರ, ಸಂಪೂರ್ಣ ಜೀವನವಲ್ಲ ಎಂಬ ಅರಿವು ಮೂಡಿಸಬೇಕು.**

**ಸರ್ಕಾರವೂ ಶಿಕ್ಷಣ ನೀತಿಯಲ್ಲಿ ಅಂಕಾಧಾರಿತ ಸ್ಪರ್ಧೆ ಕಡಿಮೆ ಮಾಡಿ ಕೌಶಲ್ಯ, ಸೃಜನಶೀಲತೆ ಹಾಗೂ ವ್ಯಕ್ತಿತ್ವ ವಿಕಾಸಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳ ಮನೋಸ್ಥೈರ್ಯ ಕಾಪಾಡಲು ಸಮಾಲೋಚನಾ ವ್ಯವಸ್ಥೆ ಬಲಪಡಿಸಬೇಕು. ಮಾರ್ಕ್ಸ್ ಮುಖ್ಯವೇ ಸರಿ, ಆದರೆ ಅದು ಜೀವನದ ಅಂತಿಮ ಗುರಿಯಲ್ಲ. ಉತ್ತಮ ಮನುಷ್ಯನಾಗುವುದು, ಸಮಾಜಕ್ಕೆ ಕೊಡುಗೆ ನೀಡುವುದು ಮತ್ತು ಸಂತೋಷದಿಂದ ಬದುಕುವುದು ಇನ್ನಷ್ಟು ಮುಖ್ಯ. ಆದ್ದರಿಂದ ವಿದ್ಯಾರ್ಥಿಗಳಿಗೆ ಕೇವಲ ಅಂಕಗಳಿಗಾಗಿ ಒತ್ತಡ ಹೇರದೆ, ಅವರ ಸಮಗ್ರ ಬೆಳವಣಿಗೆಗೆ ಪ್ರಾಮುಖ್ಯತೆ ನೀಡುವುದು ಕಾಲದ ಅಗತ್ಯವಾಗಿದೆ.**

# ಬಿಸಿಲಿನ ತಾಪಮಾನ ಬಗ್ಗೆ ಎಚ್ಚರಿಕೆ ವಹಿಸದಿದ್ದರೆ ಜೀವಕ್ಕೆ ಹಾನಿ: ಸಚಿನ್ ಗುದಗೆ

• ಮಲ್ಲಮ್ಮ ನುಡಿ ವಾರ್ತೆ, ಬೀದರ



ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಬಿಸಿಲಿನ ತಾಪಮಾನ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಆರೋಗ್ಯದ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಬೇಕೆಂದು ಗುದಗೆ ಆಸ್ಪತ್ರೆಯ ಹಿರಿಯ ವೈದ್ಯರಾದ ಡಾ. ಸಚಿನ್ ಗುದಗೆ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಉಷ್ಣಾಂಶ ಏರಿಕೆಯಿಂದ ಜನರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ವಿಶೇಷವಾಗಿ ಸಣ್ಣ ಮಕ್ಕಳು, ವೃದ್ಧರು ಹಾಗೂ ಗರ್ಭಿಣಿಯರು ಹೆಚ್ಚಿನ ಜಾಗ್ರತೆ ವಹಿಸಬೇಕು ಎಂದು ತಿಳಿಸಿದ್ದಾರೆ.

ಬಿಸಿಲಿನ ತೀವ್ರತೆಯಿಂದ ಸನ್‌ಸ್ಟ್ರೋಕ್, ಮೂಗಿನಿಂದ ರಕ್ತಸ್ರಾವ, ರಕ್ತದೊತ್ತಡದಲ್ಲಿ ಏರುಪೇರು, ಬಾಯಾರಿಕೆ, ತಲೆಸುತ್ತು, ಸಕ್ಕರೆ ಕಾಯಿಲೆಯಲ್ಲಿ ಅಸ್ಥಿರತೆ ಹಾಗೂ ನಿಂತಲ್ಲೇ ತಲೆಸುತ್ತಿ ಕುಸಿದು ಬೀಳುವಂತಹ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇದೆ ಎಂದು ಎಚ್ಚರಿಕೆ ನೀಡಿದ್ದಾರೆ. ಅತಿಯಾದ ಬಿಸಿಲಿನ ಸಮಯದಲ್ಲಿ ಅನಗತ್ಯವಾಗಿ ಹೊರಗೆ ಸಂಚರಿಸುವುದನ್ನು ತಪ್ಪಿಸಬೇಕು.

ಸಾಕಷ್ಟು ನೀರು, ಮಜ್ಜಿಗೆ, ಹಣ್ಣು ರಸ ಹಾಗೂ ದ್ರವ ಆಹಾರಗಳನ್ನು ಸೇವಿಸುವುದು ಆರೋಗ್ಯದ ದೃಷ್ಟಿಯಿಂದ ಅಗತ್ಯವಾಗಿದೆ ಎಂದು ಅವರು ಸಲಹೆ ನೀಡಿದ್ದಾರೆ. ಯಾರಿಗಾದರೂ ಬಿಸಿಲಿನ ತಾಪಮಾನದಿಂದ ಆರೋಗ್ಯ ಸಮಸ್ಯೆಗಳು ಕಂಡುಬಂದಲ್ಲಿ ತಕ್ಷಣ ತಜ್ಞ ವೈದ್ಯರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ಡಾ. ಸಚಿನ್ ಗುದಗೆ ತಿಳಿಸಿದ್ದಾರೆ.

# ಶೀಘ್ರದಲ್ಲಿ ಮಾಳೆಗಾಂವನಲ್ಲಿ ಆರೋಗ್ಯ ಕೇಂದ್ರ: ಖಾನ್

• ಮಲ್ಲಮ್ಮ ನುಡಿ ವಾರ್ತೆ, ಬೀದರ



ಮಾಳೆಗಾಂವ ಹಾಗೂ ಸುತ್ತಲಿನ ಗ್ರಾಮಗಳ ಜನರಿಗೆ ಅನುಕೂಲವಾಗುವ ದೃಷ್ಟಿಯಿಂದ ಮಾಳೆಗಾಂವನಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಆಸ್ಪತ್ರೆ ನಿರ್ಮಿಸಲಾಗುವುದು ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ತಿಳಿಸಿದರು. ಅವರು ಇಂದು ಬೀದರ ತಾಲ್ಲೂಕಿನ ಮಾಳೆಗಾಂವನಲ್ಲಿ ಜರುಗಿದ ಜನಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬಹುದಿನಗಳಿಂದ ಮಾಳೆಗಾಂವನಲ್ಲಿ ಆಸ್ಪತ್ರೆಯ ಬೇಡಿಕೆ ಇತ್ತು, ಗ್ರಾಮದಲ್ಲಿ ಈಗಾಗಲೇ ಆಸ್ಪತ್ರೆಗೆ ಭೂಮಿ ಮಂಜೂರಾಗಿದ್ದು, 5 ಕೋಟಿ ರೂ. ಅನುದಾನವು ಸಹ ಬಿಡುಗಡೆಯಾಗಿದೆ. 2 ತಿಂಗಳಲ್ಲಿ ಕಾಮಗಾರಿ ಆರಂಭಿಸಲಾಗುತ್ತದೆ ಎಂದು ಸಚಿವ ರಹೀಂ ಖಾನ್ ತಿಳಿಸಿದರು.

ಸರಕಾರವು ಜನರ ಸಮಸ್ಯೆಗಳನ್ನು ಆಲಿಸಿ ಇತ್ಯರ್ಥಪಡಿಸಲು ಜಿಲ್ಲಾಡಳಿತವೇ ಗ್ರಾಮಸ್ಥರ ಬಳಿ ತೆರಳುತ್ತಿದೆ, ಜನಸಾಮಾನ್ಯರ ಅಹವಾಲುಗಳನ್ನು ಸ್ಥಳದಲ್ಲೇ ಇತ್ಯರ್ಥಪಡಿಸಲಾಗುವುದೆಂದು ಅವರು ತಿಳಿಸಿದರು.

ಚಿಲ್ಲರ್ಗಿ ಸುತ್ತಲಿನ ಹಲವಾರು ಗ್ರಾಮಗಳ ರಸ್ತೆ ಹಾಗೂ ಸೇತುವೆ ಕಾಮಗಾರಿ ಆರಂಭಿಸಲಾಗಿದೆ. ವಿವಿಧ ಗ್ರಾಮಗಳ ರಸ್ತೆ ನಿರ್ಮಾಣಕ್ಕೆ 16 ಕೋಟಿ ರೂ. ಬಿಡುಗಡೆ ಮಾಡಲಾಗಿದೆಯೆಂದು ಸಚಿವರು ತಿಳಿಸಿದರು.


ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಸಾಕಷ್ಟು ರೈತರು ತಮ್ಮ ಹೊಲಗಳಿಗೆ ದಾರಿ ಮಾಡಿಕೊಡುವಂತೆ ಮನವಿ ಸಲ್ಲಿಸಿದ್ದಾರೆ. ಈ ಎಲ್ಲ ಹೊಲಗಳನ್ನು ಪರಿಶೀಲಿಸಿ ದಾರಿ ಮಾಡಿಕೊಡಲಾಗುವುದೆಂದರು.

ಬೀದರ ನಗರ ಅಭಿವೃದ್ಧಿಗೆ 500 ಕೋಟಿ ರೂ. ಅನುದಾನ ತರಲಾಗಿದೆ. ನಗರ ಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮಾಡಿ ಈಗಾಗಲೇ 200 ಕೋಟಿ ರೂ. ಅನದಾನ ನೀಡಲಾಗಿದೆ. 50 ಕೋಟಿ ರೂ. ವೆಚ್ಚಲದಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಿಸಲಾಗುವುದು. 40 ಕೋಟಿ ರೂ. ವೆಚ್ಚದಲ್ಲಿ ಮಕ್ಕಳ ಆಸ್ಪತ್ರೆ ನಿರ್ಮಿಸಲಾಗುವುದೆಂದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜನಸ್ಪಂದನಲ್ಲಿ ಸ್ವೀಕರಿಸಲಾದ ಎಲ್ಲ ಅರ್ಜಿಗಳನ್ನು ಪರಿಶೀಲಿಸಿ ಇತ್ಯರ್ಥಪಡಿಸಲಾಗುವುದು. ರಸ್ತೆ, ಚರಂಡಿ, ಹೊಲಕ್ಕೆ ದಾರಿ, ನೀರಿನ ಸಮಸ್ಯೆ, ನೀರಿನ ಟ್ಯಾಂಕ್ ನಿರ್ಮಾಣ ಸೇರಿದಂತೆ ಹಲವು ಅರ್ಜಿಗಳನ್ನು ಸ್ವೀಕೃತವಾಗಿವೆ ಎಂದರು.

ಗ್ರಾಮ ಮಟ್ಟದ ಅಧಿಕಾರಿಗಳು ಸ್ಥಳೀಯ ಸಮಸ್ಯೆಗಳನ್ನು ತಮ್ಮ ಹಂತದಲ್ಲಿಯೇ ಇತ್ಯರ್ಥಗೊಳಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಶರಣಬಸಪ್ಪಾ ಕೋಟೆಪ್ಪಗೋಳ, ಬೀದರ ಉಪ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಸಹಾಯಕ ಆಯುಕ್ತರಾದ ಮಹಮ್ಮದ ಶಕೀಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



ಬಸವಕಲ್ಯಾಣ: ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀ ಮಠದ ದಾಸೋಹ ಮನೆಯಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ 30ನೇ ಪಟ್ಟಾಧಿಕಾರ ಮಹೋತ್ಸವ ದಿನಾಚರಣೆ ಸರಳವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ
ಮಲ್ಲಿನಾಥ ಹಿರೇಮಠ ಹಾರಕೂಡ, ಅಲ್ಲಮಪ್ರಭು ಹಿರೇಮಠ ಹಾರಕೂಡ, ಹೇಮಲತಾ ಎಂ ಹಿರೇಮಠ, ನಿವೇದಿತ ಹಿರೇಮಠ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಜಗದೀಶ ಶುಕ್ಲಾ ನಿವೃತ್ತ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಇಲ್ಲಿನ ಬಸವ ನಗರದಲ್ಲಿ ಸುಭದ್ರಾ ನಿಲಯ ಗ್ರಹ ಪ್ರವೇಶ. ಸತಾಯುಷಿ ಮಾತೋಶ್ರೀ ಸುಭದ್ರಾಬಾಯಿ ಅವರ ತುಲಾಭಾರ ಮತ್ತು ಕೊಹಿನೂರ್ ಪಹಾಡದಲಿ ಮುಖ್ಯ ಗುರುಗಳಾಗಿ ಸೇವೆ ಸಲೀಸಿದ ಜಗದೀಶ ಶುಕ್ಲಾ ಅವರ ನಿವೃತಿಯ ಸನ್ಮಾನ ಸಮಾರಂಭದಲ್ಲಿ ತಡೋಳ. ಮೆಹಕರದ ಪೂಜ್ಯ ಶ್ರೀ ರಾಜೇಶ್ವರ ಶಿವಾಚಾರ್ಯ ರು ಭಾಗವಹಿಸಿ ಆಶೀರ್ವಾಚನ ನೀಡಿ ತಾಯಿ ಸೇವೆ ಎಷ್ಟೇ ಮಾಡಿದರು ಕಡಿಮೆ. ಅವರು ಮಾಡಿದ ಸೇವೆ ಯಾರು ಮಾಡ್ಲಿಕೆ ಸಾಧ್ಯ ವಿಲ್ಲಾ ಎಂದರು.

ಸತಾಯುಷಿ ಮಾತೋ ಶ್ರೀ ಸುಭದ್ರಾ ತಾಯಿ. ಮಾಜಿ ವಿಧಾನ ಪರಿಷತ್ತಿನ ಸದ್ಯಸರಾದ ವಿಜಯ್ ಸಿಂಗ್. ನಿವೃತ ಶಿಕ್ಷಕರಾದ ಕಾಶಪ್ಪ ಕೆ. ರಾಮ ಪ್ಯಾರಿ ಪಾಂಡೆ. ಸೂರಜ ಸಿಂಗ. ರಾಜಪೂತ ಭಾರತ ಸಿಂಗ್ ಚಂದ್ರಕಾಂತ ದುಬೆ.ಕಾಶೆಪ್ಪಾ ಹೊಲ್ಕಡೆ. ಈರಣ್ಣ ವಕೀಲ. ಶರಣಬಸಪ್ಪ ಪಿ. ಬಿರಾ ದಾರ. ಚನ್ನಬಸಪ್ಪ ಪತಂಗೆ. ಮುಖ್ಯ ಗುರುಗಳ ಸಂಘದ ಅಧ್ಯಕ್ಷರಾದ ಚಂದ್ರಕಾಂತ ಬಿರಾದಾರ. ಹಾಗೂ ಪದಾಧಿಕಾರಿಗಳು. ತಾಲೂಕ ಹಿಂದಿ ಶಿಕ್ಷಕರ ಸಂಘದ ಅಧ್ಯಕ್ಷರಾದ ನಾಗಪ್ಪ ನಿಣ್ಣೆ. ಹಾಗೂ ಪದಾಧಿಕಾರಿಗಳು. ಮಲ್ಲಿಕಾರ್ಜುನ ಛತ್ರೆ. ಬಾಲು ಪ್ರಸಾದ್ ಮಿಶ್ರ. ಯಶೋಧ ನೀಲಕಂಠ ರಾಠೋಡ ಸೇರಿದಂತೆ ಅನೇಕ ಅಭಿಮಾನಿ ಮಿತ್ರರು. ಹಿತ್ಯಸಿ ಗಳು. ಬಂದುಗಳು ಉಪಸ್ಥಿತರಿದ್ದರು. ಸಂಚಾಲನೆ ರಮೇಶ ರಾಜೋಳೆ ನಿರ್ವಹಿಸಿದರು.

# ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆಗೆ ಅಧಿಕಾರಿಗಳಿಗೆ ಬೆಲ್ದಾಳೆ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ

ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಕೊರತೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಜಾರಿಗೆ ತರಬೇಕು. ಅಗತ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು, ಬೋರ್‌ವೆಲ್ ದುರಸ್ತಿ ಹಾಗೂ ಹೊಸ ನೀರಿನ ಮೂಲಗಳನ್ನು ಗುರುತಿಸುವ ಕಾರ್ಯವನ್ನು ತಕ್ಷಣ ಆರಂಭಿಸಬೇಕೆಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು. ತಾಲ್ಲೂಕಿನ ಮನ್ನಾಖೇಳ್ಳಿ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯನ್ನು ನಡೆಸಿ, ಬೇಸಿಗೆಯ ಸಮಯದಲ್ಲಿ ಉಂಟಾಗುವ ಕುಡಿಯುವ ನೀರಿನ ಸಮಸ್ಯೆಯನ್ನು ತಡೆಯಲು ತುರ್ತು ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿ ಮಾತನಾಡಿದ ಅವರು, ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಎಲ್ಲಾ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಿ, ಸಮಸ್ಯೆಯನ್ನು ಶೀಘ್ರದಲ್ಲಿ ಪರಿಹರಿಸಲು ಬದ್ಧರಾಗಿರಬೇಕು ನೀರೇ ಜೀವ. ನೀರಿಲ್ಲದೆ ಬದುಕು ಸಾಧ್ಯವಿಲ್ಲ.

ಬೇಸಿಗೆಯ ಸಮಯದಲ್ಲಿ ನಮ್ಮ ಗ್ರಾಮಗಳಲ್ಲಿ ಮತ್ತು ಪಟ್ಟಣಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗುವುದು ಹೆಚ್ಚಾಗದಂತೆ ತುರ್ತು ಕ್ರಮಗಳನ್ನು ಕೈಗೊಳ್ಳುವ ಮೂಲಕ ಪರಿಹರಿಸಬೇಕಾಗಿದೆ. ಈ ನಿಟ್ಟಿನಲ್ಲಿ, ಎಲ್ಲಾ ಅಧಿಕಾರಿಗಳು ಯಾವುದೇ ಗ್ರಾಮದಲ್ಲಿ ನೀರಿನ ಕೊರತೆ ಉಂಟಾಗದಂತೆ ಮುಂಚಿತವಾಗಿಯೇ ನೀರಿನ ಮೂಲಗಳನ್ನು ಪರಿಶೀಲಿಸಿ, ಬೋರ್‌ವೆಲ್‌ಗಳ ದುರಸ್ತಿ ಕಾರ್ಯಗಳನ್ನು ತಕ್ಷಣ ಕೈಗೊಳ್ಳಬೇಕು.

ಹಾಳಾಗಿರುವ ಪಂಪ್‌ಗಳು, ಮೋಟಾರ್‌ಗಳು, ಪೈಪ್‌ಲೈನ್‌ಗಳನ್ನು ಸರಿಪಡಿಸಬೇಕು. ಅಗತ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡುವ ವ್ಯವಸ್ಥೆಯನ್ನು ಕೂಡ ತಕ್ಷಣ ಜಾರಿಗೆ ತರಬೇಕು.

ಜನರಿಗೆ ನೀರು ಸಿಗದೇ ಸಂಕಷ್ಟ ಅನುಭವಿಸುವ ಪರಿಸ್ಥಿತಿ ಬರಬಾರದು. ಇದು ನಮ್ಮೆಲ್ಲರ ಜವಾಬ್ದಾರಿ ಎಂದರು. ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಬೇಕು. ಗ್ರಾಮ ಪಂಚಾಯಿತಿ, ತಾಲ್ಲೂಕು ಆಡಳಿತ ಮತ್ತು ಎಲ್ಲಾ ಸಂಬಂಧಪಟ್ಟ ಇಲಾಖೆಗಳು ಒಟ್ಟಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಈ ಸಮಸ್ಯೆಯನ್ನು ಯಶಸ್ವಿಯಾಗಿ ಎದುರಿಸ ಬಹುದು ಎಂದರು. ರಸ್ತೆ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಯಾವುದೇ ರೀತಿಯ ಮೂಲ ಸೌಕರ್ಯ ಕೊರತೆ–ಯಾಗದಂತೆ ಎಲ್ಲಾ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಮಂಜುನಾಥ್ ಪಂಚಾಳ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಎಸ್ಸೆಸ್ಸೆಲ್ಸಿಯಲ್ಲಿ ಶ್ರೀ ಬಸವೇಶ್ವರ ಆಂಗ್ಲ ಪ್ರೌಢ ಶಾಲೆಯ 45 ವಿದ್ಯಾರ್ಥಿಗಳಿಗೆ ಅಗ್ರಶ್ರೇಣಿ

• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಶ್ರೀ ಬಸವೇಶ್ವರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಎಸ್ಸೆಸ್ಸೆಲ್ಸಿಯಲ್ಲಿ ಶೇಕಡಾ 98.21% ಫಲಿತಾಂಶ ಬಂದಿದೆ.

ಪರೀಕ್ಷೆಗೆ ಹಾಜರಾದ 112 ವಿದ್ಯಾರ್ಥಿಗಳಲ್ಲಿ 45 ಅಗ್ರಶ್ರೇಣಿಯಲ್ಲಿ ಮತ್ತು 40 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ವೀರೇಶ ಲಿಂಗರಾಜ ಶೇ. 97 , ಚನ್ನವೀರ ಶಾಂತಕುಮಾರ ಶೇ. 96.48, ಗಣೇಶ ಪ್ರಭು ಶೇ. 96.32, ಆಫೀಯಾ ಅಬ್ದುಲ್ ಸತ್ತಾರ್ ಶೇ.96.32, ಸುಮನ್ ಸಂತೋಷ್ ಶೇ. 96.32, ಅಭಿಷೇಕ ಬಾಲಾಜಿ ಶೇ. 96.16 ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಪದಾಧಿಕಾರಿಗಳು, ನಿರ್ದೇಶಕರು, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ವಸತಿ ಕಾಲೇಜಿಗೆ ಪಿಯುಸಿ ದ್ವಿತೀಯ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ

• ಮಲ್ಲಮ್ಮ ನುಡಿ ವಾರ್ತೆ, ಬೀದರ

ಬೀದರನ ಬಂಬಳಗಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜಿಗೆ ಪ್ರಸ್ತಕ ಸಾಲಿನ ದ್ವಿತೀಯ ಪಿ.ಯು.ಸಿ(ವಿಜ್ಞಾನ ವಿಭಾಗ) ಪರೀಕ್ಷೆ–1 ರಲ್ಲಿ ಶೇಕಡಾ 100ರಷ್ಟು ಫಲಿತಾಂಶ ಬಂದಿದ್ದು, ಇದರಲ್ಲಿ 02 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ 29 ವಿದ್ಯಾರ್ಥಿಗಳು ಪ್ರಥಮ ಶ್ರೇಣಯಲ್ಲಿ ತೇರ್ಗಡೆ ಹೊಂದಿದ್ದಾರೆ. ಅಂಕಿತಾ ತಂದೆ ನಾಗೇಂದ್ರ (538), ವೈಷ್ಣವಿ

ತಂದೆ ಝುರಣಪ್ಪ (514) ಹಾಗು ಸಮ್ರಿನ್ ಬೇಗಂ ತಂದೆ ನಬೀಸಾಬ (499) ಕ್ರಮವಾಗಿ ಕಾಲೇಜಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದಿರುತ್ತಾರೆ. ವಿದ್ಯಾರ್ಥಿಗಳ ಸಾಧನೆಗೆ ಜಿಲ್ಲಾ ಅಧಿಕಾರಿಗಳು, ಪ್ರಾಂಶುಪಾಲರು ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರ ಅಭಿನಂದನೆ ತಿಳಿಸಿದ್ದಾರೆಂದು ಬಂಬಳಗಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಐಟಿಐ: ಪ್ರವೇಶಾತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ. ಬಳ್ಳಾರಿ

ನಗರದ ರೇಡಿಯೋ ಪಾರ್ಕ್ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಪ್ರಸಕ್ತ 2026–27 ನೇ ಸಾಲಿಗೆ ವಿವಿಧ ವೃತ್ತಿಗಳಿಗೆ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯ ಪಂಡಿತಾರಾಧ್ಯ ಅವರು ತಿಳಿಸಿದ್ದಾರೆ.

10 ನೇ ತರಗತಿ ಪಾಸ್/ಫೇಲ್ ಆದ ಅಭ್ಯರ್ಥಿಗಳು ವೆಬ್ ಸೈಟ್ ವಿಳಾಸ www.cite.karnataka.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅಥವಾ ನೇರವಾಗಿ ಸಂಸ್ಥೆಗೆ ಭೇಟಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಮೇ 08 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿದ ಸಂಸ್ಥೆಯಲ್ಲಿ ಮಾತ್ರ ದಾಖಲೆ ಪರಿಶೀಲನೆಗೆ ಕಡ್ಡಾಯವಾಗಿ ಹಾಜರಾಗಬೇಕು.

ಸೂಚನೆ: ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡುವ ಮೊಬೈಲ್ ಸಂಖ್ಯೆ ಹಾಗೂ ಇ–ಮೇಲ್ ವಿಳಾಸವನ್ನು ಪ್ರವೇಶಾತಿ ಮತ್ತು ಪರೀಕ್ಷೆ ಮುಗಿಯುವವರೆಗೂ ಬದಲಾವಣೆ ಮಾಡುವಂತಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮೊ.9902351985 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಯತ್ನ ಪ್ರಾರ್ಥನೆಯಿಂದ ಎಲ್ಲವನ್ನು ಪಡೆಯಬಹುದು




• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಭಾಲ್ಕಿ-ಬೀದರಮುಖ್ಯರಸ್ತೆಯಲ್ಲಿರುವ ಎಸ್‌ಬಿಆಯ್‌ಬ್ಯಾಂಕ್‌ಹಿಂದುಗಡೆಯಿರುವ ಶಾರದಾ ಪ್ರೌಢ ಶಾಲೆಯ ಪ್ರಸ್ತುತ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಅತ್ಯುತ್ತಮವಾಗಿದ್ದು, ಸಾಯಿ ಸುಭಾಷ ಶೇ.97.44 ಅಂಕ ಪಡೆದು ಶಾರದಾ ಪ್ರೌಢ ಶಾಲೆಗೆ ಟಾಪರ್ ಆಗಿದ್ದಾನೆ ಎಂದು ಸಂಸ್ಥೆ ಆಡಳಿತಾಧಿಕಾರಿ ಮಹಾದೇವ ಪಟ್ನೆ ತಿಳಿಸಿದ್ದಾರೆ.

ಎಸ್‌ಎಸ್‌ಎಲ್‌ಸಿ ಟಾಪರ್ ವಿದ್ಯಾರ್ಥಿಗಳಿಗೆ ಸಂಸ್ಥೆ ಅಧ್ಯಕ್ಷ ವಸಂತರಾವ ಪಾಟೀಲ್ ಗೌರವಿಸಿ ಮಾತನಾಡಿ,ನಮ್ಮ ಪ್ರೌಢ ಶಾಲೆಯಲ್ಲಿ ಬಡ ಮತ್ತ ಮಧ್ಯಮ ವರ್ಗದ ಮಕ್ಕಳು ಪ್ರವೇಶ ಪಡೆದು ನಮ್ಮ ಶಿಕ್ಷಕರ ಸತತ ಕಾಳಜಿಯಿಂದ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದಕ್ಕಾಗಿ ನನಗೆ ಸಂತೋಷವಾಗಿದೆ.ಪ್ರಯತ್ನ ಮತ್ತು ಪ್ರಾರ್ಥನೆಯಿಂದ ಎಲ್ಲವನ್ನು ಸಾಧಿಸಲು ಸಾಧ್ಯವಿದೆ ಎಂದರು.

> “ಶಾರದಾ ಪ್ರೌಢ ಶಾಲೆಯಲ್ಲಿ ನುರಿತ-ಅರಿತ ಹಿರಿಯ ಶಿಕ್ಷಕರಿಂದ ಬೋಧನೆ ಮಾಡಿಸಲಾಗುತ್ತಿದೆ.ಫಲಿತಾಂಶ ಸುಧಾರಣೆಯಲ್ಲಿ ಎಲ್ಲ ಸಿಬ್ಬಂದಿಗಳ ಶ್ರಮ,ಪಾಲಕರ ಸಹಕಾರವಿದೆ.ಮಕ್ಕಳು ವಿಜ್ಞಾನ ವಸ್ತು ಪ್ರದರ್ಶನ ಮತ್ತು ಕ್ರೀಡೆಯಲ್ಲಿ ರಾಜ್ಯ,ರಾಷ್ಟ್ರ ಮಟ್ಟದಲ್ಲಿ ಕೀರ್ತಿ ಮಾಡಿದ್ದು ಖುಷಿ ತಂದಿದೆ.
>
> • **ವಸಂತರಾವ ಪಾಟೀಲ್ ಅಧ್ಯಕ್ಷರು ಶಾರದಾ ಶಾಲೆ ಭಾಲ್ಕಿ.**

ಮುಖ್ಯ ಅತಿಥಿಗಳಾಗಿ ಆಗಮಿಸಿದ ನಿವೃತ್ತ ಪ್ರಾಚಾರ್ಯ ಅಶೋಕ ರಾಜೋಳೆ ಮಾತನಾಡಿ,ಪ್ರಸ್ತುತ ಮಕ್ಕಳು ಅಪ್ಡೇಟ್ ಆಗಿದ್ದಾರೆ.ಪ್ರತಿ ವಿಷಯದ ಶಿಕ್ಷಕರು ವೈಯಕ್ತಿಕ ಕಾಳಜಿ ತೆಗೆದುಕೊಂಡಾಗ ಮಕ್ಕಳು ಗರಿಷ್ಠ ಅಂಕ ಪಡೆಯಲು ಸಾಧ್ಯವಾಗುತ್ತದೆ.ಶಾರದಾ ಶಾಲೆಯ ಮಕ್ಕಳಲ್ಲಿ ಸರ್ವತೋಮುಖ ಬೆಳವಣಿಗೆಯ ಲಕ್ಷಣ ಕಾಣುತ್ತಿವೆ ಎಂದರು.ಪ್ರತಿಭಾ ಪಾಟೀಲ್ ಮಾತನಾಡಿ,ಪಾಲಕರು,ಶಿಕ್ಷಕರು ಅಟೇಂಷನ ಆಗಿದ್ದರೆ ಫಲಿತಾಂಶ ಪಡೆಯಲು ಟೆನಷನ್ ಆಗುವುದಿಲ್ಲ ಎಂದು ಬಹು ಮಾರ್ಮಿಕವಾಗಿ ನುಡಿದರು.

ಮಕ್ಕಳ ವಿವರ:ಸಾಯಿ ಸುಭಾಷ ಶೇ.97.44,ಗೌರಿ ಗಣೇಶ ಶೇ.96.8,ನಾಗರಾಜ ಅನುರಾಜ ಶೇ.96.8, ಕುಸುಮಾ ಸಂತೋಷ ಶೇ.96,ಐಶ್ವರ್ಯ ವಸಂತ 95.2, ರುತುಜಾ ಪ್ರಶಾಂತ ಶೇ.93.44,ಸ್ವರಾಲಿ ಪುರುಷೋತ್ತಮ ಶೇ. 92.16, ಕಾಂಚನ ಮಾಧವಗಿರ ಶೇ.91.68, ಲಕ್ಷ್ಮೀಬಾಯಿ ಜೈಹಿಂದ ಶೇ.89.28, ಪ್ರಾರ್ಥನಾ ಶ್ರೀಮಂತರಾವ ಶೇ.88.16, ಪ್ರೇಮಕುಮಾರ ಸಂಜೀವಕುಮಾರ ಶೇ.87.84,ದೀಪ್ತಿ ರವೀಂದ್ರ ಶೇ.85,ಪ್ರಗತಿ ಪಂಡಿತ ಶೇ.83.52, ತುಶಾಲ ತುಕಾರಾಮ ಶೇ.82.72,ಜಮೀರ ಸಲಾಹುದ್ದೀನ್ ಶೇ.81.92,ಸುಜಿತ ಸಂಗಮೇಶ ಶೇ.80.48,ಪ್ರಮೋದ ಮನೋಹರ ಶೇ.80.16 ಅಂಕ ಪಡೆದು ಪ್ರೌಢ ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ ಎಂದು ಮುಖ್ಯಗುರು ಶಹನಾಜ ಬೆಗಂ ತಿಳಿಸಿದ್ದಾರೆ.

ಪ್ರಾಥಮಿಕ ಶಾಲೆ ಮುಖ್ಯಗುರು ಅಶ್ವಿನಿ ರಾಜೋಳೆ ,ಹರೀಷ ,ಸಂತೋಷ, ತಾನಾಜಿ ಸೇರಿದಂತೆ ಪಾಲಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಹೇಮಂತ ಕುಲಕರ್ಣಿ ಸ್ವಾಗತಿಸಿದರು. ಉದಯ ಬಿರಾದಾರ ನಿರೂಪಿಸಿದರು. ಅಶೋಕ ಭಂಡಾರಿ ವಂದಿಸಿದರು.

# ಬೀದರ ಜಿಲ್ಲೆಯು ಮಲೇರಿಯಾ ಮುಕ್ತದೆಡೆಗೆ ಸಾಗಿದೆ: ರಾಜಶೇಖರ ಪಾಟೀಲ

• ಮಲ್ಲಮ್ಮ ನುಡಿ ವಾರ್ತೆ, ಬೀದರ

ಬೀದರ ಜಿಲ್ಲೆಯು ಮಲೇರಿಯಾ ಮುಕ್ತದೆಡೆಗೆ ಸಾಗಿದೆ ಎಂದು ಬೀದರ ಜಿಲ್ಲಾ ರೋಗವಹಾಕ ಆಸ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ರಾಜಶೇಖರ ಪಾಟೀಲ್ ತಿಳಿಸಿದರು.

ಅವರು ಮಂಗಳವಾರ ವಿಶ್ವ ಮಲೇರಿಯಾ ದಿನಾಚರಣೆ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಬೃಹತ್ ಜನಜಾಗೃತಿ ರ್ಯಾಲಿಗೆ ರಿಬ್ಬಿನ ಕತ್ತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಮಲೇರಿಯಾ ರೋಗವು ಇಳಿಮುಖವಾಗಿದ್ದು,ಕಳೆದ 2025ನೇ ಸಾಲಿನಲ್ಲಿ ಕೇವಲ 05 ಮಲೇರಿಯಾ ಪ್ರಕರಣಗಳು ಪತ್ತೆಯಾಗಿದ್ದು, ಅವು ಹೊರರಾಜ್ಯಗಳಿಂದ 05 ಜನ ವಲಸಿಗರಿಗೆ ಮಲೇರಿಯಾ ಧೃಡಪಟ್ಟಿದ್ದು,ಎಲ್ಲಾ ಮಲೇರಿಯಾ ಪ್ರಕರಣಗಳಿಗೆ ತೀವ್ರಚಿಕಿತ್ಸೆ ನೀಡುವುದರ ಮೂಲಕ ಗುಣಪಡಿಸಲಾಗಿದೆ. ಜಿಲ್ಲೆಯಲ್ಲಿ ಮಲೇರಿಯಾದಿಂದ ಇಲ್ಲಿಯವರೆಗೆ ಯಾವುದೇ ಸಾವು



ಸಂಭವಿಸಿರುವುದಿಲ್ಲ ಎಂದು ತಿಳಿಸಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಶಂಕ್ರೆಪ್ಪಾ ಬೋಮಾ ಮಾತನಾಡಿ, ಜಿಲ್ಲೆಯಲ್ಲಿ ಅಲ್ಲಲ್ಲಿ ಮಳೆಯಾಗುತ್ತಿರುವ್ಯದರಿಂದ ಹಾಗೂ ನಿಂತ ನೀರಿನಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿರುತ್ತದೆ ನಾಗರಿಕರು ಮಲೇರಿಯ ರೋಗವನ್ನು ನಿಯಂತ್ರಿಸಲು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಮತ್ತು ಸೊಳ್ಳೆ ಕಡಿತದಿಂದ ರಕ್ಷಣೆ ಮಾಡಿಕೊಳ್ಳುವದು,ಸೊಳ್ಳೆ ನಿಯಂತ್ರಣ ವಿಧಾನಗಳನ್ನು ಅಳವಡಿಸಿಕೊಂಡು ಸೊಳ್ಳೆಗಳಿಂದ ಹರಡುವ ರೋಗಗಳನ್ನು ತಡೆಗಟ್ಟಲು ಸಾರ್ವಜನಿಕರಲ್ಲಿ ಮನವಿ ಮಾಡುತ್ತಾ ಮಲೇರಿಯಾ ರೋಗ ಲಕ್ಷಣಗಳು ಕಂಡುಬಂದಲ್ಲಿ ತಮ್ಮ ಸಮಿಪದ ಸರಕಾರಿ ಆಸ್ಪತ್ರೆಯಲ್ಲಿ ಪರೀಕ್ಷಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆಯಬೇಕು, ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಹ್ಮದ ಮಹೆಬೂಬ ಮಾತನಾಡಿ, ಜಿಲ್ಲೆಯಲ್ಲಿ 2026ನೇ ವರ್ಷದಲ್ಲಿ ಇಲ್ಲಿಯವರೆಗೆ 01 ಮಲೇರಿಯಾ ಪಿವಿ ಪ್ರಕರಣ ವಲಸಿಗರಿಗೆ ಪತ್ತೆಯಾಗಿದ್ದು, ತೀವ್ರಚಿಕಿತ್ಸೆ ನೀಡುವುದರ ಮೂಲ ಗುಣಪಡಿಸಲಾಗಿದೆ. ಮಲೇರಿಯಾ ರೋಗ ಹರಡದಂತೆ ಎಲ್ಲಾ ಸೂಕ್ತ ಮುಂಜಾಗ್ರತಾ ಕ್ರಮಗಳಾದ ಜ್ವರ ಪೀಡುತರ ಸಮೀಕ್ಷೆ, ಸೊಳ್ಳೆಗಳ ಉತ್ಪತ್ತಿ ತಾನಗಳ ನಿರ್ಮೂಲನೆ ಕಾರ್ಯ ಕೈಕೊಳ್ಳಲಾಗಿದೆ ಸೊಳ್ಳೆಗಳ ಉತ್ಪತಿಯ ಬಗ್ಗೆ ಹಾಗೂ ಸೊಳ್ಳೆಗಳ ಜೀವನಚಕ್ರದ ಬಗ್ಗೆ ವೈಜ್ಞಾನಿಕ ಸ್ವರೂಪ ಮತ್ತು ಆಂಕಿ ಅಂಶ ತಿಳಿಸಿದರು.

ಈ ಸಂದರ್ಭದಲ್ಲಿ ಬೀದರನ ಡಿ.ಎಲ್.ಓ ಡಾ. ಕಿರಣ ಪಾಟಿಲ, ಎಫ್.ಡಬ್ಲೂ.ಓ ಡಾ. ದಿಲಿಪ ಡೊಂಗ್ರೆ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸಂಗಪ್ಪಾ ಕಾಂಬ್ಳೆ, ಆರೋಗ್ಯ ಶಿಕ್ಷಣಾಧಿಕಾರಿ ಓಂಕಾರ ಮಲಿಗೆ, ಯೆಸುದಾಸ ಥೊರೆ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಹಾದಿ ತಬರೆಜ್, ದೆವಿದಾಸ, ಜೇತುಲಾಲ ಪವಾರ್, ಮಹ್ಮದ ಸಮಿಯೋದಿನ್ ಅನೀಲಕುಮಾರ ಜಾದವ ಕ್ರಿಸ್ತದಾಸ್ ಮೊಹನದಾಸ ಆರೋಗ್ಯ ಶೀಕ್ಷಣಾಧಿಕಾರಿಗಳು ಹಾಗೂ ಕಾಶಿನಾಥ ಸತಿಷ ಪಾಂಡೆ ಅಮರ್ ಗಂದೆಗುಡಿ ಬಸಲಿಂಗಪ್ಪಾ ಮೋದಿ ಶೇಶಿಕಾಂತ ಕರಣ ಪ್ರದೀಪ ಆನಂದ ಮಾಲಾಶ್ರೀ ರವಿ ನರ್ಸಿಂಗ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೀರಶೆಟ್ಟಿ ಚನ್ನಶೆಟ್ಟಿ ಅವರು ಸಂಚಾಲನೆ ನಡೆಸಿಕೊಟ್ಟರು. ಆರೋಗ್ಯ ನಿರೀಕ್ಷಣಾಧಿಕಾರಿ ಮಹ್ಮದ ಅಬುಬಕರ್ ಅವರು ಸ್ವಾಗತ ಕೋರಿದರು.

# ಐಟಿಐ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ , ಬೀದರ

ಬೀದರ ಜಿಲ್ಲೆಯ ಸರಕಾರಿ/ಅನುದಾನಿತ ಐಟಿಐ ಗಳ ವಿವಿಧ ವೃತ್ತಿಗಳಗೆ 2026-27ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿಗಾಗಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಅವ್ಹಾನಿಸಲಾಗಿದೆ ಎಂದು ಕಮಲನಗರ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೆರಿಟ ಕಮ್ ರಿಜರ್ವೇಶನ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು, ಹತ್ತನೇ ಪಾಸಾದ, 14 ವರ್ಷ ಮೇಲ್ಪಟ್ಟ ಹಾಗೂ ಎಸ್.ಎಸ್.ಎಲ್.ಸಿ ಅನುತ್ತೀರ್ಣರಾದ / 8ನೇ ತರಗತಿ ಉತ್ತೀರ್ಣರಾದ ಅಭ್ಯರ್ಥಿಗಳು ಬೆಸುಗೆಗಾರ ವೃತ್ತಿಗೆ ವಿದ್ಯಾರ್ಥಿಗಳು ದಿನಾಂಕ: 08-05-2026 ರವರೆಗೆ ಅರ್ಜಿಯನ್ನು ಆನ್‌ಲೈನ್ ವೆ￿￿ಸೈಟ http://cite.karnataka.gov.in ನಲ್ಲಿ ಅಥವಾ ಸಮೀಪದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಅಥವಾ ಯಾವುದೇ ಸೈಬರ್ ಕೆಫೆನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಮಲನಗರ : 9964631214, 9880859889, 8123532346, 9535290078, 7899733880 ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಐಟಿಐ : ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ , ಬೀದರ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹುಮನಾಬಾದನಲ್ಲಿ ಅಗಸ್ಟ್-2026 ನೇ ಶೈಕ್ಷಣಿಕ ಸಾಲಿನ ಮೇರಿಟ್-ಕಂ-ರಿಸರ್ವೇಶನ್ ಆಧಾರಿತ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಬಯಸುವ, ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿರುವ 14 ವರ್ಷ ಮೇಲ್ಪಟ್ಟ ವಯೋಮಿತಿಯ ಅರ್ಹ ಆಸಕ್ತ ಅಭ್ಯರ್ಥಿಗಳು, ಇಲಾಖೆಯ ವೆಬ್ ಸೈಟ್ ತಿತಿತಿ.ಛಿಣಜ.ಇಚಿಡಿಟಿಚಿಣಚಿಞಚಿ.ರಿಂತ.ಎಟಿ ಮೂಲಕ ಆನ್‌ಲೈನನಲ್ಲಿ ದಿನಾಂಕ: 27/04/2026 ರಿಂದ ದಿನಾಂಕ: 08/05/2026 ರ ವರೆಗೆ ಅರ್ಜಿ ಸಲ್ಲಿಸಿ ದಾಖಲೆಗಳನ್ನು ಪರಿಶಿಲಿಸಿಕೊಳ್ಳಬಹುದು ಅಥವಾ ಅರ್ಜಿ ಸಲ್ಲಿಸಲು ಮತ್ತು ಇನ್ನಿತರ ಮಾಹಿತಿಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹುಮನಾಬಾದನಲ್ಲಿ ಪ್ರವೇಶಾತಿಗಾಗಿ ತೆರೆಯಲಾಗಿರುವ ಹೆಲ್ಪ್ ಡೆಸ್ಕ್ ಗೆ ಸಂಪರ್ಕಿಸಬಹುದಾಗಿದೆ.

# ಕುಡಿಯುವ ನೀರು ಸಮಸ್ಯೆ ಆಗದಂತೆ ಕ್ರಮ ವಹಿಸಿ

• ಮಲ್ಲಮ್ಮನುಡಿ ವಾರ್ತೆ ಕೊಪ್ಪಳ



ಬೇಸಿಗೆ ಪ್ರಾರಂಭವಾಗಿರುವದರಿಂದ ಗ್ರಾಮೀಣ ಭಾಗ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಸಮಸ್ಯೆ ಆಗದಂತೆ ಮುಂಜಾಗ್ರತ ಕ್ರಮವಹಿಸಬೇಕೆಂದು ಕೊಪ್ಪಳ ತಾಲೂಕ ನೋಡಲ್ ಅಧಿಕಾರಿ ಹಾಗು ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಸೂಚಿಸಿದರು.

ದಿನಾಂಕ:28-04-2026ರಂದು ರಂದು ತಾಲೂಕ ಪಂಚಾಯತಿ ಕೊಪ್ಪಳ ಸಭಾಂಗಣದಲ್ಲಿ ಕುಡಿಯುವ ನೀರು ಕುರಿತು ಜರುಗಿದ ತಾಲೂಕ ಮಟ್ಟದ ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದರು.

ಮುಂಬರುವ ದಿನಗಳಲ್ಲಿ 36 ಗ್ರಾಮಗಳನ್ನು ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳೆಂದು ಗುರತಿಸಲಾಗಿದ್ದು ಅವುಗಳ ಪೈಕಿ ಈಗಾಗಲೇ 12 ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದ್ದರಿಂದ 12 ಖಾಸಗಿ ಬೋರ್ ವೆಲ್ ಗಳನ್ನು ಬಾಡಿಗೆ ರೂಪದಲ್ಲಿ ಪಡೆಯಲಾಗಿದ್ದು ಮುಂದಿನ ದಿನಗಳಲ್ಲಿ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಂತೆ ಖಾಸಗಿ ಬೋರ್ ವೆಲ್ ಗಳನ್ನು ಗುರುತಿಸಿ ಇಟ್ಟುಕೊಳ್ಳುವಂತೆ ಹಾಜರಿದ್ದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗು ಶಾಖಾಧಿಕಾರಿಗಳಿಗೆ ಸೂಚಿಸಿದರು.ತಾಲೂಕಿನ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಕುಡಿಯುವ ನೀರಿನ ಕುಂದು ಕೊರತೆಗಳನ್ನು ಸ್ವೀಕರಿಸಿ ಬಗೆಹರಿಸಲು ತಾಲೂಕ ಪಂಚಾಯತಿಯ ಸಹಾಯವಾಣಿ ಸಂ.9620410509, 9902315311 ಹಾಗು ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂ.7483942249 ಸ್ಥಾಪಿಸಲಾಗಿದ್ದು ಇವುಗಳ ಬಗ್ಗೆ ಗ್ರಾಮ ಹಾಗು ನಗರ ಪ್ರದೇಶದಲ್ಲಿ ಮಾಹಿತಿ ತಲುಪಿಸಲು ಕ್ರಮವಹಿಸುವಂತೆ ಸೂಚಿಸಿದರು. ಬೇಸಿಗೆ ತಾಪಮಾನ ಹೆಚ್ಚಾಗಿರುವದರಿಂದ ಗ್ರಾಮೀಣ ಹಾಗು ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಸಂಬಂಧಿಸಿದ ಅಧಿಕಾರಿಗಳು ತಕ್ಷಣವೇ ಸ್ಪಂದಿಸಿ ಸಮಸ್ಯೆಯನ್ನು ಬಗೆಹರಿಸುವಂತೆ ತಿಳಿಸಿದರು. ನೀರಿನ ಮೂಲಗಳನ್ನು ಪರೀಕ್ಷಿಸುವದು ಮತ್ತು ನೀರಿನ ಸಂಗ್ರಹಾರಗಳನ್ನು ಕಾಲ ಕಾಲಕ್ಕೆ ಸ್ವಚ್ಚಗೊಳಿಸುವದು ಅಗತ್ಯ ಜಿಪಿಎಸ್ ಪೋಟೊ ದಾಖಲಾತಿ ನಿರ್ವಹಿಸತಕ್ಕದ್ದು ಮತ್ತು ಗ್ರಾಮದಲ್ಲಿರುವ ಜಾನುವಾರು ತೊಟ್ಟಿಗಳನ್ನು ಸ್ವಚ್ಚಗೊಳಿಸಿ ಅವುಗಳಿಗೆ ಕುಡಿಯುವ ನೀರು ಭರ್ತಿ ಮಾಡಿದಲ್ಲಿ ಜಾನುವಾರುಗಳಿಗೆ ಅನುಕೂಲವಾಗುತ್ತದೆ ಎಂದರು. ಯಾವುದೇ ರೀತಿಯಾಗಿ ಪೈಪ್ ಲೈನ್ ಒಡೆದು ಕಲುಷಿತ ನೀರು ಸರಬರಾಜು ಆಗದಂತೆ ಎಚ್ಚರವಹಿಸಲು ನಗರಸಭೆ, ಪಟ್ಟಣ ಪಂಚಾಯತಿ ಅಧಿಕಾರಿಗಳು ಹಾಗು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು. ಗ್ರಾಮ ಪಂಚಾಯತಿ ಹಂತದಲ್ಲಿ ಟಾಸ್ಕಫೋರ್ಸ ಸಭೆ ಜರುಗಿಸಲು ಇದೇ ಸಂದರ್ಭದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ನಗರಸಭೆಯ ಪೌರಾಯುಕ್ತ ಮಂಜುನಾಥ ಗುಂಡೂರು, ತಹಶೀಲ್ದಾರ ಬಸವರಾಜ ತೆನ್ನಳ್ಳಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಹೊನ್ನಪ್ಪ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್ ಎಚ್, ತಾಲೂಕ ಮಟ್ಟದ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯತಿ ಆಡಳಿತಾಧಿಕಾರಿಗಳು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮೀಣ ಕುಡಿಯುವ ಮತ್ತು ನೈರ್ಮಲ್ಯ ಇಲಾಖೆಯ ಶಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಸಭೆಯಲ್ಲಿ ಹಾಜರಿದ್ದರು.

# ದೇಹದಾನ ವಾಗ್ದಾನ ಬಿ.ಎಲ್.ಡಿ.ಇ. ಸಂಸ್ಥೆಯಿಂದ ಕೃತಜ್ಞತೆ

• ಮಲ್ಲಮ್ಮ ನುಡಿ ವಾರ್ತೆ, ವಿಜಯಪುರ



ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿವೃತ್ತ ನಿರ್ದೇಶಕ ಮತ್ತು ನಗರದ ನಿವಾಸಿ ಮಲ್ಲಿಕಾರ್ಜುನ ಗುರುಮುರ್ತಿ ಕೆಳಗಡೆ(74) ಅವರು ಮರಣಾನಂತರ ತಮ್ಮ ದೇಹವನ್ನು ಬಿ.ಎಲ್.ಡಿ.ಇ ಆಸ್ಪತ್ರೆಗೆ ದಾನ ಮಾಡುವುದಾಗಿ ವಾಗ್ದಾನ ಮಾಡಿದ್ದಾರೆ.

ಹೌದು ಜಿಲ್ಲೆಯಲ್ಲಿ ದೇಹದಾನದ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಹೆಚ್ಚಾಗುತ್ತಿದ್ದು. ಈಗ ಮಲ್ಲಿಕಾರ್ಜುನ ಗುರುಮುರ್ತಿ ಕೆಳಗಡೆ ಅವರು ಮರಣಾನಂತರ ತಮ್ಮ ದೇಹದಾನವನ್ನು ಮಾಡುವುದಾಗಿ ವಾಗ್ದಾನ ಮಾಡಿದ್ದಾರೆ. ಅಲ್ಲದೇ, ಬಿ.ಎಲ್.ಡಿ.ಇ. ಆಸ್ಪತ್ರೆಯ ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಆರ್.ಎಸ್. ಬುಲಗೌಡ ಅವರನ್ನು ಭೇಟಿ ಮಾಡಿ ದೇಹ ದಾನವನ್ನು ಮಾಡಲು ತಮ್ಮ ಹೆಸರು ನೋಂದಾಯಿಸಿ, ದೇಹ ದಾನ ಮಾಡುವ ಅರ್ಜಿಯನ್ನು ಭರ್ತಿಮಾಡಿ, ಸಹಿಮಾಡಿ ವಿಭಾಗದ ಮುಖ್ಯಸ್ಥರಿಗೆ ಸಲ್ಲಿಸಿದ್ದಾರೆ, ಮಲ್ಲಿಕಾರ್ಜುನ ಗುರುಮುರ್ತಿ ಕೆಳಗಡೆ ಅವರ ನಿರ್ಧಾರಕ್ಕೆ ಬಿ.ಎಲ್.ಡಿ.ಇ. ಸಂಸ್ಥೆ ಮತ್ತು ಅಂಗರಚನಾಶಾಸ್ತ್ರ ವಿಭಾಗದ ಸಿಬ್ಬಂದಿ ಕೃತಜ್ಞತೆ ಸಲ್ಲಿಸಿದ್ದಾರೆ.

# ವಸತಿ ಶಾಲೆಗೆ ಶೇ.92.15 ಫಲಿತಾಂಶ

• ಮಲ್ಲಮ್ಮ ನುಡಿ ವಾರ್ತೆ , ಬೀದರ

ಬೀದರನ ಬಂಬಳಗಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯು ಪ್ರಸ್ತಕ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ-1 ರಲ್ಲಿ ಶೇಕಡಾ 92.15 ರಷ್ಟು ಫಲಿತಾಂಶ ಬಂದಿದ್ದು, ಇದರಲ್ಲಿ 02 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ, 27 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಮ 12 ವಿದ್ಯಾರ್ಥಿಗಳು ದ್ವೀತಿಯ ಶ್ರೇಣಿ ಹಾಗೂ 06 ವಿದ್ಯಾರ್ಥಿಗಳು ತೃತೀಯ ಶ್ರೇಣಯಲ್ಲಿ ತೇರ್ಗಡೆ ಹೊಂದಿದ್ದಾರೆ. ಗ್ರೆಸ ತಂದೆ ಪ್ರವೀಣಕುಮಾರ (569), ಅಭಿಶೇಕ ತಂದೆ ಅನಿಲಕುಮಾರ (565) ಹಾಗು ಜ್ಞಾನೇಶ್ವರಿ ತಂದೆ ಬಾಬು (531) ಕ್ರಮಾವಾಗಿ ಶಾಲೆಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದಿರುತ್ತಾರೆ. ವಿದ್ಯಾರ್ಥಿಗಳ ಸಾಧನೆಗೆ ಜಿಲ್ಲಾ ಅಧಿಕಾರಿಗಳು, ಪ್ರಾಂಶುಪಾಲರು ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರ ಅಭಿನಂದನೆ ತಿಳಿಸಿದ್ದಾರೆಂದು ಬಂಬಳಗಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಮಾ: ಆಕ್ಷೇಪಣೆ ಅವಕಾಶ

• ಮಲ್ಲಮ್ಮ ನುಡಿ ವಾರ್ತೆ , ಬೀದರ

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ 2024-25 ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆಯ ದತ್ತಾಂಶಗಳನ್ನು ರೈತರ ಬೆಳೆ ವಿಮೆಗೆ ನೊಂದಣಿಯಾದ ಪ್ರಸ್ತಾವನೆಗಳೊಂದಿಗೆ ಹೋಲಿಕೆ ಮಾಡಿ ಸರಕಾರದಿಂದ ಅನುಮೋದನೆಯಾದ ವಿನಾಯತಿ ಅಳವಡಿಸಿ ತಾಳೆಯಾಗಿರುವ ಪ್ರಸ್ತಾವನೆಗಳಿಗೆ ಸಂರಕ್ಷಣೆ ತಂತ್ರಾಂಶದಲ್ಲಿ ವಿಮಾ ಪರಿಹಾರ ಲೆಕ್ಕ ಹಾಕಲಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕಿ ಶ್ರೀಮತಿ ಆರತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಳೆಯಾಗದೆ ಇರುವ ಪ್ರಸ್ತಾವನೆಗಳನ್ನು ಸಂರಕ್ಷಣೆ ತಂತ್ರಾಂಶದಲ್ಲಿ ಪರೀಶಿಲಿಸಲಾಗಿ ಬೀದರ್ ತಾಲೂಕಿನ ಮುಂಗಾರು ಹಂಗಾಮಿನಲ್ಲಿ ತಿರಸ್ಕೃತಗೊಂಡ ಒಟ್ಟು 784 ಮತ್ತು ಹಿಂಗಾರು ಹಂಗಾಮಿನಲ್ಲಿ ತಿರಸ್ಕೃತಗೊಂಡ 15 ಪ್ರಸ್ತಾವನೆಗಳ ರೈತರ ಪಟ್ಟಿಯನ್ನು ತಾಲೂಕಿನ ಎಲ್ಲಾ ರೈತ ಸಂಪರ್ಕ ಕೇಂದ್ರ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಪ್ರದರ್ಶಿಸಲಾಗುವುದು. ಸಂಬಂಧಪಟ್ಟ ರೈತರು ಆಕ್ಷೇಪಣೆ ಇದ್ದಲ್ಲಿ ಮಾತ್ರ ಮಾಹಿತಿ ಪ್ರಕಟಿಸಿದ ದಿನಾಂಕದಿಂದ 7 ದಿನಗಳೊಳಗೆ (ದಿನಾಂಕ: 05-05-2026) ಮನವಿ ಸಲ್ಲಿಸಲು ಹಾಗೂ ಮರುಪರಿಶೀಲಿಸಲು ಅವಕಾಶ ಕಲ್ಪಿಸಿದೆ. ಅಕ್ಷೇಪಣೆ ಇರುವ ರೈತರು 2024-25ರ ವಿಮೆಗೆ ನೊಂದಾಯಿಸಿದ ಬೆಳೆ ನಮೂದಾದ ಪಹಣಿ ಪತ್ರಿಕೆ ಸಲ್ಲಿಸುವುದು ಅಥವಾ ಬೆಂಬಲ ಬೆಲೆಯ ಪ್ರಯೋಜನ ಪಡೆದಿದ್ದಲ್ಲಿ ಅದರ ರಸೀದಿ ಸಲ್ಲಿಸುವುದು ಅಥವಾ ವಿಮೆಗೆ ನೋದಾಯಿತ ಬೆಳೆಯನ್ನು ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಮಾರಾಟ ಮಾಡಿದ ದಾಖಲೆಯನ್ನು ತಮ್ಮ ರೈತ ಸಂಪರ್ಕ ಕೇಂದ್ರಗಳಿಗೆ ಸಲ್ಲಿಸಬೇಕು.

## ಪಿಎಸ್‌ಐ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥಸಂಚಲನ: 8,000 ಪೊಲೀಸ್ ಸಿಬ್ಬಂದಿ ನೇಮಕ

# ಪೋಲೀಸರು ಸೇವಾ ಧರ್ಮ ಪಾಲಿಸಬೇಕು: ಪರಮೇಶ್ವರ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ



ಪರಿಶಿಷ್ಟ ಜಾತಿಯಲ್ಲಿನ ಒಳ ಮೀಸಲಾತಿ ಹಂಚಿಕೆ ಪ್ರಮಾಣ ಸಮಸ್ಯೆ ನಿವಾರಣೆಯಾಗಿದ್ದು, ಮೀಸಲಾತಿ ಹಂಚಿಕೆ ಕಾರಣದಿಂದ ನೇಮಕಾತಿಗೆ ತಡೆ ಹಿಡಿಯಲಾಗಿದ್ದ 8,000 ಪೊಲೀಸ್ ಅಧಿಕಾರಿ-ಸಿಬ್ಬಂದಿಗಳ ನೇಮಕಾತಿಗೆ ಶೀಘ್ರವೇ ಚಾಲನೆ ನೀಡಲಾಗುವುದು ಎಂದು ರಾಜ್ಯದ ಗೃಹ ಸಚಿವ ಡಾ. ಜಿ. ಪರಮೇಶ್ವರ ಹೇಳಿದರು.

ಮಂಗಳವಾರ ಕಲಬುರಗಿ ಹೊರವಲಯದ ನಾಗನಹಳ್ಳಿ ಪೊಲೀಸ್ ತರಬೇತಿ ಮಹಾವಿದ್ಯಾಲಯದ ಮಧುಕರ ಶೆಟ್ಟಿ ಕವಾಯತು ಮೈದಾನದಲ್ಲಿ ಜರುಗಿದ 13ನೇ ತಂಡದ ಪಿ.ಎಸ್.ಐ. (ಸಿವಿಲ್), 12ನೇ ತಂಡದ ಆರ್.ಎಸ್.ಐ/ ಸ್ಪೆಷಲ್ ಆರ್.ಎಸ್.ಐ. ಹಾಗೂ 6ನೇ ತಂಡದ ಪಿ.ಎಸ್.ಐ. (ಕೆ.ಎಸ್.ಐ.ಎಸ್.ಎಫ್) ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥಸಂಚಲನದಲ್ಲಿ ಭಾಗವಹಿಸಿ ವಿವಿಧ ತುಕಡಿಗಳನ್ನು ವೀಕ್ಷಿಸಿದಲ್ಲದೆ ಪ್ರಶಿಕ್ಷಣಾರ್ಥಿಗಳಿಂದ ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ಪರಿಶಿಷ್ಟ ಜಾತಿಯಲ್ಲಿನ ಒಳ ಮೀಸಲಾತಿ ನ್ಯಾಯಯುತವಾಗಿ ಹಂಚಿಕೆಯಾಗಿದ್ದರಿಂದ ಇನ್ಮುಂದೆ ಪೊಲೀಸ್ ನೇಮಕಾತಿ ಮಂಡಳಿ ನೇಮಕಾತಿ ಪ್ರಕ್ರಿಯೆ ನಡೆಸಲಿದೆ ಎಂದರು.

ಸಂಬಳಕ್ಕಾಗಿ ಖಾಕಿ ಸೇವೆ ಅಲ್ಲ ಎಂಬುದನ್ನು ಪೊಲೀಸರು ಮೊದಲು ಮನಗಾಣಬೇಕು. ಖಾಕಿ ಗೌರವದ ಸಂಕೇತವಾಗಿದೆ. ಇದು ಉದ್ಯೋಗವಲ್ಲ ಜನ ಸೇವೆಯಾಗಿದೆ. ಎಲ್ಲರಿಗೂ ಖಾಕಿ ಹಾಕಲು ಅವಕಾಶವಿಲ್ಲ. ಸ್ವತ 3 ಬಾರಿ ಗೃಹ ಸಚಿವನಾಗಿದ್ದರು ನನಗೆ ಈ ಅವಕಾಶ ಇಲ್ಲ. ಠಾಣೆಗೆ ಬರುವ ನೊಂದವರಿಗೆ ಕಣ್ಣೀರು ಒರೆಸುವ, ಸಮಯೋಚ್ಚಿತ ಪರಿಹಾರ ಕಂಡುಕೊಳ್ಳುವ ಕೆಲಸ ನಿಮ್ಮಿಂದಾಗಬೇಕು. ತುಳಿತಕ್ಕೊಳಗಾದಂತಹ ಬಡವರು, ಅಲ್ಪಸಂಖ್ಯಾತರು, ಎಸ್.ಸಿ-ಎಸ್.ಟಿ. ಸಮದಾಯದ ಜನರನ್ನು ಮುಖ್ಯ ವಾಹಿನಿಗೆ ತರಲು ನೆರವಾಗುವ ಮೂಲಕ ಪೊಲೀಸರು ಸೇವಾ ಧರ್ಮ ಪಾಲಿಸಬೇಕು ಎಂದು ಪ್ರಶಿಕ್ಷಣಾರ್ಥಿಗಳಿಗೆ ಗೃಹ ಸಚಿವ ಡಾ. ಜಿ.ಪರಮೇಶ್ವರ ಕರೆ ನೀಡಿದರು.

ನಮ್ಮ ಸರ್ಕಾರ ಬಂದ ನಂತರ ಪೊಲೀಸ್ ಇಲಾಖೆಯಲ್ಲಿ ಅನೇಕ ಸುಧಾರಣೆಗಳನ್ನು ತರಲಾಗಿದೆ. ಮನೆ-ಮನೆಗೆ ಪೊಲೀಸ್ ಕಾರ್ಯಕ್ರಮದಡಿ ಸಾರ್ವಜನಿಕರ ಮನೆಗೆ ಪೊಲೀಸರು ಹೋಗಿ ನಿಮ್ಮ ಕಷ್ಟಕಾಲದಲ್ಲಿ ನಾವಿದೇವೆ ಎಂಬ ಧೈರ್ಯವನ್ನು ತುಂಬುವ ಕೆಲಸ ಮಾಡುತ್ತಿದ್ದಾರೆ. ಯಾವುದೇ ಕೋಮುಗಲಭೆ, ಅಪರಾಧಗಳಿಗೆ ಇಲ್ಲಿ ಅವಕಾಶ ನೀಡುತ್ತಿಲ್ಲ. ನಾಡಿನಲ್ಲಿ ಶಾಂತಿ ವಾತಾವರಣ ಸ್ಥಾಪಿಸಲಾಗಿದೆ. ಇದರ ನಡುವೆಯೂ ಅಲ್ಲಲ್ಲಿ ಹೊರ ರಾಜ್ಯದಿಂದ ಬಂದು ಬ್ಯಾಂಕ್ ದರೋಡೆ, ಚಿನ್ನ ಕಳವು, ಕೊಲೆದಂತಹ ಪ್ರಕರಣಗಳನ್ನು ಸಹ ನಮ್ಮ ಪೊಲೀಸರು ಕ್ಷಿಪ್ರಗತಿಯಲ್ಲಿ ಭೇಧಿಸಿ ಆರೋಪಿಗಳಿಗೆ ಶಿಕ್ಷೆಯಾಗುವಂತೆ ನೋಡಿಕೊಂಡಿದ್ದಾರೆ ಎಂದರು.ಆಧುನಿಕ ತಂತ್ರಜ್ಞಾನದ ಯುಗದಲ್ಲಿ ವಂಚನೆ ಪ್ರಕರಣಗಳು ಹೊಸ ರೂಪಗಳನ್ನು ಪಡೆದುಕೊಂಡಿದ್ದು, ಅದಕ್ಕೆ ತಕ್ಕಂತೆ ಡ್ರೋನ್, ಸಿ.ಸಿ.ಟಿ.ವಿ., ಬಾಡಿ ಕ್ಯಾಮೆರಾಗಳನ್ನು ಪೊಲೀಸರಿಗೆ ಒದಗಿಸಿದ್ದೇವೆ. 52 ವರ್ಷದ ಹಳೆಯದ ಸ್ಲೌಚ್ ಹ್ಯಾಟ್ ಬದಲಾಗಿ ಪಿ-ಕ್ಯಾಪ್ ನೀಡಿ ಪೊಲೀಸರ ಮನೋಸ್ಥೈರ್ಯ ಹೆಚ್ಚಿಸಲಾಗಿದೆ. ಡಿಜಿಟಲ್ ಅರೆಸ್ಟ್, ಸೈಬರ್ ವಂಚನೆ ಹೆಚ್ಚುತ್ತಿದ್ದು, ಇದಕ್ಕಾಗಿ ಪ್ರತ್ಯೇಕ ನೀತಿ ಜಾರಿಗೆ ತರಲಾಗಿದೆ. 2024ರಲ್ಲಿ 24,000 ಸಾವಿರ ಸೈಬರ್ ವಂಚನೆ ಪ್ರಕರಣಗಳು ದಾಖಲಾಗಿದ್ದರೆ 2025ರಲ್ಲಿ ಇದರ ಪ್ರಮಾಣ 14,000ಕ್ಕೆ ಇಳಿಕೆಯಾಗಿದೆ. ಇದು ಆಧುನಿಕ ತಂತ್ರಜ್ಞಾನ ಹೊಂದಿಕೊಂಡಿದ್ದರ ಫಲವಾಗಿದೆ ಎಂದು ಪೊಲೀಸ್ ಇಲಾಖೆಯ ಕಾರ್ಯವನ್ನು ಸಚಿವರು ಪ್ರಶಂಸಿದರು.ಇಷ್ಟೆಲ್ಲದರ ನಡುವೆ ನಮಗೆ ಡ್ರಗ್ಸ್ ಜಾಲ ಸವಾಲಾಗಿ ಪರಿಣಮಿಸಿದೆ. ಕಳೆದ ಮೂರು ವರ್ಷದ ಅವಧಿಯಲ್ಲಿ ಕೋಟ್ಯಾಂತರ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡು ಕಾನೂನು ರೀತಿಯಲ್ಲಿ ಅದನ್ನು ನಾಶಪಡಿಸಿದ್ದೇವೆ. ಡ್ರಗ್ಸ್ ಜಾಲಕ್ಕೆ ನಮ್ಮ ಯುವಕರು ಬಲಿಯಾಗುತ್ತಿರುವುದು ತುಂಬಾ ಖೇದಕರ ವಿಷಯವಾಗಿದೆ. ಡ್ರಗ್ಸ್ ಮುಕ್ತ ಕರ್ನಾಟಕ ನಮ್ಮ ಗುರಿಯಾಗಿದ್ದು, ಪೊಲೀಸ್ ಇಲಾಖೆ ಆ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು ಎಂದರು.ಕಲಬುರಗಿಯ ನಾಗನಹಳ್ಳಿ ಪಿ.ಟಿ.ಸಿ. ನಿಂದ ಇಂದು 97 ಜನ ಪಿ.ಎಸ್.ಐ.ಗಳು ಬುನಾದಿ ತರಬೇತಿ ಪಡೆದು ಕರ್ತವ್ಯಕ್ಕೆ ಅಣಿಯಾಗಿದ್ದಾರೆ.

ಕಲಬುರಗಿ ಪಿ.ಟಿ.ಸಿ. ಇಲ್ಲಿಯವರೆಗೆ ಸುಮಾರು 8,000 ಜನರಿಗೆ ತರಬೇತಿ ನೀಡಿದ ಶ್ರೇಯಸ್ಸು ಹೊಂದಿದು, ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಪಿ.ಟಿ.ಸಿ ಸ್ಥಾಪನೆ ಹಿಂದೆ ದಿ. ಧರ್ಮಸಿಂಗ್ ಮತ್ತು ಡಾ.ಮಲ್ಲಿಕಾರ್ಜುನ ಖರ್ಗೆ ಅವರ ಕೊಡುಗೆ ಅಪಾರ ಇದೆ. ಡಾ.ಮಲ್ಲಿಕಾರ್ಜುನ ಖರ್ಗೆ ಅವರ ವಿಶೇಷ ಪ್ರಯತ್ನದ ಫಲವಾಗಿ ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆಂದೆ 371ಜೆ ಕಾಯ್ದೆ ತರಲಾಗಿದೆ. ಪರಿಣಾಮ ಕೆ.ಕೆ.ಆರ್.ಡಿ.ಬಿ. ಮಂಡಳಿಗೆ ಪ್ರತಿ ವರ್ಷ 5,000 ಕೋಟಿ ರೂ. ಅನುದಾನ ನೀಡಲಾಗುತ್ತಿದೆ. ಈ ಭಾಗದ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದರು.ನ್ಯಾಯ ಒದಗಿಸುವಲ್ಲಿ ಕರ್ನಾಟಕ ಪೊಲೀಸ್ ನಂಬರ್-1: ನೊಂದವರಿಗೆ ನ್ಯಾಯ ಒದಗಿಸುವಲ್ಲಿ ಕರ್ನಾಟಕ ಪೊಲೀಸ್ ನಂಬರ್-1 ಸ್ಥಾನದಲ್ಲಿದೆ ಎಂದು ಕಳೆದ ವರ್ಷ ಇಂಡಿಯಾ ಜಸ್ಟೀಸ್ ಎಂಬ ಸಂಸ್ಥೆ ತನ್ನ ವರದಿಯಲ್ಲಿ ಉಲ್ಲೇಖಿಸಿದ್ದು, ಇದು ನಾಡಿನ ಪೊಲೀಸ್ ಸೇವೆಗೆ ಸಂದ ಗೌರವವಾಗಿದೆ. ಇದಲ್ಲದೆ ರಾಯಚೂರು ಜಿಲ್ಲೆಯ ಕವಿತಾಳ ಪೊಲೀಸ್ ಠಾಣೆ ಇಡೀ ದೇಶದಲ್ಲಿಯೆ 3ನೇ ಮಾದರಿ ಠಾಣೆ ಎಂದು ಗುರುತಿಸಲಾಗಿದೆ. ರಾಷ್ಟ್ರದಲ್ಲಿ ಕರ್ನಾಟಕ ಪೊಲೀಸ್ ತನ್ನದೆ ಆದ ಗೌರವ ಹೊಂದಿದ್ದು, ಇದನ್ನು ಉಳಿಸಿಕೊಂಡು ಹೋಗುವ ಜವಾಬ್ದಾರಿ ಇಲಾಖೆಯ ಸಿಬ್ಬಂದಿಗಳ ಮೇಲಿದೆ. ಕವಿತಾಳ ಮಾದರಿ ಠಾಣೆಗಳು ರಾಜ್ಯದಲ್ಲಿ ಹೆಚ್ಚಲಿ ಎಂದು ಆಶಿಸುವೆ ಎಂದು ಡಾ.ಜಿ.ಪರಮೇಶ್ವರ ತಿಳೀಸಿದರು.

ಪೊಲೀಸ್ ಉದ್ಯೋಗವಲ್ಲ, ಸಮಾಜ ಸೇವೆ:ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದ ರಾಜ್ಯದ ಪೊಲೀಸ್ ಮಾಹಾನಿರ್ದೇಶಕರು ಹಾಗೂ ಮತ್ತು ಪೊಲೀಸ್ ಮಹಾನಿರೀಕ್ಷಕ ಡಾ.ಎಂ.ಎ. ಸಲೀಮ್ ಅವರು ಸರ್ವರನ್ನು ಸ್ವಾಗತಿಸಿ ಮಾತನಾಡಿ, ಪೊಲೀಸ್ ಉದ್ಯೋಗವಲ್ಲ, ದೇಶದ ಒಳಾಡಳಿತ ರಕ್ಷಣೆಯ ಜವಾಬ್ದಾರಿ ಹೊಂದಿದ ಸಮಾಜ ಸೇವೆಯಾಗಿದೆ. ಇಂದಿಲ್ಲಿ ತರಬೇತಿ ಪಡೆದು ಕೆಲಸಕ್ಕೆ ಅಣಿಯಾಗಿರುವ ನೀವೆಲ್ಲರು ಪ್ರಮಾಣಿಕತೆ, ಶಿಸ್ತು ಮೈಗೂಡಿಸಿಕೊಂಡು ಜನರ ಅಶೋತ್ತರಗಳನ್ನು ಈಡೇರಿಸುವ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಇಲಾಖೆಯ ಮಾರ್ಗದರ್ಶಕರಾಗಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಮನೆ ಮನೆಗೆ ಪೊಲೀಸ್, ಸನ್ಮಿತ್ರ, ಆಸರೆ ದಂತಹ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಜಾರಿಗೆ ತಂದಿದ್ದಾರೆ ಎಂದರು.ಪ್ರಶಿಕ್ಷಣಾರ್ಥಿಗಳಿಗೆ ಟ್ರೋಫಿ ಪ್ರದಾನ:ಇನ್ನು 12 ತಿಂಗಳ ಬುನಾದಿ ತರಬೇತಿ ಅವಧಿಯಲ್ಲಿ ಒಳಾಂಗಣ, ಹೊರಾಂಗಣ ಸೇರಿದಂತೆ ವಿವಿಧ ವಿಭಾಗದಲ್ಲಿ ಉತ್ತಮ ಪ್ರದರ್ಶನ ತೋರಿದ ಪ್ರೊಬೇಷನರ್ ಪ್ರಶಿಕ್ಷಣಾರ್ಥಿಗಳಿಗೆ ಸಚಿವ ಡಾ.ಜಿ.ಪರಮೇಶ್ವರ ಅವರು ಟ್ರೋಫಿ ಪ್ರದಾನ ಮಾಡಿದರು.

# ಚನ್ನಬಸವೇಶ್ವರ ಗುರುಕುಲದಲ್ಲಿ ಜೆಇಇ ಮೇನ್ಸ್ ಸಾಧಕರ ಸನ್ಮಾನ

## ಗಡಿಭಾಗದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಅದ್ಭುತ ಕ್ರಾಂತಿ: ಸಚಿವ ಖಂಡ್ರೆ ಹೇಳಿಕೆ



“ಗಡಿಭಾಗದ ಸರ್ವತೋಮುಖ ಅಭಿವೃದ್ಧಿಗಾಗಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ವಿದ್ಯಾ ದೇಗುಲ ತೆರೆದು ವೇದಿಕೆ ಕಲ್ಪಿಸಿ ಕೊಟ್ಟಿದ್ದಾರೆ. ಇದರ ಸದ್ಬಳಕೆ ಮಾಡಿಕೊಂಡು ಗ್ರಾಮೀಣ ಭಾಗದ ಬಡವರು, ರೈತರ ಮಕ್ಕಳು ನೀಟ್–ಜೆಇಇ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಪಡೆದು ಹೆಮ್ಮೆಯ ಸಾಧನೆ ಮಾಡುತ್ತಿದ್ದಾರೆ.

**ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

“ಗ್ರಾಮೀಣ ಭಾಗದಲ್ಲಿ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಂಸ್ಥೆ ಗುಣಾತ್ಮಕ ಶಿಕ್ಷಣಕ್ಕೆ ಹೆಸರುವಾಸಿಯಾಗಿದೆ. ಜೆಇಇ ಮೇನ್ಸ್ ನಲ್ಲಿ ಈ ವರ್ಷ 200ಕ್ಕೂ ಅಧಿಕ ವಿದ್ಯಾರ್ಥಿಗಳು ತೇರ್ಗಡೆ ಕಂಡಿರುವುದು ಅತ್ಯಂತ ಖುಷಿ ತಂದು ಕೊಟ್ಟಿದೆ. ವಿದ್ಯಾರ್ಥಿಗಳು ಶಿಸ್ತು, ಸಕಾರಾತ್ಮಕ ಚಿಂತನೆಗಳು ಮೈಗೂಡಿಸಿಕೊಂಡು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಬೇಕು.

**ಮಲ್ಲಿಕಾರ್ಜುನ ಉತ್ತುರೆ ಆಯುಕ್ತರು ಆದಾಯ ತೆರಿಗೆ ಇಲಾಖೆ ಪುಣೆ**

• **ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ**

ಹಿಂದುಳಿದ ಹಣೆಪಟ್ಟಿ ಹೊತ್ತಿದ್ದ ಗಡಿಭಾಗ ಇದೀಗ ಶೈಕ್ಷಣಿಕ ಕ್ಷೇತ್ರದಲ್ಲಿ ಬಹುದೊಡ್ಡ ಕ್ರಾಂತಿ ನಡೆದಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನ ವತಿಯಿಂದ ಸೋಮವಾರ ಆಯೋಜಿಸಿದ್ದ 2027ನೇ ಸಾಲಿನ ಜೆಇಇ ಮೇನ್ಸ್ ಸಾಧಕರ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಈ ಭಾಗದ ಸರ್ವತೋಮುಖ ಅಭಿವೃದ್ಧಿ ದೃಷ್ಟಿಯಿಂದ ಡಾ.ಬಸವಲಿಂಗ ಪಟ್ಟದ್ದೇವರು ಸ್ಥಾಪಿಸಿದ ಶೈಕ್ಷಣಿಕ ಸಂಸ್ಥೆಯಲ್ಲಿ ಗುಣಾತ್ಮಕ ಶಿಕ್ಷಣ ಮತ್ತು ಸಂಸ್ಕಾರಕ್ಕೆ ಒತ್ತು ನೀಡಲಾಗುತ್ತಿದೆ. ಹಾಗಾಗಿ ಈ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಅದ್ಭುತ ಸಾಧನೆಗೈಯುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.

ಚನ್ನಬಸವೇಶ್ವರ ಗುರುಕುಲ ಜೆಇಇ ಮತ್ತು ನೀಟ್ ಸಾಧಕರ ಕೇಂದ್ರವಾಗಿ ಹೊರ ಹೊಮ್ಮುತ್ತಿದೆ. ಈ ವರ್ಷ 200 ವಿದ್ಯಾರ್ಥಿಗಳು ತೇರ್ಗಡೆ ಆಗಿರುವುದು ಹೆಮ್ಮೆ ತರಿಸಿದೆ. ಒಂದು ಕಾಲದಲ್ಲಿ ಜಿಲ್ಲೆಯಿಂದ ವರ್ಷಕ್ಕೆ ಕೇವಲ 15–20 ವಿದ್ಯಾರ್ಥಿಗಳು ಮಾತ್ರ ವೈದ್ಯಕೀಯ ಕ್ಷೇತ್ರ ಪ್ರವೇಶ ಪಡೆ–ಯುತ್ತಿದ್ದರು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಈ ಭಾಗದ ಮಕ್ಕಳು ಬೆಂಗಳೂರು, ಮೈಸೂರು ಸೇರಿ ಮುಂತಾದ ಕಡೆಗಳಿಗೆ ತೆರಳುತ್ತಿದ್ದರು.

ಇದೀಗ ಪರಿಸ್ಥಿತಿ ಸಂಪೂರ್ಣ ಬದಲಾಗಿದೆ. ಎಲ್ಲರೂ ಪರಮ ಪೂಜ್ಯರು ಸ್ಥಾಪಿಸಿದ ವಿದ್ಯಾಸಂಸ್ಥೆಯ ಕಡೆಗೆ ಮುಖ ಮಾಡಿದ್ದಾರೆ. ಪೂಜ್ಯರ ಸಂಸ್ಥೆಯಲ್ಲಿ ಕಲಿಕೆಗೆ ಪೂರಕ ವಾತಾವರಣ ಕಲ್ಪಿಸಲಾಗಿದೆ.

ಹಾಗಾಗಿ ಪ್ರತಿವರ್ಷ ಈ ಸಂಸ್ಥೆಯ ಒಂದರಿಂದಲೇ ಸುಮಾರು 200ಕ್ಕೂ ಅಧಿಕ ಮಕ್ಕಳು ವೈದ್ಯಕೀಯ ಕ್ಷೇತ್ರ ಪ್ರವೇಶ ಪಡೆಯುತ್ತಿದ್ದಾರೆ. ನೂರಾರು ಮಕ್ಕಳು ಜೆಇಇ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿ ಐಐಟಿ, ಎನ್ಐಟಿ, ಐಐಐಟಿಯಲ್ಲಿ ಪ್ರವೇಶ ಪಡೆದು ಈ ಭಾಗದ ಕೀರ್ತಿ ಹೆಚ್ಚಿಸುತ್ತಿದ್ದಾರೆ.

ಗ್ರಾಮೀಣ ಭಾಗದ ಬಡ ಮಕ್ಕಳು ಎಸ್ಸೆಸ್ಸೆಲ್ಸಿ–ಪಿಯುಸಿಯಲ್ಲಿ ಉತ್ತಮ ಫಲಿತಾಂಶ ಪಡೆದು ಗಡಿ ಜಿಲ್ಲೆ ಬೀದರ್ ಕೀರ್ತಿ ರಾಜ್ಯ ಮತ್ತು ರಾಷ್ಟ್ರಾದ್ಯಂತ ಪಸರಿಸುತ್ತಿದ್ದಾರೆ ಎಂದು ಹೆಮ್ಮೆ ವ್ಯಕ್ತ ಪಡಿಸಿದರು.

ಜೆಇಇಯಲ್ಲಿ ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳು ಯಾವುದೇ ವ್ಯಸನಗಳಿಗೆ ಬಲಿಯಾಗದೇ ಶೈಕ್ಷಣಿಕವಾಗಿ ಪ್ರಗತಿ ಸಾಧಿಸಿ ಕಲಿತ ವಿದ್ಯಾ ಸಂಸ್ಥೆ ಮತ್ತು ಹೆತ್ತವರಿಗೆ ಗೌರವ ತಂದು ಕೊಡಬೇಕು ಎಂದು ತಿಳಿಸಿದರು.

ಪ್ರಾಚಾರ್ಯ ಬಸವರಾಜ ಮೊಳಕೀರೆ ಮಾತನಾಡಿ, ಜೆಇಇ ಮೇನ್ಸ್ ಪರೀಕ್ಷೆಗೆ ದೇಶದಾದ್ಯಂತ ಸುಮಾರು 11 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅದರಲ್ಲಿ ನಮ್ಮ ಸಂಸ್ಥೆಯಿಂದ ಸುಮಾರು 200ಕ್ಕೂ ಅಧಿಕ ವಿದ್ಯಾರ್ಥಿಗಳು ತೇರ್ಗಡೆ ಆಗಿದ್ದಾರೆ.

ವಿದ್ಯಾರ್ಥಿ ವಿಶ್ವರಾಜ ದೇಶಕ್ಕೆ ಪ್ರಥಮ ರ್‍ಯಾಂಕ್ ಪಡೆದು ಸಂಸ್ಥೆಯ ಕೀರ್ತಿ ಹೆಚ್ಚಿಸಿದ್ದಾರೆ ಎಂದು ತಿಳಿಸಿದರು.

**ಆಡಳಿತಾಧಿಕಾರಿ ಮೋಹನರೆಡ್ಡಿ ಅಧ್ಯಕ್ಷತೆ ವಹಿಸಿದ್ದರು.**

ಸಾನ್ನಿಧ್ಯ ವಹಿಸಿದ್ದ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ವಿದ್ಯಾರ್ಥಿಗಳು ಓದಿನ ಜತೆಗೆ ಉತ್ತಮ ಆಚಾರ, ವಿಚಾರ, ನಯ, ವಿನಯತೆ ಮೈಗೂಡಿಸಿಕೊಂಡು ನಾಡಿನ ಉತ್ತಮ ನಾಗರಿಕರಾಗಿ ದೇಶಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಡಿವಾಳಪ್ಪ ಮಂಗಲಗಿ, ಉದ್ಯಮಿ ಜಯರಾಜ ಖಂಡ್ರೆ, ಬೀದರ್ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಶಿವಶಂಕರ ಕಾಮಶೆಟ್ಟಿ, ಪುಣೆಯ ಆದಾಯ ತೆರಿಗೆ ಆಯುಕ್ತ ಮಲ್ಲಿಕಾರ್ಜುನ ಉತ್ತುರೆ, ಬೆಂಗಳೂರಿನ ಟೆಕ್ನಿಕಲ್ ಸೇಲ್ಸ್ ಡಿಪಾರ್ಟ್ಮೆಂಟ್‌ನ ಜಿಎಂ ಸಂತೋಷ ವಿ ಸೇರಿದಂತೆ ಹಲವರು ಇದ್ದರು. ಮಧುಕರ್ ಗಾಂವಕರ್ ನಿರೂಪಿಸಿ, ವಂದಿಸಿದರು.

**ಆಶೀರ್ವಾದ :**

ಪುಣೆಯಲ್ಲಿ ಆದಾಯ ತೆರಿಗೆ ಇಲಾಖೆ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿರುವ ಶ್ರೀಮಠದ ಪರಮ ಭಕ್ತರು ಆಗಿರುವ ಶ್ವೇತಾ ಮಲ್ಲಿಕಾರ್ಜುನ ಉತ್ತುರೆ, ಶ್ವೇತಾ ಮಲ್ಲಿಕಾರ್ಜುನ ಉತ್ತುರೆ, ಬೀದರ್ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಶಿವಶಂಕರ ಕಾಮಶೆಟ್ಟಿ, ಸುಜಾತಾ ಶಿವಶಂಕರ ಕಾಮಶೆಟ್ಟಿ ಮತ್ತು ಬೆಂಗಳೂರಿನ ಟೆಕ್ನಿಕಲ್ ಸೇಲ್ಸ್ ಡಿಪಾರ್ಟ್ಮೆಂಟ್‌ನ ಜಿಎಂ ಸಂತೋಷ ವಿ, ದಿವ್ಯಾ ಸಂತೋಷ ವಿ ಅವರನ್ನು ಪರಮ ಪೂಜ್ಯರು ಹಿರೇಮಠ ಸಂಸ್ಥಾನದ ಪರವಾಗಿ ಸನ್ಮಾನಿಸಿ, ಆಶೀರ್ವದಿಸಿದರು.

**ಜೆಇಇ ಸಾಧಕರಿಗೆ ಸನ್ಮಾನ :**

ಜೆಇಇ ಮೇನ್ಸ್‌ನಲ್ಲಿ ದೇಶಕ್ಕೆ ಪ್ರಥಮ ರ್‍ಯಾಂಕ್ ಪಡೆದ ವಿಶ್ವ–ರಾಜ, ಪ್ರೀತಂ, ಓಜಾಸ್ ಜೈನ್, ಶಿವಾಂಗ, ವಿವೇಕ, ಉಲ್ಲಾಸ್, ಆಜಿಂಕ್ಯ, ನಾರಾಯಣ ರೆಡ್ಡಿ, ಜಯಂತ, ಆದರ್ಶರೆಡ್ಡಿ, ಅರುಣ, ನಿಧಿ, ರವಿಕುಮಾರ, ಶ್ರೀಶೈಲ್, ಸೋಹನಕುಕಾರ, ರಿಷಬ್, ಋಗ್ವೇದ, ಆದಿತ್ಯ, ಸಾಕ್ಷಿ, ಶಿವಕುಮಾರ್, ಕಾರ್ತಿಕಿ, ಕಿಶನ ಸಿಂಗ್, ಶ್ರೇಯಸ್, ವೈಭವ ಮತ್ತು ಅನಂತ ಅವರನ್ನು ಪೀಠಾಧಿಪತಿ ಗುರುಬಸವಪಟ್ಟದ್ದೇವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಸನ್ಮಾನಿಸಿ, ಅಭಿನಂದಿಸಿದರು.

# ಹರಳಯ್ಯ ಸಮುದಾಯ ಏಳಿಗೆಗೆ ಮನವಿ

## 50 ಲಕ್ಷ ರೂ. ಅನುದಾನಕ್ಕೆ ಒತ್ತಾಯ



• **ಮಲ್ಲಮ್ಮ ನುಡಿ ವಾರ್ತೆ, ಕಮಲನಗರ**

ಕಮಲನಗರ ತಾಲೂಕಿನ ಹರಳಯ್ಯ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಆಗ್ರಹಿಸಿ, ಶ್ರೀ ಸಂತ ಹರಳಯ್ಯ ಸಮಾಜ ಸಂಘದ ಮುಖಂಡರು, ಬಾಬು ಜಗಜೀವನರಾಮ್ ಚರ್ಮ ರಾಜ್ಯಾಧ್ಯಕ್ಷರು, ಕೈಗಾರಿಕಾ ಅಭಿವೃದ್ಧಿ ನಿಗಮ (ಐಋಆಏಂಋ), ಬೆಂಗಳೂರು.

ಹಾಗೂ ಸರ್ಕಾರದ ವಿವಿಧ ಇಲಾಖೆಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ಮಂಗಳವಾರ ಮನವಿ ಸಲ್ಲಿಸಿದರು.

ಇತ್ತೀಚೆಗೆ ಬೀದರನಲ್ಲಿ ನಡೆದ ಭೇಟಿಯ ಸಂದರ್ಭದಲ್ಲಿ ಸಮುದಾಯದ ಮುಖಂಡರು ಹರಳಯ್ಯ ಸಮಾಜದ ಏಳಿಗೆಯ ಕುರಿತು ಸುದೀರ್ಘವಾಗಿ ಚರ್ಚಿಸಿದರು. ಕಮಲನಗರ ಹೊಸ ತಾಲ್ಲೂಕಾಗಿರುವುದರಿಂದ ಇಲ್ಲಿ ಸಮಾಜದ ಚಟುವಟಿಕೆಗಳಿಗೆ ಸೂಕ್ತ ವೇದಿಕೆಯಿಲ್ಲ. ಆದ್ದರಿಂದ, ಸಮುದಾಯ ಭವನ ನಿರ್ಮಾಣಕ್ಕಾಗಿ ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ (ಲಿಡ್ಕರ್) 50 ಲಕ್ಷ ರೂಪಾಯಿ ಅನುದಾನ ಮಂಜೂರು ಮಾಡಬೇಕೆಂದು ಪ್ರಮುಖವಾಗಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪುಣೆಯ ಸಮುದಾಯ ಮುಖಂಡರು ಹಾಗೂ ಸಂಘದ ಅಧ್ಯಕ್ಷರಾದ ಮೋಹನರಾವ್ ಸೂರ್ಯವಂಶಿ, ಉಪಾಧ್ಯಕ್ಷರಾದ ಸೌದಾಗರ ಗಾಯಕವಾಡ್, ಮುಖಂಡರಾದ ಸಾಯಿನಾಥ ಕಾಂಬಳೆ, ಚಂದ್ರಕಾಂತ ಕಾಂಬಳೆ, ತಾನಾಜಿ ಗಾಯಕವಾಡ ಹಾಗೂ ವೆಂಕಟರಾವ್ ಕಾಂಬಳೆ ಸೇರಿದಂತೆ ಸಮುದಾಯದ ಇತರ ಪ್ರಮುಖರು ಉಪಸ್ಥಿತರಿದ್ದರು. ಸಮುದಾಯದ ಅಭಿವೃದ್ಧಿಗಾಗಿ ಸರ್ಕಾರ ತಕ್ಷಣ ಸ್ಪಂದಿಸಬೇಕೆಂದು ಮುಖಂಡರು ಈ ಸಂದರ್ಭದಲ್ಲಿ ಆಶಯ ವ್ಯಕ್ತಪಡಿಸಿದರು

**ಮನವಿಯ ಮುಖ್ಯಾಂಶಗಳು:**

ತರಬೇತಿ ಕೇಂದ್ರಗಳ ಸ್ಥಾಪನೆ: ಸಮುದಾಯದ ಯುವಕರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಡಲು ಚರ್ಮ ಕೈಗಾರಿಕೆಗೆ ಸಂಬಂಧಿಸಿದಂತೆ ಆಧುನಿಕ ತರಬೇತಿ ಕೇಂದ್ರಗಳನ್ನು ಸ್ಥಾಪಿಸಬೇಕು.

- **ಮೂಲಸೌಕರ್ಯ: ರಸ್ತೆ ಬದಿಯಲ್ಲಿ ಚಮ್ಮಾರಿಕೆ ವೃತ್ತಿ ಮಾಡುವವರಿಗೆ ಸುಸಜ್ಜಿತ ಅಂಗಡಿ ಮುಂಗಟ್ಟುಗಳನ್ನು ನಿರ್ಮಿಸಿಕೊಡಲು ಹಾಗೂ ಅಗತ್ಯ ಸೌಲಭ್ಯ ಒದಗಿಸಲು ಮನವಿ ಮಾಡಲಾಯಿತು.**
- **ಸರ್ಕಾರಿ ಯೋಜನೆಗಳ ತಲುಪುವಿಕೆ: ಸರ್ಕಾರದ ವಿವಿಧ ಜನಕಲ್ಯಾಣ ಯೋಜನೆಗಳು ಸಮುದಾಯದ ಕಟ್ಟಕಡೆಯ ವ್ಯಕ್ತಿಗೂ ತಲುಪುವಂತೆ ಕ್ರಮ ಕೈಗೊಳ್ಳಬೇಕು.**

# ಪೊಲೀಸ ವಸತಿ ಗೃಹಗಳ ಲೋಕಾರ್ಪಣೆ

## ಪೊಲೀಸ್ ಸಿಬ್ಬಂದಿಗಳ ಕ್ಷೇಮಾಭಿವೃದ್ಧಿಗೆ ಸರ್ಕಾರ ಬದ್ದ : ಪರಮೇಶ್ವರ



• **ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ**

ನಾಡಿನಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊಂದಿರುವ ಪೊಲೀಸ್ ಸಿಬ್ಬಂದಿಗಳ ಕ್ಷೇಮಾಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ರಾಜ್ಯದ ಗೃಹ ಸಚಿವ ಡಾ. ಜಿ ಪರಮೇಶ್ವರ ಹೇಳಿದರು. ಮಂಗಳವಾರ ಕಲಬುರಗಿ ನಗರದ ಸಿ.ಎ.ಆರ್. ಪೊಲೀಸ ಮೈದಾನದಲ್ಲಿ ಕಲಬುರಗಿ ನಗರ ಪೊಲೀಸ್ ಹಾಗೂ ಕಲಬುರಗಿ ಜಿಲ್ಲಾ ಪೊಲೀಸ್ ಮತ್ತು ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಸುಮಾರು 20.88 ಕೋಟಿ ರೂ ಮೊತ್ತದ 72 ಪೊಲೀಸ ವಸತಿ ಗೃಹಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಕಲಬುರಗಿ ನಗರದಲ್ಲಿ 24 ಪೊಲೀಸ್ ವಸತಿ ಗೃಹ ಕಟ್ಟಡಗಳು, ಅಫಜಲಪುರ ಪಟ್ಟಣದಲ್ಲಿ 24, ದೇವಲ ಗಾಣಗಾಪುರದಲ್ಲಿ 12, ಆಳಂದ ಪಟ್ಟಣದಲ್ಲಿ 12 ಪೊಲೀಸ್ ವಸತಿ ಗೃಹ ಕಟ್ಟಡಗಳನ್ನು ಇಂದಿಲ್ಲಿ ಪೊಲೀಸ್ ಸಿಬ್ಬಂದಿಗೆ ಸಮರ್ಪಿಸಲಾಗಿದೆ ಎಂದರು.

ಬ್ರಿಟಿಷರ ಕಾಲದ ಹಳೆಯ ‘ಪೊಲೀಸ್ ಲೈನ್’ ಮನೆಗಳ ಬದಲಿಗೆ, ಆಧುನಿಕ ಸೌಲಭ್ಯವುಳ್ಳ ’ ಪೊಲೀಸ್ ಗೃಹ’ ಯೋಜನೆಯಡಿ ರಾಜ್ಯಾದ್ಯಂತ ಈಗಾಗಲೇ 40,712 ಮನೆಗಳನ್ನು ನಿರ್ಮಿಸಲಾಗಿದೆ. ಇನ್ನೂ 1,830 ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಪೊಲೀಸ್ ಸಿಬ್ಬಂದಿ ಮತ್ತು ಅವರ ಕುಟುಂಬದವರಿಗೆ ಉತ್ತಮ ಸೌಲಭ್ಯ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದರು.

ಸಂಚಾರಿ ನಿರ್ವಹಣೆ ಸೇರಿದಂತೆ ಇಲಾಖೆಯ ಕೆಲಸಗಳಲ್ಲಿ ಆಧುನಿಕ ತಂತ್ರಜ್ಞಾನ ಮತ್ತು ಮಾಡರ್ನ್ ಫೆಸಿಲಿಟಿಗಳನ್ನು ಅಳವಡಿಸಿಕೊಳ್ಳಲು ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಮಳೆ, ಬಿಸಿಲು ಎನ್ನದೆ ಹಗಲಿರುಳು ಶ್ರಮಿಸುವ ಪೊಲೀಸರು

ಮತ್ತು ಅವರ ಕುಟುಂಬದ ಹಿತರಕ್ಷಣೆ ಸರ್ಕಾರದ ಜವಾಬ್ದಾರಿಯಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಪೋಷಕರಿಗೆ ನೆರವಾಗಲು ವಸತಿ ಸೌಕರ್ಯ ಅತ್ಯಗತ್ಯ ಎಂದರು.

ಪ್ರಸ್ತುತ ಇಲಾಖೆಯಲ್ಲಿ ಸುಮಾರು 15,000 ದಿಂದ 16,000 ಹುದ್ದೆಗಳು ಖಾಲಿ ಇವೆ. ಮೊದಲ ಹಂತದಲ್ಲಿ ಸುಮಾರು 8,000 ಹುದ್ದೆಗಳ ಭರ್ತಿಗೆ ಮುಂದಿನ 10 ದಿನಗಳಲ್ಲಿ ಅಧಿಕೃತ ಅಧಿಸೂಚನೆ ಹೊರಡಿಸಲಾಗುವುದು ಎಂದು ಗೃಹ ಸಚಿವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ವೈದ್ಯಕೀಯ ಶಿಕ್ಷಣ, ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮಾತನಾಡಿ, ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ಪೊಲೀಸ್ ಇಲಾಖೆಯಲ್ಲಿ ತರುತ್ತಿರುವ ಅನೇಕ ಬದಲಾವಣೆ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದ ಅವರು, ಇಡೀ ದೇಶದಲ್ಲೇ ಕರ್ನಾಟಕ ಪೊಲೀಸ್ ಇಲಾಖೆ ಉತ್ತಮ ಸ್ಥಾನದಲ್ಲಿರಲು ಅವರ ದೂರದೃಷ್ಟಿ ಮತ್ತು ನಿಸ್ವಾರ್ಥ ಸೇವೆ ಕಾರಣ ಎಂದರು.

ರಾಜ್ಯಸಭೆಯ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರ ಪ್ರಯತ್ನದಿಂದ ಜಾರಿಯಾದ ಆರ್ಟಿಕಲ್ 371(ಜೆ) ಈ ಕಾಯ್ದೆಯು ಈ ಭಾಗದ ಯುವಕರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ (

ಇಂಜಿನಿಯರಿಂಗ್, ವೈದ್ಯಕೀಯ) ದೊಡ್ಡ ಮಟ್ಟದ ಅವಕಾಶಗಳನ್ನು ಕಲ್ಪಿಸಿದೆ. ಗ್ಯಾರಂಟಿ ಯೋಜನೆಗಳ ಜೊತೆಗೆ ಪ್ರತಿ ವರ್ಷ ಈ ಭಾಗಕ್ಕೆ ,5000 ಕೋಟಿ ರೂಪಾಯಿ ಅನುದಾನ ನೀಡುವ ಮೂಲಕ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಮಾತನಾಡಿ ದಕ್ಷಿಣ ಕ್ಷೇತ್ರದ ಕೋಟನೂರ ’ಡಿ’ ಪ್ರದೇಶದಲ್ಲಿ ರಾತ್ರಿವೇಳೆಯಲ್ಲಿ ಅಹಿತಕರ ಘಟನೆಗಳು ನಡೆಯುತ್ತಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಇಲ್ಲಿ ಒಂದು ಪೊಲೀಸ್ ಸ್ಟೇಷನ್ ಸ್ಥಾಪಿಸಬೇಕು ಹಾಗೂ ಪಟ್ಟಣ ಗ್ರಾಮದಲ್ಲಿ ಒಂದು ಔಟ್‌ಪೋಸ್ಟ್ ಸ್ಟೇಷನ್ (ಪೊಲೀಸ್ ಹೊರಠಾಣೆ) ಸ್ಥಾಪಿಸಬೇಕೆಂದು ಸಚಿವರಲ್ಲಿ ಬೇಡಿಕೆ ಇಟ್ಟರು. ಶಾಸಕರ ಮನವಿಗೆ ಪೂರಕವಾಗಿ ಸ್ಪಂದಿಸಿದ ಗೃಹ ಸಚಿವರು, ಈಗಾಗಲೇ ವಿಧಾನಸಭೆಯಲ್ಲಿ ಈ ಬಗ್ಗೆ ಭರವಸೆ ನೀಡಿರುವುದನ್ನು ಸ್ಮರಿಸಿದರು. ಕ್ಷೇತ್ರದ ಜನರ ಬೇಡಿಕೆಗಳನ್ನು ಆದ್ಯತೆ–ಯ ಮೇಲೆ ಈಡೇರಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಆಳಂದ ಶಾಸಕ ಬಿ.ಆರ್. ಪಾಟೀಲ್, ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಖನೀಜಾ ಫಾತಿಮಾ, ಅಫಜಲಪುರ ಶಾಸಕ ಎಂ.ವೈ. ಪಾಟೀಲ್, ವಿಧಾನ ಪರಿಷತ್ ಶಾಸಕರುಗಳಾದ ಜಗದೇವ್ ಗುತ್ತೇದಾರ್, ತಿಪ್ಪಣ್ಣಪ್ಪ ಕಮಕನೂರ್, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯದ್ ಮೊಹಮ್ಮದ್ ಚಿಸ್ತಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಮಜಹರ್ ಆಲಂ ಖಾನ್, ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರರಾದ ವರ್ಷಾ ರಾಜೀವ ಜಾನೆ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಂದ್ರಿಕಾ ಪರಮೇಶ್ವರ್, ರಾಜ್ಯದ ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾ ನಿರೀಕ್ಷಕರು

ಡಾ.ಎಂ.ಎಸ್.ಸಲೀಂ, ಈಶಾನ್ಯ ವಲಯದ ಡಿ.ಐ.ಜಿ ಶಾಂತನು ಸಿನ್ಹಾ, ಕಲಬುರಗಿ ಎಸ್.ಪಿ. ಅಡ್ಡೂರು ಶ್ರೀನಿವಾಸುಲು, ಬೀದರ್ ಎಸ್.ಪಿ. ಪ್ರದೀಪ್ ಗುಂಟಿ, ಯಾದಗಿರಿ ಎಸ್.ಪಿ. ಪೃಥ್ವಿಕ್ ಶಂಕರ್ ಸೇರಿದಂತೆ ಇಲಾಖೆಯ ಪ್ರಮುಖ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಸ್ವಾಗತಿಸಿದರು.

# ತಾಲೂಕು ಪಂಚಾಯತ್ ಪದಾಧಿಕಾರಿಗಳ ಆಯ್ಕೆ ಸಭೆ



• **ಮಲ್ಲಮ್ಮ ನುಡಿ ವಾರ್ತೆ, ಮುಧೋಳ**

ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ 2026–29ರ ಅವಧಿಗೆ ಪದಾಧಿಕಾರಿಗಳ ಆಯ್ಕೆ ಸಭೆ ನಡೆಯಿತು.

ಸಭೆಯಲ್ಲಿ ಬಾಗಲಕೋಟೆ ಜಿಲ್ಲಾ ರಾಜ್ಯ ಪರಿಷತ್ ಸದಸ್ಯರಾದ ಎಸ್.ವೈ. ನರಸನ್ನವರ ಅವರ ಸಮ್ಮುಖದಲ್ಲಿ ಹಾಗೂ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಉಪಸ್ಥಿತಿಯಲ್ಲಿ ಕಾರ್ಯಕ್ರಮ ನಡೆಯಿತು. ಸಭೆಯಲ್ಲಿ ಎಲ್ಲರ ಸರ್ವಾನುಮತದಿಂದ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ತಾಲೂಕು ಪಂಚಾಯತ್‌ನ ನೂತನ ಪದಾಧಿಕಾರಿಗಳಾಗಿ ಗೌರವಾಧ್ಯಕ್ಷರಾಗಿ ರವೀಂದ್ರ ಮಹೇಂದ್ರಕರ್, ಅಧ್ಯಕ್ಷರಾಗಿ ರೋಹಿತ್ ಇಟಕನ್ನವರ, ಉಪಾಧ್ಯಕ್ಷರಾಗಿ ಕವಿತಾ ಮಂಟೂರ, ಪ್ರಧಾನ ಕಾರ್ಯದರ್ಶಿಯಾಗಿ ಮುತ್ತಣ್ಣ ಗುರವ, ಖಜಾಂಚಿಯಾಗಿ ಮಲ್ಲಿಕಾರ್ಜುನ ಹಾವರಗಿ ಹಾಗೂ ಸಂಘಟನಾ ಕಾರ್ಯದರ್ಶಿಯಾಗಿ ಮಂಜುನಾಥ ಕರಿಗೌಡರ ಆಯ್ಕೆಯಾಗಿದ್ದಾರೆ.

ಇದೇ ವೇಳೆ ಸದಸ್ಯರಾಗಿ ಶ್ರೀಲಶ್ರೀ ಟಿ., ರವಿಕುಮಾರ್ ಬೇಟಗೇರಿ, ಮನೋಹರ ಬ್ಯಾಕೋಡ ಹಾಗೂ ವಿವೇಕ ಬಿರಾದಾರ ಅವರನ್ನು ಆಯ್ಕೆ ಮಾಡಲಾಗಿದೆ.

ಈ ಸಂದರ್ಭದಲ್ಲಿ ಮುಧೋಳ ತಾಲೂಕು ನರೇಗಾ ಸಹಾಯಕ ನಿರ್ದೇಶಕರು, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕರು ಸೇರಿದಂತೆ ಮುಧೋಳ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಾಮೂಹಿಕ ವಿವಾಹ ಸಮಾಜಮುಖಿ ಕಾರ್ಯ: ಶ್ರೀಗಳು

• **ಮಲ್ಲಮ್ಮ ನುಡಿವಾರ್ತೆ ಕೊಪ್ಪಳ**



ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಬಡವರಿಗೆ ಅನುಕೂಲವಾಗಲಿದೆ. ಇಂತಹ ಕಾರ್ಯ ಸಮಾಜಮುಖಿ ಕಾರ್ಯವಾಗಿವೆ. ದುಂದು ವೆಚ್ಚ, ಅಡಂಬರಕ್ಕೆ ಕಡಿವಾಣ ಹಾಕಲು ಸಾಧ್ಯವಾಗಲಿದೆ ಎಂದು ಅಳವಂಡಿ ಸಿದ್ದೇಶ್ವರ ಮಠದ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಕೊಪ್ಪಳ ಜಿಲ್ಲೆ ಕೊಪ್ಪಳ ತಾಲ್ಲೂಕಿನ ಮೋರನಹಳ್ಳಿ ಗ್ರಾಮದಲ್ಲಿ ಬಸವ ಜಯಂತಿ ಪ್ರಯುಕ್ತ ಗೋಣಿ ಬಸವೇಶ್ವರ ಸೇವಾ ಸಮಿತಿ ವತಿಯಿಂದ ಆಯೋಜಿಸಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಬೇಸಿಗೆಯಲ್ಲಿ ಬಿಸಿಲಿನ ತಾಪ ಹೆಚ್ಚಾಗಿದ್ದು, ಪ್ರತಿಯೊಬ್ಬರೂ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಜೊತೆಗೆ ಪ್ರಾಣಿ, ಪಕ್ಷಿಗಳಿಗೆ ಅಲ್ಲಲ್ಲಿ ನೀರು ಇಡುವ ಕಾರ್ಯ ಪ್ರತಿಯೊಬ್ಬರಿಂದ ಆಗಬೇಕು ಎಂದರು.

ಗುಮ್ಮಗೋಳದ ಚನ್ನಬಸವೇಶ್ವರ ಸ್ವಾಮೀಜಿ ಮಾತನಾಡಿ, ವಧು ವರರು ಒಬ್ಬರನೊಬ್ಬರು ಅರ್ಥ ಮಾಡಿಕೊಂಡು ಬದುಕನ್ನು ಸಾಗಿಸಬೇಕು. ಹಿರಿಯರನ್ನು ಪೂಜ್ಯ ಭಾವನೆಯಿಂದ ಕಾಣಬೇಕು ಎಂದರು.

ನಂದಿಪುರದ ಅಭಿನವ ಚರಂತೇಶ್ವರ ಸ್ವಾಮೀಜಿ, ಹಗರಿಬೊಮ್ಮನಹಳ್ಳಿಯ ಹಾಲಶಂಕರ ಸ್ವಾಮೀಜಿ ಮಾತನಾಡಿದರು.

ಪ್ರಮುಖರಾದ ವಿರುಪಾಕ್ಷಯ್ಯ, ಶೇಖರಯ್ಯ, ಮುತ್ತಯ್ಯ, ಅಂದಪ್ಪ, ಯಲ್ಲಪ್ಪ, ದೇವಪ್ಪ, ಹನುಮಂತ, ಪಕೀರೇಶ, ಪರಮೇಶ, ಬಸಪ್ಪ, ಬಸಪ್ಪ, ಬಿ.ಎನ್.ಹೋರಪೇಟಿ, ವಿರೂಪಾಕ್ಷಿ, ಬೇನಾಳಪ್ಪ, ಚೇತನ, ಪ್ರದೀಪ್, ಮರಿಯಪ್ಪ, ನಾಗರಾಜ್, ಶರಣಪ್ಪ ಸೇರಿದಂತೆ ಇತರರು ಇದ್ದರು.

# ಜಂಗಮರು ಇತರರು ಕಾಲಂನಲ್ಲಿ ನೊಂದಾಯಿಸಿ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಕೇಂದ್ರ ಸರ್ಕಾರದ ಜನಸಂಖ್ಯಾ ಗಣತಿ ಯಲ್ಲಿ ವೀರಶೈವ ಲಿಂಗಾಯತ ಜಂಗಮರು ತಮ್ಮ ಜಾತಿಯನ್ನು ಇತರರು ಕಾಲಂನಲ್ಲಿ ತಿಳಿಸಲು

ಭಾರತೀಯ ವೀರಶೈವ ಲಿಂಗಾಯತ ಜಂಗಮ ಪರಿಷತ್ ವಿನಂತಿಸಿದೆ.

ಭಾರತ ಸರ್ಕಾರದ ಜನಗಣತಿ 2027 ಗಣತಿ ಕಾರ್ಯದಲ್ಲಿ ವೀರಶೈವ ಲಿಂಗಾಯತ ಜಂಗಮರುಗಡಣತಿದಾರರ ಪ್ರಶ್ನೆ 13 ರಲ್ಲಿ ತಮ್ಮ ಜಾತಿಯನ್ನು ಕ್ರಮ ಸಂಖ್ಯೆ 3 ರಲ್ಲಿ ಇತರರು ಎಂದು ಬರೆಸಬೇಕಾಗಿ ಜಂಗಮ ಪರಿಷತ್ತಿನ ರಾಷ್ಟ್ರೀಯ ಅಧ್ಯಕ್ಷ ಕೆ.ಎಂ.ಮಹೇಶ್ವರ್ ಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ನಗರದ ಕೊಟ್ಟೂರು ಸ್ವಾಮಿ ಬಿಇಡಿ ಕಾಲೇಜಿನಲ್ಲಿ ಸಭೆ ಸೇರಿದ್ದ ಭಾರತೀಯ ವೀರಶೈವ ಲಿಂಗಾಯತ್ ಜಂಗಮ ಪರಿಷತ್ ಮನವಿ ಮಾಡಿದೆ.

ಸಭೆಯಲ್ಲಿ ಪರಿಷತ್ತಿನ ಪದಾಧಿಕಾರಿಗಳು ಹಾಗೂ ಜಂಗಮ ಸಮಾಜದ ಮುಖಂಡರು ಹಾಗೂ ವೀರಶೈವ ಸಮಾಜ ಮುಖಂಡರು ಭಾಗವಹಿಸಿದ್ದರು.

ವೀರಶೈವ ಲಿಂಗಾಯತರ ಜೊತೆ-ಗೆ ಜಂಗಮರು ಕೂಡಾ ಅವರ ಜಾತಿಯನ್ನು ಪ್ರಶ್ನಾವಳಿ ಸಂಖ್ಯೆ 13 ರಲ್ಲಿ 1. ಪರಿಶಿಷ್ಟ ಜಾತಿ 2. ಪರಿಶಿಷ್ಟ ಪಂಗಡಕ್ಕೆ ನಾವು ಸೇರಿರುವುದಿಲ್ಲ ಎಂದು ತಿಳಿಸಲು ಸಭೆ ನಿರ್ಣಯ ಕೈಗೊಂಡಿದೆ.

ಪ್ರಸ್ತುತ ಜಂಗಮರು ವೀರಶೈವ ಲಿಂಗಾಯತ ಕೋಟಾ ದಡಿ 5% ತ್ರಿ ಬಿ ಸೌಲಭ್ಯ ಪಡೆಯುತ್ತಿದ್ದು

ಆರ್ಥಿಕವಾಗಿ ಹಿಂದುಳಿದವರೆಂದು 10% ಸೌಲಭ್ಯವನ್ನು ಪಡೆಯಬಹುದಾಗಿದೆ.

ಕಳೆದ 30 ವರ್ಷಗಳಿಂದ ಬೇಡುವ ಜಂಗಮರೆಂದು ಸೌಲಭ್ಯ ಪಡೆಯಲು ಮುಂದಾದವರಿಗೆ ಸರ್ಕಾರ ಸರ್ಟಿಫಿಕೇಟ್ ನೀಡುತ್ತಿಲ್ಲ ಈಗಾಗಲೇ ಸರ್ಟಿಫಿಕೇಟ್ ಪಡೆದವರು ಸಾಕಷ್ಟು ತೊಂದರೆಗಳನ್ನು ಎದುರಿಸುತ್ತಿದ್ದಾರೆ ಬೇಡ ಜಂಗಮ ಸರ್ಟಿಫಿಕೇಟ್ ಪಡೆದ ಕೆಲವರು ಕೋರ್ಟ್ ಕೇಸುಗಳು, ಹೈಕೋರ್ಟಿನ ದ್ವಿ ಸದಸ್ಯ ಪೀಠ 2025 ಹಾಗೂ ಸುಪ್ರೀಂಕೋರ್ಟಿನವರೆಗೆ ಹೋಗಿರುತ್ತವೆ

ದೇಶದ ಅತ್ಯುನ್ನತ ನ್ಯಾಯಾಲಯವಾಗಿರುವ

ಸುಪ್ರೀಂ ಕೋರ್ಟ್ 1996 ರಲ್ಲಿ 2025 ಹಾಗೂ 2026 ರಲ್ಲಿ ತೀರ್ಪು ನೀಡಿ ವೀರಶೈವ ಇಲ್ಲವೇ ಲಿಂಗಾಯತ್ ಪಂತದಲ್ಲಿ ಬರುವ ಜಂಗಮರು ಬೇಡ ಜಂಗಮ ಸಮುದಾಯಕ್ಕೆ ಸೇರಿದವರಲ್ಲ ವೀರಶೈವ ಜಂಗಮರು ಪರಿಶಿಷ್ಟ ಜಾತಿ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೈಕೋರ್ಟಿನ ದ್ವಿ ಸದಸ್ಯ ಪೀಠದ 2025ರ ತೀರ್ಪನ್ನು ಎತ್ತಿಹಿಡಿದು ತೀರ್ಪು ನೀಡಿದೆ.

ಇತ್ತೀಚಿಗೆ ಕರ್ನಾಟಕ ಸರ್ಕಾರ ಎಸ್ ಸಿ ಪಂಗಡದಲ್ಲಿ ಒಳ ಮೀಸಲಾತಿಯನ್ನು ನೀಡಿರುತ್ತದೆ ಬೇಡ ಜಂಗಮ ಸೌಲಭ್ಯಕ್ಕಿಂತ 3ಬಿ ಸೌಲಭ್ಯ ಹಾಗೂ ಈ ಡಬ್ಲ್ಯೂ ಎಸ್ ವೀರಶೈವ ಜಂಗಮರಿಗೆ ಲಾಭದಾಯಕವಾಗುತ್ತದೆ ಎಸ್ ಸಿ ಪಂಗಡವೆಂದು ಬರೆಸಿದಲ್ಲಿ ಅವರ ಸಂಖ್ಯೆಯನ್ನು ಹೆಚ್ಚು ಮಾಡಿದಂತಾಗುತ್ತದೆ. ಜನ ಗಣತಿ ಕಾರ್ಯದಲ್ಲಿ ಜಂಗಮರು ಪರಿಶಿಷ್ಟ ಜಾತಿ ಎಂದು ಬರೆಸದೆ ಇತರೆ ಜಾತಿಗೆ ಸೇರಿದವರೆಂದು ದಾಖಲೆ ಮಾಡಿಸುವಂತೆ ಮನವಿ ಮಾಡಿದೆ.

ಸಭೆಯಲ್ಲಿ ಪರಿಷತ್ ಪದಾಧಿಕಾರಿಗಳಾದ ವಿ.ಎಸ್.ಪ್ರಭಯ್ಯ, ಇಂದು ಶೇಖರ್, ಬಂಡ್ರಾಳು ಮೃತ್ಯುಂಜಯಸ್ವಾಮಿ, ಹೆಚ್.ಕೆ.ಗೌರಿಶಂಕರ, ಎಸ್.ಎಮ್.ನಾಗರಾಜ್, ಕೆ.ಎಂ. ಚಂದ್ರಮೌಳಿ, ಕೆ.ಎಂ.ನಾಗರಾಜಸ್ವಾಮಿ ಮರಿಸ್ವಾಮಿ ಮಠ ಹಾಗೂ ಸಮಾಜ ಮುಖಂಡರಾದ ಷಡಾಕ್ಷರಯ್ಯ ಸ್ವಾಮಿ, ಜಿ.ಎಂ. ಚಂದ್ರಶೇಖರಯ್ಯ, ತಿಪ್ಪೇಸ್ವಾಮಿ, ಮಂಜುನಾಥ ಮೊದಲಾದವರು ಇದ್ದರು.

# ಖರ್ಗೆ ಹೇಳಿಕೆ ವಿರುದ್ಧ ಬಿಜೆಪಿ ಪ್ರತಿಭಟನೆ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಯತ್ನ ಬಂಧನ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಪ್ರಧಾನಿ ನರೇಂದ್ರ ಮೋದಿ ಅವರನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಯೋತ್ಪಾದಕ ಎಂದು ಕರೆದಿದ್ದ ಹಿನ್ನಲೆಯಲ್ಲಿ ಖರ್ಗೆ ವಿರುದ್ದ ಇಂದು ಬಿಜೆಪಿ ನಗರದಲ್ಲಿ ಪ್ರತಿಭಟನೆ ನಡೆಸಿತು.

ನಗರದ ಇನ್ ಪ್ಯಾಂಟ್ರಿ ರಸ್ತೆಯಲ್ಲಿರುವ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಕಚೇರಿ ಮುತ್ತಿಗೆ ಹಾಕಲು ಬಿಜೆಪಿ ಕಾರ್ಯಕರ್ತರು ಕುಮಾರಸ್ವಾಮಿ ಗುಡಿಬಳಿ ಸೇರಿ ಖರ್ಗೆ ವಿರುದ್ದ ವಾಗ್ದಾಳಿಯ ಫಲಕಗಳನ್ನು ಹಿಡಿದು ಪ್ರತಿಭಟನೆ ನಡೆಸಿದರು.

ಇಲ್ಲಿಂದ ಕಾಂಗ್ರೆಸ್ ಕಚೇರಿ ಕಡೆ ಹೊರಟ ಬಿಜೆಪಿಯ ಮುಖಂಡರು ಮತ್ತು ಕಾರ್ಯಕರ್ತರನ್ನು ಪೊಲೀಸರು ತಡೆದರು ಇದ-ರಿಂದ ಪೊಲೀಸರು ಮತ್ತು ಬಿಜೆಪಿ ಕಾರ್ಯಕರ್ತರ ಮಧ್ಯೆ ಒಂದಷ್ಟು ವಾಗ್ವಾದ ನಡೆಯಿತು

ಕೊನೆಗೆ ಪೊಲೀಸರು ಅವರನ್ನು ಬಂಧಿಸಿ ಕರೆದೊಯ್ದರು.

ಇದಕ್ಕೂ ಮುನ್ನ ಮಾತನಾಡಿದ ಮಾಜಿ ಶಾಸಕ

ಜಿ.ಸೋಮಶೇಖರ ರೆಡ್ಡಿ, ವಿಶ್ವ ಮೆಚ್ಚುವಂತೆ ಆಡಳಿತ ನೀಡಿ ಭಾರತವನ್ನು ವಿಶ್ವ ಮಟ್ಟದಲ್ಲಿ ಘನತೆ ಹೆಚ್ಚುವಂತೆ ಮಾಡಿದ್ದಾರೆ ಪ್ರಧಾನಿ ನರೇಂದ್ರ ಮೋದಿಯವರು.

ಇಡೀ ವಿಶ್ವವೇ ಮೋದಿಯವರ ನಾಯಕತ್ವ ಒಪ್ಪಿಕೊಂಡಿದೆ ಅದ್ರೇ ಕಾಂಗ್ರೆಸ್ ನಾಯಕರು ಒಪ್ಪುತ್ತಿಲ್ಲ.

ಇದೊಂದು ದುರದೃಷ್ಟಕರ ವಿಷಯವಾಗಿದೆ. ಮೋದಿ ಅವರನ್ನು ಖರ್ಗೆ ಅವರು ಭಯೋತ್ಪಾದ-ಕ ಎಂದು ಕರೆದಿರುವ ಬಗ್ಗೆ ಕ್ಷಮೆಯಾಚಿಸಬೇಕು.

ಕೇವಲ ಮೋದಿಯವರಿಗೆ ಮಾತ್ರವಲ್ಲದೇ ದೇಶದ ಜನರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಮಾತನಾಡಿ, ಕಾಂಗ್ರೆಸ್ ನವರು ಮೋದಿ ಅವರ ಬಗ್ಗೆ ಬಳಸುವ ಅಸಂವಿಧಾನಿಕ ಪದಗಳು ಅವರ ಸಂಸ್ಕೃತಿ ಏನೆಂಬುದನ್ನು ತೋರಿಸುತ್ತದೆಂದರು.

ಪ್ರತಿಭಟನೆಯಲ್ಲಿ ಡಾ.ಎಸ್.ಜೆ.ವಿ.ಮಹಿಪಾಲ್, ಪಕ್ಷದ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ನಗರ ಅಧ್ಯಕ್ಷ ಜಿ.

ವೆಂಕಟರಮಣ ಮೊದಲಾದವರು ಪಾಲ್ಗೊಂಡಿದ್ದರು.

# ಬಸ್ ನಿಲ್ದಾಣ ಸ್ವಚ್ಚಗೊಳಿಸಿದ ಸಿಬ್ಬಂದಿ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಸಾಮಾನ್ಯವಾಗಿ ಸಾರಿಗೆ ಸಂಸ್ಥೆಯ ಸಿಬ್ಬಂದಿ ವೇತನ ಹೆಚ್ಚಳ ಸೇರಿದಂತೆ ತಮ್ಮ ಸೌಲಭ್ಯಗಳಿಗೆ ಹೋರಾಟ ಮಾಡುವುದನ್ನು ನೋಡಿದ್ದೇವೆ. ಆದರೆ ಬಳ್ಳಾರಿ ನಗರದಲ್ಲಿ ಬಸ್ ಸ್ಟ್ಯಾಂಡ್, ಡಿಪೋ ಸ್ವಚ್ಛತೆಯ ಕಾರ್ಯದಲ್ಲಿ ತೊಡಗಿ ರಾಜ್ಯದಲ್ಲಿ ಮಾದರಿಯಾಗಿದ್ದಾರೆ

ಸಾರಿಗೆ ಸಿಬ್ಬಂದಿ ವೇದಿಕೆಯು ಸ್ವಚ್ಛತಾ ಅಭಿಯಾನದಡಿ ಬಳ್ಳಾರಿ ಕೇಂದ್ರ ಬಸ್ ನಿಲ್ದಾಣದ ಸಂಡೂರು ಪಾಯಿಂಟ್ ಹತ್ತಿರ ಸ್ವಚ್ಛತಾ ಕಾರ್ಯವನ್ನು ಸಾರಿಗೆ ಸಿಬ್ಬಂದಿ ಮತ್ತು ಅಧಿಕಾರಿ ವರ್ಗದವರು ಕೈಗೊಂಡಿದ್ದಾರೆ.

ಬಸ್ ನಿಲ್ದಾಣದ ಒಳಗೆ ಬರುವ ಪ್ರದೇಶದಲ್ಲಿದ್ದ ಕುಣಿಯನ್ನು ಬಿಂಚೆಕಲ್ಲುಗಳಿಂದ ಮುಚ್ಚಿದ್ದಾರೆ. ಜೊತೆಗೆ ಅಲ್ಲಲ್ಲಿ ಇದ್ದ ಕಸವನ್ನು ಸಂಗ್ರಹಿಸಿದ್ದಾರೆ.

ವಾರಕ್ಕೆ ಒಂದು ದಿನ ಈ ರೀತಿ ಶ್ರಮದಾನ ಮಾಡಲು ಈ ವೇದಿಕೆಯ ಸದಸ್ಯರು ನಿರ್ಧರಿಸಿದ್ದಾರಂತೆ.

ಈ ಕಾರ್ಯದಲ್ಲಿ ಡಿಟಿಓ ಬಿರಾದರ್,

ಲೆಕ್ಕಾಧಿಕಾರಿ ಪಂಪನಗೌಡ, ಕಾರ್ಮಿಕ ಕಲ್ಯಾಣ ಅಧಿಕಾರಿ ಕರೇಗೌಡ, ಮಂಜುನಾಥ್, ಎಟಿಎಂ ವೀರಮ್ಮ ಮತ್ತು 2ನೇ ಘಟಕ ವ್ಯವಸ್ಥಾಪಕ ಗಂಗಧರ, ಸೂಪರ್ವೈಸರ್ ಗೌಸ್ ಮತ್ತು ನಿಲ್ದಾಣ ಅಧಿಕಾರಿ ಪಂಪ ರೆಡ್ಡಿ, ಭಾರತೀಯ ಮಜ್ದೂರ್ ಸಂಘದ ಸೋಮಶೇಖರ್, ವಿನಯ್ ಕುಮಾರ್, ರಮೇಶ್, ವಿಜಯ್ ಕುಮಾರ್, ಬಂಡೆಣಟಿಜಜಜಟಿಜಜಗೌಡ, ಬಸವರಾಜ್ ರ್ಮದಲಾದವರು ಪಾಲ್ಗೊಂಡಿದ್ದರು.

# ಹಿಟ್ನಾಳ್‌ಗೆ ಸಚಿವ ಸ್ಥಾನಕ್ಕಾಗಿ ಆಗ್ರಹ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಕಲ್ಯಾಣ ಕರ್ನಾಟಕದ ಕುರುಬ ಸಮುದಾಯದವರಾದ ಕೊಪ್ಪಳದಲ್ಲಿ ಮೂರನೇ ಬಾರಿ ಶಾಸಕರಾಗಿರುವ ರಾಘವೇಂದ್ರ ಹಿಟ್ನಾಳ್ ಗೆ ಸಚಿವ ಸ್ಥಾನ ನೀಡಿ ಎಂದು ಬಳ್ಳಾರಿ ಜಿಲ್ಲಾ ಕುರುಬ ಸಮಾಜದ ಮುಖಂಡರು ಕಾಂಗ್ರೆಸ್ ಪಕ್ಷದ ಹೈಕಮಾಂಡಿಗೆ ಒತ್ತಾಯಿಸಿದ್ದಾರೆ.

ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಡಾ.ಗಾದಿಲಿಂಗನಗೌಡ, ಅವರು ನಗರದ ಪತ್ರಿಕಾ ಭವನದಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ. ನಾವು ಶೇ 90 ರಷ್ಟು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದರೂ. ನಮ್ಮ ಸಮಜಾಕ್ಕೆ ನ್ಯಾಯಯುತವಾದ ಸ್ಥಾನಮಾನ ದೊರೆಯುತ್ತಿಲ್ಲ ಎಂದು ಆರೋಪಿಸಿದರು.

ಡಿಸಿಸಿ ಅಧ್ಯಕ್ಷರಾಗಿಲ್ಲ. ಜಿಪಂ ಅಧ್ಯಕ್ಷರಾಗಿಲ್ಲ. ಆದರೂ ಈವರೆಗೆ ಸುಮನಿರುವುದು ಏಕೆಂದರೆ, ನಮ್ಮ ಸಮಾಜದವರೇ ಸಿಎಂ ಇದ್ದಾರೆಂಬ ಕಾರಣಕ್ಕೆ. ನೀಡುತ್ತಿಲ್ಲ.

ಈ ಹಿಂದೆ ಬಳ್ಳಾರಿ ಜಿಲ್ಲೆಯಿಂದ ಹಡಗಲಿಯ

ಈ.ಟಿ.ಶಂಬುನಾಥ ಅವರಿಗೆ ಟಿಕಿಟ್ ನೀಡಿ, ಸಚಿವ ಸ್ಥಾನ ನೀಡಿದ್ದು ಬಿಟ್ಟರೆ ನಂತರ ನಮಗೆ ಟಿಕೆಟ್ ನೀಡಿಲ್ಲ.

ಈಗ ನಮ್ಮ ಬೇಡಿಕೆ ಎಂದರೆ ಕಲ್ಯಾಣ ಕರ್ನಾಟಕದ ಭಾಗಕ್ಕೆ ಒತ್ತು ನೀಡಿ. ಸಂಪುಟ ಪುನರ್ ರಚನೆ ಆದರೆ ನಮ್ಮ ಸಮಾಜದವರಾದ ಕೊಪ್ಪಳದ ಶಾಸಕ ರಾಘವೇಂದ್ರ ಹಿಟ್ನಾಳ್ ಅವರಿಗೆ ಸಚಿವ ಸ್ಥಾನ ನೀಡಬೇಕು. ಜೊತೆಗೆ ಒಂದು ಎಂಎಲ್ ಸಿ ಸ್ಥಾನವನ್ನು ನಮ್ಮ ಸಮಾಜದವರಿಗೆ ನೀಡಬೇಕು. ಜೊತೆಗೆ ನಿಗಮ ಮಂಡಳಿಯಲ್ಲೂ ಪಕ್ಷದಲ್ಲಿ ಸಕ್ರೀಯವಾಗಿರುವವ ಇಬ್ಬರಿಗೆ ನೀಡಿ.. ಅದರಲ್ಲಿ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹುದ್ದೆಯನ್ನು ನೀಡಿ ಬೇಕೆಂದರು.

ಸುದ್ದಿಗೋಷ್ಠಿಯಲ್ಲಿ ಬೆಣಕಲ್ ಬಸವರಾಜ್‌ಗೌಡ, ಬಿ.ಕೆ.ಕೆರಕೋಡಪ್ಪ, ದಮ್ಮೂರು ಸೋಮಪ್ಪ, ಕೆ.ಹೊನ್ನಪ್ಪ, ಗಾದಿಲಿಂಗನಗೌಡ, ಚನ್ನಬಸವರಾಜ್, ಕುಡುತಿನಿ ರಾಮಾಂಜನೇಯ, ಉಮಾಪತಿ, ಓಂಕಾರಪ್ಪ, ಗುರುಪಾದ ಮೊದಲಾದವರು ಇದ್ದರು.

# ಮುಂಬೈ ಅಭಿವೃದ್ಧಿ ಪ್ರಾಧಿಕಾರಕ್ಕೆ ಭೇಟಿ ನೀಡಿದ ಬುಡಾ ಅಧ್ಯಕ್ಷ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಬಳ್ಳಾರಿ ಮಹಾನಗರಗಳ ಯೋಜನೆ, ವಿವಿಧ ರೀತಿಯ ಸಮಸ್ಯೆಗಳು ಹಾಗೂ ಅಭಿವೃದ್ಧಿಪಡಿಸುವ ಆಯಾಮಗಳ ಬಗ್ಗೆ ಇಲ್ಲಿನ ಬುಡಾ, ಪಾಲಿಕೆಯ ಜನಪ್ರತಿನಿಧಿಗಳು, ಅಧಿಕಾರಿಗಳು ಅಧ್ಯಯನಕ್ಕೆ ಮುಂಬೈಗೆ ತೆರಳಿದ್ದಾರೆ.

ಬುಡಾ ಅಧ್ಯಕ್ಷ ಜೆ.ಎಸ್. ಆಂಜಿನೇಯಲು, ಮೇಯರ್ ಪಿ.ಗಾದೆಪ್ಪನ, ಸದಸ್ಯರಾದ ಕೆ.ರಂಜಿತ್ ಕುಮಾರ್, ಕೆ.ಎಸ್.ಭರತ್ ಕುಮಾರ್ , ನಗರ ಯೋಜನಾ ಸದಸ್ಯ ಎನ್. ಟಿ ಶಂಕರ್ ರೆಡ್ಡಿ ಹಾಗೂ ಬುಡಾ ಸಿಬ್ಬಂದಿ ಮುಂಬೈ ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ಭೇಟಿನೀಡಿ ಪ್ರಾಧಿಕಾರದ ಆಯುಕ್ತ ಸಂಜಯ್ ಮುಖರ್ಜಿ ಹಾಗೂ ಮುಖ್ಯ ನಗರ ಯೋಜಕ ಶಂಕರ ದೇಶಪಾಂಡೆ ಹಾಗೂ ತಾಂತ್ರಿಕ ಅಧಿಕಾರಿಗಳನ್ನು ಭೇಟಿ ಮಾಡಿ ಸಭೆಯ ಮೂಲಕ ಚರ್ಚೆ ನಡೆಸಿ ಮನನ ಮಾಡಿದ್ದಾರಂತೆ.

# ರೈತರ ಬಂಧನ ಖಂಡಿಸಿ ಪ್ರತಿಭಟನೆ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ತಾಲ್ಲೂಕಿನ ಕುಡತಿನಿ ಮತ್ತು ಸುತ್ತಲ 7 ಹಳ್ಳಿಗಳ ಸುಮಾರು 900.ಎಕ್ಕರೆ ರೈತರ ಜಮೀನನ್ನು ಜಿಂದಾಲ್ ಕಂಪನಿಗೆ ವರ್ಗಾವಣೆ ಮಾಡುವ ತೀರ್ಮಾನದ ವಿರುದ್ಧ ಭೂ ಸಂತ್ರಸ್ತರ ರೈತರು ಶಾಂತಿಯುತವಾಗಿ ಹೋರಾಟ ಮಾಡುತ್ತಿದ್ದ ಸುಮಾರು 300 ಕ್ಕೂ ಹೆಚ್ಚು ರೈತರನ್ನು ಬಂದಿಸಿರುವುದು ಡಿವೈಎಫ್ಐ ತೀವ್ರವಾಗಿ ಖಂಡಿಸಿ ಪ್ರತಿಭಟನೆ ನಡೆಸಿ ರೈತರನ್ನು ಬೇಷರತ್ ಬಿಡುಗಡೆ ಮಾಡಿ ರೈತರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿತ್ತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದು

ಬಳ್ಳಾರಿ ಜಿಲ್ಲೆಯ ಕುಡತಿನಿ ಭಾಗದ ವ್ಯಾಪ್ತಿಯ ಸುತ್ತಲ 7 ಹಳ್ಳಿಗಳ ರೈತರ ಭೂಮಿಯನ್ನು ಅರ್ಸಲಾರ್ ಮಿತ್ತಲ್ ಕಂಪನಿಗಳಿಗಾಗಿ 2010 ರಲ್ಲಿ 5365 ಎಕ್ಕರೆ ಭೂಮಿಯನ್ನು ಬಲವಂತವಾಗಿ ಮೋಸದ ಭೂ ಬೆಲೆಯನ್ನು ನಿಗದಿಸಿ ವಶಪಡಿಸಿಕೊಂಡು ಸುಮಾರು 16 ವರ್ಷಗಳು ಕಳೆದರು ಕೂಡ ಈ ಭಾಗದಲ್ಲಿ ಉದ್ದೇಶಿತ ಕೈಗಾರಿಕೆಗಳನ್ನು ಸ್ಥಾಪನೆ ಮಾಡದೆ

ಈ ಭಾಗದ ರೈತ ಮಕ್ಕಳ ಯುವಕರಿಗೆ ಉದ್ಯೋಗಗಳು

ಇಲ್ಲದೆ ಈ ಭಾಗದ ಕುಡಿತಿನಿ ಸೇರಿದಂತೆ ಸುತ್ತಲಿನ ಏಳು ಹಳ್ಳಿಗಳ

ರೈತರು ಭೂ ಸಂತ್ರಸ್ತರ ಹೋರಾಟ ಸಮಿತಿಯ ನೇತೃತ್ವದಲ್ಲಿ ಕಳೆದ 1228 ದಿನಗಳಿಂದ ವಿವಿಧ ರೀತಿಯ

ಶಾಂತಿಯುತ ಹೋರಾಟಗಳನ್ನು ಮಾಡುತ್ತ ನ್ಯಾಯವಾದ ಭೂ ಬೆಲೆ ನೀಡಬೇಕು, ಉದ್ದೇಶಿತ ಕೈಗಾರಿಕೆಗಳನ್ನು ಪ್ರಾರಂಭ ಮಾಡಬೇಕು, ಭೂ ಸಂತಸ್ತರ ಕುಟುಂಬಗಳಿಗೆ ಉದ್ಯೋಗ ನೀಡಬೇಕು, ಇಲ್ಲವಾದರೆ ನಮ್ಮ ಭೂಮಿ ನಮಗೆ ವಾಪಸು ನೀಡಬೇಕು ಎಂದು ಹೋರಾಟ ಮಾಡುತ್ತಿದ್ದರು ಆದರೇ ರೈತರ ನ್ಯಾಯಯುತ ಬೇಡಿಕೆಗಳಿಗೆ ಕಿವಿ ಕೊಡದ ಸರ್ಕಾರ ಮತ್ತು ಜಿಲ್ಲಾಡಳಿತ.ಕೆಐಎಡಿಬಿ ಮೂಲಕ ಆರ್ಸಲ್ ಮಿತ್ತಲ್ ಗಾಗಿ ವಶಪಡಿಸಿಕೊಂಡ ಭೂಮಿಯಲ್ಲಿ ಈಗ ಜಿಂದಾಲ್ ಕಂಪನಿಯ ಜೆ.ಎಫ್. ಇ.ಎಲೆಕ್ಟಿಕಲ್ ಗಾಗಿ 204 ಎಕರೆಗಳು ಒಳಗೊಂಡು ಒಟ್ಟು ಸುಮಾರು ಸುಮಾರು 900 ಎಕರೆ ಜಮೀನನ್ನು ಜಿಂದಾಲ್ ಕಂಪನಿಗೆ ವರ್ಗಾವಣೆ ಮಾಡುವ ತೀರ್ಮಾನದ ವಿರುದ್ಧ ರೈತರು ಶಾಂತಿತವಾಗಿ ಪ್ರತಿಭಟನೆ ಮಾಡುತ್ತಿದ್ದ ಸುಮಾರು 300 ಕ್ಕೂ ಹೆಚ್ಚು ರೈತರು ಮತ್ತು ರೈತ ಮಹಿಳೆಯರನ್ನು ಬಂಧಿಸಿರುವುದನ್ನು ಡಿವೈಎ□□□ ಬಳ್ಳಾರಿ ಜಿಲ್ಲಾ ಸಮಿತಿಯು ತೀವ್ರವಾಗಿ ಖಂಡಿಸುತ್ತದೆ ಮತ್ತು ಬಂಧಿತರನ್ನು ಈ ಕೂಡಲೇ ಬೇಷರತ್ತಾಗಿ ಬಿಡುಗಡೆ ಮಾಡಿ ಕೂಡಲೇ 144. ಸೆಕ್ಷನ್ ನಿಷೇಧಜ್ಞೆಯನ್ನು ವಾಪಾಸ್ ಪಡಿಯಲು ಆಗ್ರಹಿಸಿದೆ.

ರಾಜ್ಯ ಸರ್ಕಾರ ತಕ್ಷಣವೇ ಮಧ್ಯಪ್ರವೇಶಿಸಿ ರೈತರಿಗಾದ ಅನ್ಯಾಯವನ್ನು ಸರಿಪಡಿಸಬೇಕು. ಕೆಐಎಡಿಬಿ ಜಿಂದಾಲ್ ಕಂಪನಿ ಜೊತೆ ಮಾಡಿಕೊಂಡಿರುವ ಅಕ್ರಮವಾದ ಜಮೀನು ಪರಭಾರೆಯನ್ನು ರದ್ದುಪಡಿಸಬೇಕು, ಸುಪ್ರೀಂ ಕೋರ್ಟ್ ತೀರ್ಪಿನಂತೆ ಪರಿಹಾರ ಒದಗಿಸಿ ಕೈಗಾರಿಕೆಗಳನ್ನು ಸ್ಥಾಪಿಸಬೇಕು ಅಥವಾ ರೈತರಿಗೆ ಅವರ ಭೂಮಿಯನ್ನು ವಾಪಸು ನೀಡಬೇಕು. ಬಂಧಿಸಿರುವ ಎಲ್ಲಾ ರೈತ ಮುಖಂಡರನ್ನು, ರೈತರನ್ನು ಮತ್ತು ಮಹಿಳೆಯರನ್ನು ಬಿಡುಗಡೆ ಮಾಡಲು ಮಾನ್ಯ ಮುಖ್ಯಮಂತ್ರಿಗಳು ಕೂಡಲೇ ಮಧ್ಯಪ್ರವೇಶಿಸಿ ರೈತರೊಂದಿಗೆ ಮಾತುಕತೆ ನಡೆಸಬೇಕೆಂದು

ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ ಡಿವೈಎ□□□ ಬಳ್ಳಾರಿ ಜಿಲ್ಲಾ ಸಮಿತಿ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಡಿವೈಎ□□□. ಸಂಘಟನೆಯ ಜಿಲ್ಲಾ ಅಧ್ಯಕ್ಷರು ಯು.ಎರ್ರಿಸ್ವಾಮಿ.ಬಿಪಿ.ನವೀನ್ ಜಿಲ್ಲಾ ಖಜಾಂಚಿ ಜಿಎನ್.ಎರ್ರಿಸ್ವಾಮಿ ಕ್ರೀಡಾ ಘಟಕದ ಅಧ್ಯಕ್ಷರು ಎ.ತಿಪ್ಪೇರುದ್ರ ತಾ ಅಧ್ಯಕ್ಷರು ಮಾಸ್ತನ್ ಸಾಬ್ ಶಿರಾಜ್

ಕೆ ಶಿವಾನಂದ್ ನಾಶಿರ್ ಉಓ.ಯಶವಂತ ರಾಮಾಂಜಿ ತುಮಟಿ ವಿಜಯ್ ಕುಮಾರ್ ರಂಗಸ್ವಾಮಿ ಓಬಳೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಓಲಂಪಿಕ್ ನಲ್ಲಿ ಬಳ್ಳಾರಿ ಮಕ್ಕಳು ಪ್ರಜ್ವಲಿಸಬೇಕು: ಸೋಮಶೇಖರ ರೆಡ್ಡಿ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ನಗರದ ಕ್ರೀಡಾಂಗಣದಲ್ಲಿ ಕ್ರೀಡಾ ಇಲಾಖೆಯ ಸಹಯೋಗದೊಂದಿಗೆ ಬಳ್ಳಾರಿ ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಷನ್ ಏ.8 ರಿಂದ 28 ರ ವರೆಗೆ 22 ದಿನಗಳ ಕಾಲ ನಡೆದ ಕ್ರೀಡಾ ಪ್ರತಿಭೆಗಳ ಹುಡುಕಾಟದ ಉಚಿತ ಅಥ್ಲೆಟಿಕ್ ತರಬೇತಿಯ ಬೇಸಿಕ್ ಶಿಬಿರದ ಸಮಾರೋಪ ಸಮಾರಂಭ ಇಂದು ನಡೆಯಿತು.

ನಾಲ್ಕು ನೂರಕ್ಕೂ ಹೆಚ್ಚು ಮಕ್ಕಳಿಗೆ ಬೇಸಿಗೆಯ ರಜೆ ದಿನಗಳಲ್ಲಿ ಪ್ರತಿದಿನ ಬೆಳಿಗ್ಗೆ 6.30 ರಿಂದ 8.30

ಸಂಜೆ 5 ರಿಂದ 7 ವರೆಗೆ ತರಬೇತಿ ನೀಡಲಾಗಿದೆ.

ಮುಖ್ಯವಾಗಿ ಈ ಶಿಬಿರದಲ್ಲಿ ಫಿಜಿಕಲ್ ಫಿಟ್ ನೆಸ್ ರನ್ನಿಂಗ್ ಮತ್ತು ಲಾಂಗ್ ಜಂಪ್ ತರಬೇತಿ ನೀಡಿದೆ.

400 ಕ್ಕೂ ಹೆಚ್ಚು ಮಕ್ಕಳು ಪಾಲ್ಗೊಂಡಿದ್ದರು. ಇವರಿಗೆ ತರಬೇತಿ ನೀಡಿ ಬೇಸಿಕ್ ತರಬೇತಿಯಲ್ಲಿ ಸ್ಪರ್ಧೆ ನಡೆಸಿ 92 ಮಕ್ಕಳನ್ನು ಆಯ್ಕೆ ಮಾಡಿದ್ದು ಇವರಿಗೆ ಮೇ. 1 ರಿಂದ ಒಂದು ತಿಂಗಳಕಾಲ ತರಬೇತಿ ನೀಡಲಿದೆ.

ಮುಂದಿನ ತರಬೇತಿಗೆ ಆಯ್ಕೆ ಮಾಡಿದ ಮಕ್ಕಳಿಗೆ ನಗರದ ಮಾಜಿ ಶಾಸಕ .ಜಿ.ಸೋಮಶೇಖರ ರೆಡ್ಡಿ ಮೆಡಲ್ ಗಳನ್ನು ವಿತರಿಸಿದರು.

ಈ ವೇಳೆ ಮಾತನಾಡಿದ ಅವರು. ನಾವು ಸಹ ಚಿಕ್ಕ ಮಕ್ಕಳಿಂದಲೇ ತರಬೇತಿ ನೀಡಿದರೆ ಚೈನ, ರಷ್ಯಾ, ಜರ್ಮನಿ ಮೊದಲಾದ ದೇಶಗಳಂತೆ ನಮ್ಮ ದೇಶದ ಮಕ್ಕಳು ಒಲಂಪಿಕ್ ಮೆಡಲ್ ಗಳನ್ನು ತರಬಹುದು ಅದಕ್ಕೆ ಇಂತಹ ಶಿಬಿರಗಳು ಸಹಕಾರಿಯಾಗಲಿವೆ. ಒಲಂಪಿಕ್ ನಲ್ಲಿ ನಮ್ಮ ಮಕ್ಕಳು ಉತ್ತಮ ತರಬೇತಿ ಪಡೆದು ಪ್ರಜ್ವಲಿಸಬೇಕು ಎಂದರು.

## ಶ್ರೀಶಿರಡಿ ಸಾಯಿ ಸೇವಾ ಸತ್ಸಂಗ ಟ್ರಸ್ಟನಿಂದ

# ಬಾಯಾರಿದವರಿಗೆ ನೀರು ಮಜ್ಜಿಗೆ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಬೇಸಿಗೆ ಎಂದಾಕ್ಷಣ ಬಳ್ಳಾರಿಯ ಬಿಸಿಲಿನ ಬೇಗೆ ಎಲ್ಲರನ್ನು ಚಿಂತೆ-ಗೀಡು ಮಾಡುತ್ತದೆ. ಕಾರಣ ಇಲ್ಲಿನ 40 ಡಿಗ್ರಿ ಸೆಲ್ಸಿತಸ್ ಗೂ ಹೆಚ್ಚಿನ ತಾಪಮಾನ.

ನಗರದಕ್ಕೆ ಬರುವ ಮತ್ತು ಇಲ್ಲಿಯೇ ಓಡಾಡುವ ಜನತೆ ಮಧ್ಯಾಹ್ನದ ವೇಳೆ ಬಿಸಿಲಿನ ತಾಪಕ್ಕೆ ಬಾಯಾರಿದರೆ ಎಳೆನೀರು, ತಂಪು ಪಾನಿಯ, ಹಣತಣುಗಳ ಮೊರೆ ಹೋಗುತ್ತಾರೆ ಹಣ ಇದ್ದವರು. ಆದರೆ ಬಡಜನತೆ ದುಡಿಯುವ ವರ್ಗದವರು, ಒಂದಿಷ್ಟು ತಂಪು ನೀರು, ಮಜ್ಜಿಗೆ ಸಿಕ್ಕರೆ ಸಾಕು ಎನ್ನುತ್ತಾರೆ. ಇದನ್ನು ಮನಗಂಡು ನಗರದ ಶ್ರೀಶಿರಡಿ ಸಾಯಿ ಸೇವಾ ಸತ್ಸಂಗ ಟ್ರಸ್ಟ್ ಕಳೆದ 11 ವರ್ಷಗಳಿಂದ ಇಲ್ಲಿನ ಗ್ರಹಂ ರಸ್ತೆಯಲ್ಲಿ ಸಣ್ಣ ಮಾರುಕಟ್ಟೆ ಬಳಿ ಬೇಸಿಗೆಯ ಮೂರು ತಿಂಗಳಕಾಲ ನೀರು, ಮಜ್ಜಿಗೆ ವಿತರಣೆ ಮಾಡುತ್ತಿದೆ.

ಕಳೆದ ಮಾರ್ಚ್ 11 ರಿಂದ ಈ ಸೇವಾ ಕಾರ್ಯ ಆರಂಭಗೊಂಡಿದೆ. ನಿತ್ಯ 500 ಲೀಟರ್ ಮಜ್ಜಿಗೆ ವಿತರಣೆ ಮಾಡುತ್ತಾರೆ. ಇಲ್ಲಿಗೆ ಬರುವ, ಸುತ್ತಮುತ್ತಲಿನ ವ್ಯಾಪಾರಿ ಪ್ರದೇಶದ ಬಡ ಜನತೆ ಮಜ್ಜಿಗೆ, ನೀರು ಸೇವಿಸುತ್ತಾರೆ. ನೀರನ್ನು ಪಾಲಿಕಯವರೇ ಇವರಿಗೆ ಕೊಡುತ್ತಾರೆ. ಇನ್ನು ಮಜ್ಜಿಗೆಯನ್ನು ದಾನಿಗಳು ಕೊಡುತ್ತಾರೆ.

ದಾನಿಗಳ ದೊರೆಯದಿದ್ದರೆ ಟ್ರಸ್ಟ್ ನಿಂದಲೇ ಅದರ ವೆಚ್ಚ ಭರಿಸಲಾಗುತ್ತಿದೆ ಎನ್ನುತ್ತಾರೆ ಟ್ರಸ್ಟ್ ನ ಅಧ್ಯಕ್ಷ ಗೋಪಾಲ ಕೃಷ್ಣ ಅವರು.

# ಕ್ಷೇತ್ರ ವಿಂಗಡಣೆ ಜೊತೆ ಮಹಿಳಾ ಮೀಸಲಾತಿ ಸೇರಿಸಿದ್ದಕ್ಕೆ ಕಾಂಗ್ರೆಸ್ ವಿರೋಧ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಸಂಸತ್ ನಲ್ಲಿ ಶೇ 33 ಮಹಿಳಾ ಮೀಸಲಾತಿ ಬಿಲ್ 2023 ರಲ್ಲಿಯೇ ಸಂಸತ್ ನಲ್ಲಿ ಪಾಗಿದೆ. ನಂತರ ಅದನ್ನು ಜಾರಿಗೆ ತರದೇ ಈಗ ತರಾ ತುರಿಯಲ್ಲಿ ಕ್ಷೇತ್ರ ಮರುವಿಂಗಡಣೆ ಜೊತೆಗೆ ಈ ಬಿಲ್ ತಿದ್ದುಪಡಿಗೆ ತಂದಿದ್ದರಿಂದ ಕಾಂಗ್ರೆಸ್ ಹಾಗು ಮಿತ್ರ ಪಕ್ಷಗಳು ವಿರೋಧ ಮಾಡಿದೆಂದು ಸಂಡೂರು ಶಾಸಕಿ ಅನ್ನಪೂರ್ಣ ತುಕರಾಂ ಹೇಳಿದ್ದಾರೆ.

ಅವರು ಇಂದು ನಗರದಲ್ಲಿನ ಪಕ್ಷದ ಜಿಲ್ಲಾ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡುತ್ತಿದ್ದರು. ಜನಸಂಖ್ಯಾ ಆಧಾರದ ಮೇಲೆ ಮೀಸಲಾತಿ ತರವ ಹುನ್ನಾರ ಬಿಜೆಪಿಯರದ್ದಾಗಿತ್ತು. ಅದು ಆದರೆ ಉತ್ತರ ಭಾರತದಲ್ಲಿ ಕ್ಷೇತ್ರಗಳ ಸಂಖ್ಯೆ ಹೆಚ್ಚಿ, ದಕ್ಷಿಣ ಭಾರತದವರಿಗೆ ಅನ್ಯಾಯವಾಗುತ್ತಿತ್ತು ಅದಕ್ಕೆ ಮಹಿಳಾ ಮೀಸಲಾತಿ ಬಿಲ್ ನ್ನು ವಿರೋಧಿಸಿದೆ ಎಂದು ಸಮರ್ಥಿಸಿಕೊಂಡರು. ಈ ಹಿಂದೆ 2014 ರಲ್ಲಿಯೇ ಅಧಿಕಾರಕ್ಕೆ ಬಂದ ಎನ್ ಡಿಎ ಕೂಟ ಈ ವರೆಗೆ ಯಾಕೆ ಮಹಿಳಾ ಮೀಸಲಾತಿಯನ್ನು ತರಲಿಲ್ಲ. ಹೀಗ ಯಾಕೆ ಏಕಾ ಏಕಿ ಮಹಿಳೆಯರ ಮೇಲೆ ಪ್ರೀತಿ ಹೆಚ್ಚಾಯ್ತು ಎಂದು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ, ಜಿಲ್ಲಾ ಅಧ್ಯಕ್ಷೆ ಮಂಜುಳಾ, ನಾಗಮಣಿ ಜಿಂಕಲ್ , ಆಶಾಲತಾ ಸೋಮಪ್ಪ, ರಾಜೇಶ್ವರಿ, ಕಮಲ ಮರಿಸ್ವಾಮಿ, ಮಂಜುಳ, ಶಮೀಮ್ ಜಕ್ಲಿ ಮೊದಲಾದವರು ಇದ್ದರು.

# ಜಿಲ್ಲಾ ಅಧ್ಯಕ್ಷರಾಗಿ ಮುಂದುವರಿಕೆ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಅಂಬೇಡ್ಕರ್ ಭವನದಲ್ಲಿ ಬಳ್ಳಾರಿ ಜಿಲ್ಲಾ ಭೋವಿ ವಡ್ಡರ ಸಂಘದ ಸರ್ವ ಸದಸ್ಯರ ಸಭೆ ನಡೆಯಿತು. ಸಭೆಯಲ್ಲಿ ಹಾಲಿ ಅಧ್ಯಕ್ಷ ವಿ.ರಾಮಾಂಜಿನೇಯಲು ಅವರನ್ನು ಪುನರ್ ಆಯ್ಕೆ ಮಾಡಿದ್ದು. ಕಾರ್ಯಕಾರಿ ಸಮಿತಿ ಸದಸ್ಯರನ್ನೂ ಈ ಸಂದರ್ಭದಲ್ಲಿ ಆಯ್ಕೆ ಮಾಡಲಾಗಿದೆ.ಕಾರ್ಯಕಾರಿ ಸಮಿತಿಗೆ:ದೊಡ್ಡ ರಾಮಣ್ಣ, ಎಂ. ಟಿ. ಮಲ್ಲೇಶ್, ಮಿತಿಲೇಶ್, ಬಂಡಿ ಮೋಟ್ ಗಾದಿಲಿಂಗ, ಟಿ. ವಿ. ವೆಂಕಟೇಶಲು, ಬಂಡಿ ಹಟ್ಟಿ ಮಹೇಶ್, ಸಿರುಗುಪ್ಪ ಜೆ. ಈಶ್ವರಪ್ಪ ರಿಟರ್ಡ್ ಪ್ರಿನ್ಸಿಪಾಲ್ ಶೇಷಣ್ಣ, ಡ್ರಗ್ಸ್ ಇಲಾಖೆಯ ನಾಗರಾಜ, ಪಾಲಿಕೆ ಸಧಸ್ಯರಾದ ಕುಬೇರ, ಮಿಂಚು ಶ್ರೀನಿವಾಸ್, ಜಲಾಲ್ ಕುಮಾರ್, ಕುವೆಂಪುನಗರ್ ರಮೇಶ್, ಕಾಟೆಗುಡ್ಡ ತಮ್ಮಣ್ಣ, ಅಲ್ಲಿಪುರ ರಾಮಿರೆಡ್ಡಿ,ವಕೀಲ ರಾಮಕೃಷ್ಣ, ಪವರ್ಲೈನ್ ವೆಂಕಟೇಶ್ ಸಂಗನಕಲ್ಲು ವೆಂಕಟೇಶ್ ಇವರನ್ನು ಆಯ್ಕೆ ಮಾಡಲಾಗಿದೆಂದುಜೊತೆಗೆ ನಾಮ ನಂತರ ದೇಶಿಯ ನಿರ್ದೇಶಕರನ್ನಾಗಿ ವಿ. ರವಿ, ರಿಟೈರ್ಡ್ ಅಧ್ಯಾಪಕ ಪ್ರಕಾಶ್, ಇಬ್ರಾಹಿಂಪುರ ಶ್ರೀನಿವಾಸ್, ಬೊಬ್ಬಕುಂಟ ಗಾದಿಲಿಂಗ, ಸೋಮಸಮುದ್ರ ರಘು ಅವರನ್ನು ನೇಮಕ ಮಾಡಿದೆಂದು ಅಧ್ಯಕ್ಷ ರಾಮಾಂಜನೇಯಲು ಸಂಜೆವಾಣಿಗೆ ತಿಳಿಸಿದ್ದಾರೆ.

# ಉಪ ಚುನಾವಣೆ :ಮತ ಎಣಿಕೆ ಸಿಬ್ಬಂದಿಗಳಿಗೆ ತರಬೇತಿ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ–2026ರ ಮತ ಎಣಿಕೆ ಕಾರ್ಯ ಮೇ 4 ರಂದು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆದಿದ್ದು, ಈ ಹಿನ್ನಲೆಯಲ್ಲಿ ಮತ ಎಣಿಕೆ ಸಿಬ್ಬಂದಿಗಳಿಗೆ ಮಂಗಳವಾರ ತರಬೇತಿ ಕಾರ್ಯಕ್ರಮ ಜರುಗಿತು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಹಮ್ಮಿಕೊಂಡ ತರಬೇತಿಯನ್ನು ಉದ್ದೇಶಿಸಿ ಮಾತನಾಡಿದ ಮತ ಏಣಿಕೆ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿ ಹಾಗೂ ಸಿಬ್ಬಂದಿಗಳು ತಮ್ಮ ಕಾರ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಮತ ಎಣಿಕೆ ಕಾರ್ಯ ನಡೆಸಲಾಗುತ್ತಿದೆ.

ಈಗಾಗಲೇ ಮತ ಎಣಿಕೆ ಕೇಂದ್ರ ಸಂಪೂರ್ಣ ಸಜ್ಜಾಗಿದ್ದು, ಚುನಾವಣಾ ಆಯೋಗದ ನಿರ್ದೇಶನಗಳನ್ವಯ ಎಣಿಕೆ ಕಾರ್ಯವನ್ನು ಯಶಸ್ವಿಯಾಗಿ ನಡೆಸಲು ತಿಳಿಸಿದರು. ಮತ ಎಣಿಕೆಗೆ ಒಟ್ಟು 14 ಟೇಬಲ್‌ಗಳನ್ನು ಇರಿಸಲಾಗಿದ್ದು, ಪ್ರತಿ ಟೇಬಲ್‌ಗೆ ತಲಾ ಒಬ್ಬರಂತೆ ಮತ ಎಣಿಕಾ ಮೇಲ್ವಿಚಾರಕ, ಸಹಾಯಕ ಮತ್ತು ಮೈಕ್ರೋ ವೀಕ್ಷಕರು ಸೇರಿದಂತೆ ಒಟ್ಟು 63 ಸಿಬ್ಬಂದಿಗಳು ಕಾರ್ಯನಿರ್ವಹಿಸಲಿದ್ದಾರೆ. ಅಂಚೆ ಮತಪತ್ರ ಎಣಿಕೆಗೆ ಪ್ರತ್ಯೇಕ ಕೊಠಡಿ ಇದ್ದು, 2 ಟೇಬಲ್ ಇರಿಸಲಾಗಿದೆ. ಸ್ಕ್ಯಾನಿಂಗ್ ಮಾಡಲು ಟೇಬಲ್ ಸಹ ಇರಿಸಲಾಗಿದೆ ಎಂದು ತಿಳಿಸಿದರು.

ಮಾಸ್ಟರ ಟ್ರೈನರ್ ಶಶಿಶೇಖರ ರೆಡ್ಡಿ ಅವರು ಪ್ರಾತ್ಯಕ್ಷಿಕೆಯ ಮೂಲಕ ಮತ ಏಣಿಕೆ ಕುರಿತು ಸಂಪೂರ್ಣ ಮಾಹಿತಿಯನ್ನು ತಿಳಿಸಿಕೊಟ್ಟರು. ಮತ ಎಣಿಕೆ ಪ್ರಕ್ರಿಯೆಯ ಎಲ್ಲ ಹಂತಗಳ ಕುರಿತು ವಿವರವಾದ ಮಾಹಿತಿ ನೀಡಿದರು.

ವಿವಿಎಂ ಯಂತ್ರಗಳ ಬಳಕೆ, ವಿವಿಪ್ಯಾಟ್ ಸ್ಲಿಪ್‌ಗಳ ಪರಿಶೀಲನೆ, ಮತ ಎಣಿಕೆ ವೇಳೆ ಅನುಸರಿಸಬೇಕಾದ ನಿಯಮಗಳು ಹಾಗೂ ಎಚ್ಚರಿಕೆ ಕ್ರಮಗಳ ಕುರಿತು ಪ್ರಾಯೋಗಿಕ ತರಬೇತಿ ನೀಡಿದರು.

ತರಬೇತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರರಾದ ವಾಸುದೇವ ಸ್ವಾಮಿ, ಡಾ.ಪ್ರದೀಪಕುಮಾರ ಸೇರಿದಂತೆ

ಮತ ಎಣಿಕೆ ಮೇಲ್ವಿಚಾರಕರು, ಸಹಾಯಕರು ಹಾಗೂ ಮೈಕ್ರೋ ಆಬ್ಸರವರ್ ಪಾಲ್ಗೊಂಡಿದ್ದರು.

# ಪಶು ಪಕ್ಷಿ ಉಳಿವಿಗೆ ಕೈಜೋಡಿಸಿದ ಯುವಕರು, ಸೇವಾ ಕಾರ್ಯಕ್ಕೆ ಮೆಚ್ಚುಗೆ: ರಾಥೋಡ್



• **ಮಲ್ಲಮ್ಮ ನುಡಿ ವಾರ್ತೆ, ಬೀದರ್**

ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಉರಿ ಬಿಸಿಲಿನ ತಾಪಮಾನ ಹೆಚ್ಚಾಗಿ, ಸಣ್ಣಪುಟ್ಟ ಅಣೆಕಟ್ಟುಗಳ ನೀರು ಬತ್ತಿ ಹೋಗಿವೆ. ಇದರ ಪರಿಣಾಮವಾಗಿ ಪಶು, ಪಕ್ಷಿ ಹಾಗೂ ಕಾಡು ಪ್ರಾಣಿಗಳಿಗೆ ಕುಡಿಯುವ ನೀರಿನ ತೀವ್ರ ಅಭಾವ ಎದುರಾಗಿದೆ. ಇಂತಹ ಸಂಕಷ್ಟದ ಸಂದರ್ಭದಲ್ಲಿ ಕಾಡು ಹಾಗೂ ಉದ್ಯಾನ ಪ್ರದೇಶಗಳಲ್ಲಿ ಅಲ್ಲಲ್ಲಿ ನೀರಿನ ಕುಂಡಾಗಳನ್ನು ಇಟ್ಟು ಪ್ರಾಣಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡುತ್ತಿರುವುದು ಅತ್ಯಂತ ಅಗತ್ಯ ಕಾರ್ಯವಾಗಿದೆ. ಈ ದಿಸೆಯಲ್ಲಿ ಕೈಗೊಳ್ಳಲಾಗುತ್ತಿರುವ ಸೇವಾ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದೆ ಎಂದು ಡಿಎಫ್‌ಆರ್‌ಒ ರಘುನಾಥ್ ರಾಥೋಡ್ ಅಭಿಪ್ರಾಯಪಟ್ಟರು.

ಹಳ್ಳದಕೇರಿಯ ಸಸ್ಯೋದ್ಯಾನ ದಲ್ಲಿ ಚಂದ್ರಶೇಖರ್ ಆಜಾದ್ ಯುವಕ ಸಂಘದ ವತಿಯಿಂದ ಪಶು ಪಕ್ಷಿಗಳಿಗಾಗಿ ಮಣ್ಣಿನ ತೊಟ್ಟಿಗಳನ್ನು ಇಟ್ಟು ಅವುಗಳ ನೀಡರಿಕೆಯ ದಾಹ ನೀಗಿಸಲು ಏರ್ಪಡಿಸಿದ ಕಾರ್ದಯಕ್ರಮದಲ್ಲಿ ಮಾತನಾಡಿದರು.

ಚಂದ್ರಶೇಖರ್ ಆಜಾದ್ ಯುವ ಸಂಘದ ಅಧ್ಯಕ್ಷ ವಿಜಯಕುಮಾರ್ ಬಂಡೆ ಮಾತನಾಡಿ, ನಾವು ಅರಣ್ಯವಲಯ ಅಧಿಕಾರಿ ವಿಜಯಕುಮಾರ ಜಾದವ ಅವರ ಮಾರ್ಗದರ್ಶನದಲ್ಲಿ ಈ ಕಾರ್ಯವನ್ನು ಕೈಗೊಂಡಿದ್ದೇವೆ.

ಪಶು ಪಕ್ಷಿಗಳನ್ನು ಉಳಿಸಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು. ಅವುಗಳ ಸಂರಕ್ಷಣೆಗಾಗಿ ಸಂಘವು ಕಳೆದ ಹಲವು ವರ್ಷಗಳಿಂದ ನಿರಂತರವಾಗಿ ಸೇವಾ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಬೀದರ್ ನಗರದ ವಿವಿಧ ಪ್ರದೇಶಗಳಲ್ಲಿ, ಉದ್ಯಾನವನಗಳಲ್ಲಿ ಹಾಗೂ ಮನೆಗಳ ಸುತ್ತಮುತ್ತಲಿನ ಗಿಡಮರಗಳ ಮೇಲೆ ಪಕ್ಷಿ–ಪ್ರಾಣಿಗಳಿಗೆ ಕುಡಿಯುವ ನೀರಿನ ತೊಟ್ಟಿಗಳನ್ನು ಇಟ್ಟು, ಅವುಗಳಿಗೆ ನೀರಿನ ಅಭಾವವಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಈ ಕಾರ್ಯದಲ್ಲಿ ಸಂಘದ ಸದಸ್ಯರು ಮಾತ್ರವಲ್ಲದೆ ಸಾರ್ವಜನಿಕರೂ ಸಹ ಕೈಜೋಡಿಸುತ್ತಿರುವುದು ಸಂತೋಷದ ವಿಷಯವಾಗಿದ್ದು, ಪ್ರತಿಯೊಬ್ಬರೂ ಇಂತಹ ಮಾನವೀಯ ಕಾರ್ಯಗಳಲ್ಲಿ ಭಾಗವಹಿಸಬೇಕು ಎಂದು ಅವರು ಕರೆ ನೀಡಿದರು.

ಅದೇ ಸಂದರ್ಭದಲ್ಲಿ,

ಸೋಮಶೇಖರ್ ನೀಲಪ್ಪನೋರ್,

ಮಹಾರುದ್ರ ಚಿಕ್ಲಿ, ವಿಜಯಕುಮಾರ ಗಾಡ್, ರೋಹಿತ್ ಕುಮಾರ, ರೋಹನ್ ರಾಜ್, ಸುರೇಶ ಎಕ್ಕಲೇಕಾರ್, ವಿವೇಕ್ ಲಕ್ಷಶೆಟ್ಟಿ, ಹರ್ಷವರ್ಧನ್, ಶಿವಕುಮಾರ ಹಳ್ಳದಕೇರಿ, ಸುಧರ್ಶನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು,

# ಮಾದಕ ವಸ್ತು ಬಳಕೆ ತಡೆಗೆ ಅನಿರೀಕ್ಷಿತ ತಪಾಸಣೆ ಕೈಗೊಳ್ಳಿ: ಜಿಲ್ಲಾಧಿಕಾರಿ

• **ಮಲ್ಲಮ್ಮ ನುಡಿ ವಾರ್ತೆ, ಕಾರವಾರ**

ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಸರಬರಾಜು ತಡೆಯಲು ಅನುಮಾನಾಸ್ಪದವಾಗಿ ಕಂಡು ಬರುವ ಹೋಂ ಸ್ಟೇಗಳು ಮತ್ತು ರೆಸಾರ್ಟ್‌ಗಳಲ್ಲಿ ಅನಿರೀಕ್ಷಿತ ತಪಾಸಣೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಎನ್‌ಕಾರ್ಡ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾದಕ ವಸ್ತುಗಳ ಸೇವನೆ ಕುರಿತಂತೆ ಪೊಲೀಸ್ ಇಲಾಖೆಯಲ್ಲಿ ದಾಖಲಾಗುವ ಪ್ರಕರಣಗಳಲ್ಲಿ 18 ರಿಂದ 35 ವಯೋಮಿತಿಯ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಈ ದುಶ್ಚಟಕ್ಕೆ ಬಲಿಯಾಗುತ್ತಿರುವುದು ಕಂಡು ಬರುತ್ತಿದ್ದು, ಜಿಲ್ಲೆಯ ಎಲ್ಲಾ ಕಾಲೇಜುಗಳಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತಂತೆ ವಿದ್ಯಾರ್ಥಿಗಳಿಗೆ ಹೆಚ್ಚಿನ ಸಂ–ಖ್ಯೆಯ ಅರಿವು ಕಾರ್ಯಕ್ರಮಗಳನ್ನು ಅಯೋಜಿಸುವಂತೆ ತಿಳಿಸಿದರು.

ಜಿಲ್ಲೆಯ ಎಲ್ಲಾ ಮೆಡಿಕಲ್ ಶಾಪ್ ಗಳಲ್ಲಿ ವೈದ್ಯರ ಸಲಹಾ ಚೀಟಿ ಇಲ್ಲದೇ ಔಷಧಗಳನ್ನು ಸರಬರಾಜು ಮಾಡದಂತೆ ಸೂಚನೆ ನೀಡುವಂತೆ ಮತ್ತು ಈ ಕುರಿತು ಮೆಡಿಕಲ್ ಶಾಪ್ ಗಳಲ್ಲಿ ಭಿತ್ತಿಪತ್ರ ಅಳವಡಿಸುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಔಷಧ ನಿಯಂತ್ರಕರಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ಸಲಹಾ ಚೀಟಿ ಇಲ್ಲದೇ ಔಷಧ ವಿತರಿಸುವ ಶಾಪ್ ಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಮಾದಕ ವಸ್ತುಗಳ ಸಂಗ್ರಹ, ಬಳಕೆ, ಸರಬರಾಜು ಕುರಿತಂತೆ ಮಾಹಿತಿ ನೀಡಲು ರಚಿಸಿರುವ ಡ್ರಗ್ ಫ್ರೀ ಕರ್ನಾಟಕ ಮೊಬೈಲ್ ಅಪ್ಲಿಕೇಶನ್ ಬಳಕೆ ಮತ್ತು ಅದರ ಉಪಯೋಗದ ಕುರಿತಂತೆ ಸಾರ್ವಜನಿರಕಲ್ಲಿ ಹೆಚ್ಚಿನ ಅರಿವು ಮೂಡಿಸುವಂತೆ ಪೊಲೀಸ್ ಇಲಾಖೆಗೆ ಸೂಚಿಸಿದ ಅವರು, ಎನ್ ಕಾರ್ಡ್ ಸಮಿತಿಯ ಎಲ್ಲಾ ಸದಸ್ಯರು ಪ್ರತೀ ತಿಂಗಳು ತಮ್ಮ ಇಲಾಖೆಯ ವ್ಯಾಪ್ತಿಯಲ್ಲಿ ಕೈಗೊಂಡ ತಪಾಸಣೆಯ ಕುರಿತ ಪ್ರಗತಿ ವರದಿಯನ್ನು ಕಡ್ಡಾಯವಾಗಿ ಸಲ್ಲಿಸುವಂತೆ ನಿರ್ದೇಶಿಸಿದರು.

ಜಿಲ್ಲೆಯಲ್ಲಿ 2026 ರಲ್ಲಿ ಇದುವರೆಗೆ ಮಾದಕ ವಸ್ತು ಸರಬರಾಜಿನ 8 ಪ್ರಕರಣಗಳಲ್ಲಿ 14 ಮಂದಿಯನ್ನು ಬಂಧಿಸಿ, ರೂ.1,49,500 ಮೌಲ್ಯದ ಗಾಂಜಾ ವಶಪಡಿಸಿಕೊಂಡಿದ್ದು, ಮಾದಕ ವಸ್ತು ಸೇವನೆಯ 97 ಪ್ರಕರಣಗಳಲ್ಲಿ 112 ಮಂದಿಯನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್. ತಿಳಿಸಿದರು.

ಸಭೆಯಲ್ಲಿ ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಬಂದರು, ಮೀನುಗಾರಿಕೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಗ್ಯಾಸ್ ಸಮಸ್ಯೆ ತೀವ್ರ: ವೆಂಕಟೇಶ್ವರ ಗ್ಯಾಸ್ ಕಂಪನಿ ಕ್ರಮಕ್ಕೆ ಒತ್ತಾಯ




• **ಮಲ್ಲಮ್ಮ ನುಡಿ ವಾರ್ತೆ, ಲಿಂಗಸುಗೂರು**

ತಾಲೂಕಿನಾದ್ಯಂತ ಗೃಹ ಹಾಗೂ ವಾಣಿಜ್ಯ ಬಳಕೆದಾರರಿಗೆ ಗ್ಯಾಸ್ ಸರಬರಾಜು ಮಾಡುತ್ತಿರುವ ವೆಂಕಟೇಶ್ವರ ಗ್ಯಾಸ್ ಕಂಪನಿಯ ವಿರುದ್ಧ ಗ್ರಾಹಕರ ಆಕ್ರೋಶ ಹೆಚ್ಚಾಗಿದೆ. ಮಧ್ಯಪ್ರಾಚ್ಯ ಯುದ್ಧದ ನೆಪದಲ್ಲಿ 45 ದಿನಕ್ಕೊಮ್ಮೆ ಮಾತ್ರ ಗ್ಯಾಸ್ ಬುಕ್ಕಿಂಗ್ ಮಾಡಲಾಗುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಗಂಭೀರ ಸಮಸ್ಯೆಗಳು ಎದುರಾಗುತ್ತಿವೆ ಎಂಬ ಆರೋಪ ಕೇಳಿಬಂದಿದೆ.

ಇಕೆವೈಸಿ ಹೆಸರಿನಲ್ಲಿ ಬಹುತೇಕ ಗ್ರಾಹಕರಿಗೆ ಗ್ಯಾಸ್ ಸಿಲಿಂಡರ್ ಬುಕ್ಕಿಂಗ್ ನಿರಾಕರಿಸಲಾಗುತ್ತಿದೆ. ಹಳ್ಳಿಗಳಿಂದ ಪಟ್ಟಣಕ್ಕೆ ಬರುವ ವೃದ್ಧರು, ಮಹಿಳೆಯರು ಹಾಗೂ ಅಂಗವಿಕಲರು ಸುಮಾರು 500 ಮೀಟರ್ ನಡೆದು ಕಚೇರಿಗೆ ಭೇಟಿ ನೀಡಬೇಕಾದ ದುಸ್ಥಿತಿ ನಿರ್ಮಾಣವಾಗಿದೆ. ಅಲ್ಲದೇ, ಕಚೇರಿಯಲ್ಲಿ ಕುಡಿಯುವ ನೀರು, ನೆರಳು ಹಾಗೂ ಕುಳಿತುಕೊಳ್ಳುವ ವ್ಯವಸ್ಥೆಗಳಿಲ್ಲದೆ ಗ್ರಾಹಕರು ಬಿಸಿಲಿನಲ್ಲಿ ಕಾದು ಕುಳಿತುಕೊಳ್ಳಬೇಕಾಗಿದೆ ಎಂದು ತಿಳಿದುಬಂದಿದೆ.

ಇದೇ ವೇಳೆ, ಸಿಬ್ಬಂದಿಗಳ ವರ್ತನೆಯ ಮೇಲೂ ಅಸಮಾಧಾನ ವ್ಯಕ್ತವಾಗಿದ್ದು, ಸೌಜನ್ಯವಿಲ್ಲದ ನಡೆ ಬಗ್ಗೆ ಸಾರ್ವಜನಿಕರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಇನ್ನೊಂದೆಡೆ, ಹೋಟೆಲ್ ಸೇರಿದಂತೆ ವಾಣಿಜ್ಯ ಬಳಕೆದಾರರಿಗೆ ಯಾವುದೇ ತೊಂದರೆ ಇಲ್ಲದೆ ಗ್ಯಾಸ್ ಸರಬರಾಜು ನಡೆಯುತ್ತಿದ್ದು, ಬಡವರ ಮನೆಗಳಿಗೆ ಮಾತ್ರ ಸಮಸ್ಯೆ ಉಂಟಾಗುತ್ತಿರುವುದು ಅನುಮಾನಗಳಿಗೆ ಕಾರಣವಾಗಿದೆ.

ಈ ಸಂಬಂಧ ಆಹಾರ ಇಲಾಖೆ, ತಹಶೀಲ್ದಾರರು ಹಾಗೂ ಸಹಾಯಕ ಆಯುಕ್ತರು ನಿಗಾವಹಿಸಬೇಕಾದ ಹೊಣೆಗಾರಿಕೆಯಲ್ಲಿ ನಿರ್ಲಕ್ಷ್ಯ ತೋರಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ.

ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ವೆಂಕಟೇಶ್ವರ ಗ್ಯಾಸ್ ಕಂಪನಿಯ ವಿರುದ್ಧ ಕ್ರಮ ಕೈಗೊಳ್ಳುವಂತೆ ಹಾಗೂ ಗ್ರಾಹಕರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಲ್ಪಿಸುವಂತೆ ಒತ್ತಾಯಿಸಲಾಗಿದೆ.

ಬೇಡಿಕೆಗಳು:

ಗ್ರಾಹಕರಿಗೆ ಕುಡಿಯುವ ನೀರು ಹಾಗೂ ನೆರಳಿನ ವ್ಯವಸ್ಥೆ ಮಾಡುವುದು, ಹಳ್ಳಿಗಳಲ್ಲೇ ಇಕೆವೈಸಿ ವ್ಯವಸ್ಥೆ ಕಲ್ಪಿಸುವುದು, ಗ್ಯಾಸ್ ವಾಹನಗಳ ಮೂಲಕ ಜಾಗೃತಿ ಮೂಡಿಸುವುದು ಹಾಗೂ ಗೃಹ ಬಳಕೆದಾರರಿಗೆ ಗ್ಯಾಸ್ ಕೊರತೆ ಬಗ್ಗೆ ತನಿಖೆ ನಡೆಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿರಿಸಲಾಗಿದೆ.

ಈ ಸಂದರ್ಭದಲ್ಲಿ ಅಧ್ಯಕ್ಷ ಮಾದೇಶ ಸರ್ಜಾಪುರ, ಪ್ರಧಾನ ಕಾರ್ಯದರ್ಶಿ ಶರಣಬಸವ ಈಚನಾಳ, ಉಪಾಧ್ಯಕ್ಷ ಬಸವರಾಜ ಪೇರಿ, ಸಂಘಟನೆ ಕಾರ್ಯದರ್ಶಿ ಮುತ್ತಣ್ಣ ಗುಡಿಹಾಳ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಉತ್ತಮ ಸಾಧನೆಗೈದ ವಿದ್ಯಾರ್ಥಿಗೆ ಸನ್ಮಾನ



• **ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ**

ತಾಲೂಕಿನ ಚಿಕ್ಕಮ್ಯಾಗೇರಿಯ ಶ್ರೀ ಮತಿ ನೀಲಮ್ಮ ಶಿವಶಂಕರರಾವ್ ದೇಸಾಯಿ ಸರಕಾರಿ ಪ್ರೌಢಶಾಲೆಯ ಎಸ್ ಎಸ್ ಎಲ್ ಸಿ ಫಲಿತಾಂಶದಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಮಾಜಿ ಜಿಲ್ಲಾಪಂಚಾಯತ್ ಸದಸ್ಯ ಅರವಿಂದ್ ಗೌಡ ಪಾಟೀಲ್ ಅಭಿನಂದನೆ ತಿಳಿಸಿದ್ದಾರೆ.

ಶಾಲೆಯಲ್ಲಿ ಉತ್ತಮ ಸಾಧನೆ ಮಾಡಿದ ಕುಡಗುಂಟಿ ಗ್ರಾಮದ ವಿದ್ಯಾರ್ಥಿ ಕುಮಾರ ಪ್ರಶಾಂತ ರೋಣದ ವಿದ್ಯಾರ್ಥಿಗೆ ಜಿಲ್ಲಾ ಪಂಚಾಯತ ಮಾಜಿ ಸದಸ್ಯರಾದ ಶ್ರೀ ಅರವಿಂದಗೌಡ್ ಶಿವಶರಣಪ್ಪಗೌಡ್ ಪಾಟೀಲ್ ಅವರು ಸನ್ಮಾನಿಸಿ ಅಭಿನಂದನೆಗಳನ್ನು ತಿಳಿಸಿ ಆರ್ಥಿಕ ಸಹಾಯ ಮಾಡಿದರು.

.ವಿದ್ಯಾರ್ಥಿಯ ಶ್ರಮ ಮತ್ತು ಸಮರ್ಪಣೆಗೆ ಫಲ ಸಿಕ್ಕಿದೆ. ನಿಮ್ಮಲ್ಲಿ ನಂಬಿಕೆ ಇಟ್ಟುಕೊಳ್ಳಿ ಮತ್ತು ಮುಂದೆ ಇನ್ನೂ ಹೆಚ್ಚಿನ ಯಶಸ್ಸಿಗೆ ಶ್ರಮಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಕಲ್ಲನಗೌಡ ಪಾಟೀಲ್,

ಶರಣಪ್ಪ ಕುರಿ, ಶಂಕರಗೌಡ ಪಾಟೀಲ್,ಶರಣಪ್ಪ ಗುಡಿಗೇರಿ,ಬಸರೆಡ್ಡಿ ಆಡೂರ,ರುದ್ರಪ್ಪ ಚಲವಾದಿ,ವಕೀಲರಾದ ಉಮೇಶ ಮೆಣಸಗೇರಿ, ವೈ.ಜಿ.ಪಾಟೀಲ್,ವೀರಬಸಪ್ಪ ಗುರಿಕಾರ, ಹಿರೇಹನಮಪ್ಪ ಬೊಮ್ಮನಾಳ, ಲಕ್ಷ್ಮಣ ಗುಡಿಗೇರಿ,

ಹುಸೇನಸಾಬ ಬಿನ್ನಾಳ ಬಸವರಾಜ ಬೊಮ್ಮನಾಳ ಸೇರಿದಂತೆ ಗ್ರಾಮದ ಯುವಕರು ಉಪಸ್ಥಿತರಿದ್ದರು ಯುವಕರು ಉಪಸ್ಥಿತರಿದ್ದರು.

# ರಾಜ್ಯ ಛಲವಾದಿ ಮಹಾಸಭಾ ತಾಲೂಕು ಅಧ್ಯಕ್ಷರಾಗಿ ಹಿರೇದಿನ್ನಿ ನೇಮಕ



• **ಮಲ್ಲಮ್ಮ ನುಡಿ ವಾರ್ತೆ, ಮಸ್ಕಿ**

ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ (ರಿ ) ರಾಯಚೂರು ಜಿಲ್ಲಾ ಸಮಿತಿ ವತಿಯಿಂದ ಹಾಗು ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ ಜಿಲ್ಲಾ ಅಧ್ಯಕ್ಷ ಶಿವರಾಜ್ ಜಾನೇಕಲ್ ರವರ ಆದೇಶ ಮೇರಿಗೆ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ ಮಸ್ಕಿ ತಾಲೂಕು ನೂತನ ಅಧ್ಯಕ್ಷರು ಮತ್ತು ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ತಾಲೂಕು ಗೌರವಾಧ್ಯಕ್ಷರಾಗಿ ಯಮುನಪ್ಪ ತಳವಾರ್, ಅಧ್ಯಕ್ಷರಾಗಿ ಹುಚ್ಚುರೆಡ್ಡಿ ಹಿರೇದಿನ್ನಿ, ಕಾರ್ಯಧ್ಯಕ್ಷರಾಗಿ ಅಶೋಕ ಕಟ್ಟಿಮನಿ ಮಸ್ಕಿ, ಉಪಾಧ್ಯಕ್ಷರಾಗಿ ಹನುಮಂತ ಬಳಗಾನೂರು, ಸೋಮಪ್ಪ ವಟಗಲ್, ಮಲ್ಲಿಕಾರ್ಜುನ್ ಅಮೀನಗಡ, ಪ್ರಧಾನ ಕಾರ್ಯದರ್ಶಿ, ಯಂಕಪ್ಪ ಇಂಜಿನಿಯರ್ ಬಸ್ಸಾಪುರ, ಪ್ರಕಾಶ್ ಕಟ್ಟಿಮನಿ ಮಸ್ಕಿ, ಸಂಘಟನಾ ಕಾರ್ಯದರ್ಶಿಯಾಗಿ

ಬಸವರಾಜ್ ಗೌಡನಬಾವಿ, ಕಾರ್ಯದರ್ಶಿಯಾಗಿ ಲಕ್ಷ್ಮಣ ಎಕ್ಲಾಪುರ, ಸಹ ಕಾರ್ಯದರ್ಶಿಯಾಗಿ ಚಿದಾನಂದ ಮತ್ತು ಶಶಿಕುಮಾರ್ ಮಸ್ಕಿ, ಕಾನೂನು ಸಲಹೆಗಾರರಾಗಿ ಸೋಮಶೇಖರ್ ವಕೀಲರು ಮಸ್ಕಿ, ಜಂಟಿ ಕಾರ್ಯದರ್ಶಿಯಾಗಿ ಸುರೇಶ್ ಬಸಾಪುರ್, ಹನುಮಂತ ಜಂಪೂರ್ ಮೆದಿಕಿನಾಳ, ಜಂಟಿ ಕಾರ್ಯದರ್ಶಿಯಾಗಿ ರಾಜು ಕಾಂಬ್ಳೆ ತೋರಣದಿನ್ನಿ ಇವರುಗಳನ್ನು ಪದಾಧಿಕಾರಿಗಳನ್ನಾಗಿ ನೇಮಕ ಮಾಡಲಾಯಿತು.

ಈ ಸಂದರ್ಭದಲ್ಲಿ, ಜಿಲ್ಲಾ ಸಮಿತಿಯ ಅಂಬಣ್ಣ ಮಲ್ಕಪುರ, ಮಂಕಾಳಪ್ಪ ಮಲ್ಲಾಪುರ್, ಚನ್ನಬಸವ ಅಮಿನಗಡ ಸೇರಿದಂತೆ ಇತರರು ಇದ್ದರು.

# ಕ್ರೀಡಾಪಟುಗಳು ಶಿಸ್ತು ಕ್ರೀಡಾ ಸ್ಫೂರ್ತಿಯಿಂದ ಆಟವಾಡಬೇಕು



• **ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ**

ರಾಷ್ಟ್ರೀಯ ಬಸವಸೈನ್ಯ ಸಂಘಟನೆಯು ಸದಾ ಜನಪರ, ಸಾಮಾಜಿಕ, ಧಾರ್ಮಿಕ ಮತ್ತು ಕ್ರೀಡಾ ಚಟುವಟಿಕೆಗಳಿಗೆ ನಿರಂತರವಾಗಿ ಉತ್ತೇಜನ ನೀಡುತ್ತಾ ಬಂದಿರುವುದು ಹೆಮ್ಮೆಯ ವಿಷಯ ಎಂದು ಬಿಡಿಸಿಸಿ ಬ್ಯಾಂಕಿನ ನಿರ್ದೇಶಕಿ ಸಂಯುಕ್ತ ಪಾಟೀಲ ಹೇಳಿದರು,

ಪಟ್ಟಣದಲ್ಲಿ ರಾಷ್ಟ್ರೀಯ ಬಸವಸೈನ್ಯ ಹಾಗೂ ಗೆಳೆಯರ ಬಳಗ ಆಯೋಜಿಸಿದ್ದ ಬಸವನಬಾಗೇವಾಡಿ ಪ್ರಿಮಿಯರ ಲೀಗ್ 2026 ಸೀಜನ1 ರ ಕ್ರಿ–ಕೆಟ್ ಟೋರ್ನಾಮೆಂಟಗೆ ಚಾಲನೆ ಕೊಟ್ಟು ಮಾತನಾಡಿದರು.

ಪಿ.ಎಲ್.ಡಿ ಬ್ಯಾಂಕಿನ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ, ಕ್ರೀಡಾಪಟುಗಳು ಶಿಸ್ತು ಮತ್ತು ಕ್ರೀಡಾ ಸ್ಫೂರ್ತಿಯಿಂದ ಆಟವಾಡಬೇಕು ಎಂದು ಹಾರೈಸಿದರು.

ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಮಾತನಾಡಿ, ಯುವ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸಿಕೊಡುವುದು ಮತ್ತು ಕ್ರೀಡೆಯ ಮೂಲಕ ಯುವಕರಲ್ಲಿ ಒಗ್ಗಟ್ಟು ಹಾಗೂ ಸಾಮಾಜಿಕ ಸೌಹಾರ್ದತೆಯನ್ನು ಬೆಳೆಸುವುದು ನಮ್ಮ ಸಂಘಟನೆಯ ಮುಖ್ಯ ಉದ್ದೇಶವಾಗಿದೆ ಎಂದರು. ಸಿದ್ದಲಿಂಗಸ್ವಾಮೀಜಿ ಮಾತನಾಡಿದರು,

ವೇದಿಕೆಯ ಮೇಲೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಮೈಬೂಬ. ಲಾ ನಾಯ–ಕೋಡಿ, ಡಾ. ಬಸವರಾಜ ಕೋಟಿ, ಜಟ್ಟಿಂಗರಾಯ ಮಾಲಗಾರ, ರವಿ ರಾಠೋಡ, ಪ್ರಶಾಂತ ಮುಂಜಾನೆ, ಮಾಂತೇಶ ಪಾರಶೆಟ್ಟಿ, ಶಾನನವಾಜ ಮುಲ್ಲಾ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.ಶಿಕ್ಷಕ ಶಿವು ಮಡಿಕೇಶ್ವರ ನಿರೂಪಿಸಿದರು.

# ಡಿಪ್ಲೊಮಾ: ವಿಶೇಷಚೇತನರಿಂದ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ, ಕಾರವಾರ**

ಮೈಸೂರಿನ ಜೆಎಸ್‌ಎಸ್ ವಿಶೇಷಚೇತನತ ಪಾಲಿಟೆಕ್ನಿಕ್ ನಲ್ಲಿ ಪ್ರಸಕ್ತ ಸಾಲಿಗೆ ಅನುದಾನಿತ ಕೋರ್ಸುಗಳಾದ ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್,

ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನೀಯರಿಂಗ್ ಹಾಗೂ ಅನುದಾನ ರಹಿತ ಕೋರ್ಸುಗಳಾದ ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜನೀಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್ (ಫಾರ್ ವಿಜ್ಯುವಲಿ ಇಂಪೇರ್ಡ್) ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜನೀಯರಿಂಗ್

ಮತ್ತು ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿಯ ಮೂರು ವರ್ಷಗಳ ಅವಧಿಯ ಡಿಪ್ಲೊಮಾ ಕೋರ್ಸುಗಳಿಗೆ ವಿಶೇಷಚೇತನ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

# ಶ್ರೀ ಗುರು ಸೇವಾರತ್ನ ಪ್ರಶಸ್ತಿಗೆ ಷಣ್ಮುಖಪ್ಪ ಅಂಬಲಿ ಭಾಜನ



• **ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ**

ತಾಲೂಕಿನ ಉತ್ನಾಳದ ಶ್ರೀ ಮಹಾಲಕ್ಷ್ಮಿದೇವಿ ಜಾತ್ರಾಮಹೋತ್ಸವದಲ್ಲಿ ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಶಿಕ್ಷಣ ಸಂಯೋಜಕ ಷಣ್ಮುಖಪ್ಪ ಶ್ರೀ ಅಂಬಲಿ ಶ್ರೀ ಗುರು ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಕಿರುಚಿತ್ರ ಸ್ಪರ್ಧೆ 2026

• **ಮಲ್ಲಮ್ಮ ನುಡಿ ವಾರ್ತೆ, ಕಾರವಾರ**

ನವದೆಹಲಿಯ ಭಾರತದ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ (ಓಊಖಅ) 2015 ರಿಂದ ಮಾನವ ಹಕ್ಕುಗಳ ಕುರಿತು ಕಿರುಚಿತ್ರ ಸ್ಪರ್ಧೆಯನ್ನು ನಡೆಸಿಕೊಂಡು ಬರುತ್ತಿದೆ. 2026 ರಲ್ಲಿ ಸ್ಪರ್ಧೆಯ 12 ನೇ ಆವೃತ್ತಿಗೆ, ದೇಶದ ನಾಗರಿಕರಿಂದ ಆನ್‌ಲೈನ್‌ನಲ್ಲಿ ಪ್ರವೇಶಗಳನ್ನು ಆಹ್ವಾನಿಸಿದೆ. ಮೊದಲ, ಎರಡನೇ ಮತ್ತು ಮೂರನೇ ಅತ್ಯುತ್ತಮ ಚಿತ್ರಕ್ಕೆ ಬಹುಮಾನದ ಮೊತ್ತವು ಕ್ರಮವಾಗಿ ರೂ. 2 ಲಕ್ಷ, ರೂ. 1 ಲಕ್ಷ 50 ಸಾವಿರ ಮತ್ತು ರೂ. 1 ಲಕ್ಷ ಆಗಿರುತ್ತದೆ. ಆಯೋಗವು ಮೂರು ನಗದು ಪ್ರಶಸ್ತಿಗಳು, ಪ್ರಮಾಣಪತ್ರಗಳು ಮತ್ತು ಟ್ರೋಫಿಗಳ ಜೊತೆಗೆ, ತೀರ್ಪುಗಾರರು ಶಿಫಾರಸು ಮಾಡಿದ ಗರಿಷ್ಠ ನಾಲ್ಕು (4) ಚಿತ್ರಗಳಿಗೆ ತಲಾ ರೂ. 50 ಸಾವಿರ ನಗದು ಬಹುಮಾನದೊಂದಿಗೆ 'ಪ್ರಮಾಣಪತ್ರ'ವನ್ನು ನೀಡಲಾಗುವುದು.

## ಅವಧಿ ವಿಸ್ತರಣೆಯಾದರೂ ಆರಂಭವಾಗದ ತೊಗರಿ ಖರೀದಿ ಪ್ರಕ್ರಿಯೆ: ಆಕ್ರೋಶ



**ಕೆಂಭಾವಿ:** 2025-26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿ ಅವಧಿಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮೇ 18ರವರೆಗೆ ವಿಸ್ತರಿಸಿ ಆದೇಶ ಹೊರಡಿಸಿವೆ. ಆದರೆ, ಅವಧಿ ವಿಸ್ತರಣೆಯಾಗಿ 15 ದಿನಗಳು ಕಳೆದರೂ ಹಲವು ಕೇಂದ್ರಗಳಲ್ಲಿ ಚೀಲಗಳ ಕೊರತೆಯಿಂದಾಗಿ ಖರೀದಿ ಪ್ರಕ್ರಿಯೆ ಇನ್ನೂ ಆರಂಭವಾಗದಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ ಎಂದು ನಗನೂರು ಪ್ರಗತಿಪರ ರೈತ ಶಿವರಾಜ್ ಹೆಳವರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, "ಮುಂಗಾರು ಹಂಗಾಮಿನ ತೊಗರಿಯನ್ನು ನೋಂದಾಯಿತ ರೈತರಿಂದ ಖರೀದಿಸಲು ಸರ್ಕಾರ ಮುಂದಿನ ತಿಂಗಳು (ಮೇ 18, 2026) ವರೆಗೆ ಗಡುವು ನೀಡಿದೆ. ಆದರೆ ಸರ್ಕಾರದ ಆದೇಶ ಹೊರಬಿದ್ದರೂ, ಖರೀದಿ ಕೇಂದ್ರಗಳಲ್ಲಿ ಗುಣಮಟ್ಟದ ಚೀಲಗಳ ಕೊರತೆ ಮತ್ತು ತಾಂತ್ರಿಕ ಸಿಬ್ಬಂದಿಗಳ ಅಲಭ್ಯತೆಯ ನೆಪ ಒಡ್ಡಿ ಖರೀದಿ ವಿಳಂಬ ಮಾಡುತ್ತಿರುವುದು ಸರಿಯಲ್ಲ. ಈಗಾಗಲೇ 15 ದಿನಗಳು ವ್ಯರ್ಥವಾಗಿದ್ದು, ಕೂಡಲೇ ಚೀಲಗಳನ್ನು ಪೂರೈಸಿ ಖರೀದಿ ಆರಂಭಿಸದಿದ್ದರೆ ರೈತರಿಗೆ ಆರ್ಥಿಕ ನಷ್ಟವಾಗಲಿದೆ," ಎಂದು ಎಚ್ಚರಿಸಿದ್ದಾರೆ.

ಜಿಲ್ಲೆಯ ಸಾವಿರಾರು ರೈತರು ನೋಂದಣಿ ಮಾಡಿಸಿಕೊಂಡು ಖರೀದಿ ಆರಂಭಕ್ಕಾಗಿ ಕಾಯುತ್ತಿದ್ದು, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಕಾರ್ಯಪ್ರವೃತ್ತರಾಗಬೇಕೆಂದು ಅವರು ಒತ್ತಾಯಿಸಿದ್ದಾರೆ.

## ಶಾಲೆಗಳಲ್ಲಿ ಪತ್ರಿಕೆ ಓದು ಕಡ್ಡಾಯ

**ಬೆಂಗಳೂರು:** ಶಾಲೆಗಳಲ್ಲಿ ಪತ್ರಿಕೆಗಳ ಪ್ರಮುಖ ಸುದ್ದಿಗಳನ್ನು ಪ್ರತಿನಿತ್ಯ ಓದುವ ಕ್ರಮ ಕಡ್ಡಾಯ ಮಾಡಿರುವ ಸರ್ಕಾರದ ಕ್ರಮವನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ) ಸ್ವಾಗತಿಸಿದೆ.

ಶಾಲೆಗಳಲ್ಲಿ ಓದುವ ಮತ್ತು ಬೋರ್ಡ್ ಮೇಲೆ ಬರೆಯುವ, ನೋಟೀಸ್ ಬೋರ್ಡ್ ನಲ್ಲಿ ಹಾಕುವ ಅಭ್ಯಾಸವು ಮಾಸುತ್ತಿದೆ.

ಮೊಬೈಲ್ ಯುಗದ ಪ್ರಭಾವದಲ್ಲಿ ಹಿಂದಿನ ಪದ್ಧತಿಗಳು ಮರೆತು ಹೋಗುತ್ತಿರುವ ಈ ಹೊತ್ತಿನಲ್ಲಿ ಸರ್ಕಾರದ ಕ್ರಮ ಅಗತ್ಯವಿತ್ತು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ. ಉತ್ತರ ಪ್ರದೇಶ ಸರ್ಕಾರ ಅಲ್ಲಿನ ಸರ್ಕಾರಿ ಶಾಲೆಗಳಲ್ಲಿ ದಿನಪತ್ರಿಕೆ ಓದುವುದನ್ನು ಡಿಸೆಂಬರ್/2025 ರಲ್ಲಿ ಕಡ್ಡಾಯ ಮಾಡಿದ್ದು, ಇದೇ ರೀತಿಯಲ್ಲಿ ರಾಜ್ಯ ಸರ್ಕಾರ ಕೂಡ ಕ್ರಮಕೈಗೊಳ್ಳುವಂತೆ ಆಗ್ರಹಿಸಿ ಕೆಯುಡಬ್ಲ್ಯೂಜೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿತ್ತು. ಈ ಬಗ್ಗೆ ಮುಖ್ಯಮಂತ್ರಿಗಳಿಗೂ ಪ್ರತ್ಯೇಕವಾಗಿ ಮನವಿ ಮಾಡಿತ್ತು.

ಪರಿಣಿತರ ಅಭಿಪ್ರಾಯ ಮತ್ತು ಕೆಯುಡಬ್ಲ್ಯೂಜೆ ಮನವಿಗೆ ರಾಜ್ಯ ಸರ್ಕಾರ ಮನ್ನಣೆ ನೀಡಿ, ಈ ನಿಟ್ಟಿನಲ್ಲಿ ಕೂಡಲೇ ಕ್ರಮ ತೆಗೆದುಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಶಿಕ್ಷಣ ಸಚಿವ ಮಧುಬಂಗಾರಪ್ಪ ಅವರನ್ನು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಭಿನಂದಿಸಿದ್ದಾರೆ.

## ರೈತನ ಮಗನ ಸಾಧನೆ: ಗುರುಗಳು ಸಂತಸ



**ಯಲಬುರ್ಗಾ:** ತಾಲೂಕಿನ ಬಂಡಿಹಾಳ ಗ್ರಾಮದ ಬಡ ರೈತ ಬಸಪ್ಪ ಬೂದಿಹಾಳ ತನ್ನ ಮಗನ ವಿದ್ಯಾಭ್ಯಾಸಕ್ಕಾಗಿ ತನ್ನ ಕಷ್ಟಗಳನ್ನು ದೂರತಳ್ಳಿಹಾಕಿ ಮಗನ ಓದಿಗಾಗಿ ಶ್ರಮಿಸಿದ್ದಾನೆ, ಗ್ರಾಮೀಣ ಭಾಗದ ವಿದ್ಯಾರ್ಥಿ ದರ್ಶನ ಇತನು ಹಿರೇಸಿಂಧೋಗಿ ಮುರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ವಿಜ್ಞಾನ ಕಾಲೇಜಿಗೆ 2025- 26 ನೇ ಸಾಲಿನ ದ್ವಿತಿಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ 600 ಅಂಕಗಳಲ್ಲಿ 583 ಅಂಕಗಳನ್ನು ಪಡೆದು 97.16 ಪ್ರತಿಶತ ಅಂಕಗಳನ್ನು ಪಡೆದು ಕೊಂಡು ಕಾಲೇಜಿಗೆ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದಿದ್ದಾನೆ. ಶಾಲೆಯ ಶಿಕ್ಷಕ ವೃಂದ ಹಾಗೂ ಹಿರೇಸಿಂದೋಗಿಯ ಪ್ರಾಚಾರ್ಯರು ಮತ್ತು ಬಂಡಿಹಾಳ ಗ್ರಾಮದ ಗುರು ಹಿರಿಯರ ಸಂತಸ ವ್ಯಕ್ತಪಡಿಸಿದ್ದಾರೆ.

## ಇನ್ನೆರಡು ವರ್ಷದಲ್ಲಿ ರಾಜ್ಯದಲ್ಲಿ ರೈತಪರ ಬಿಜೆಪಿ ಸರ್ಕಾರ ಅಧಿಕಾರಕ್ಕೆ: ಬೊಮ್ಮಾಯಿ



**ಹಾವೇರಿ(ಸವಣೂರು):** ಇನ್ನೆರಡು ವರ್ಷದಲ್ಲಿ ರಾಜ್ಯದಲ್ಲಿ ರೈತಪರ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ. ಈ ವ್ಯವಸ್ಥೆ ಬದಲಾವಣೆಯಾಗಿ ರೈತ ಪರ ಸರ್ಕಾರ ಬಂದಾಗ ರೈತರ ಮಕ್ಕಳಿಗೆ ವಿದ್ಯಾನಿಧಿ, ರೈತರಿಗೆ ಡಿಸೆಲ್ ಸಬ್ಸಿಡಿ, ಬೀಜ ಗೊಬ್ಬರಕ್ಕೆ ಸಹಾಯಧನ ನೀಡುವ ಯೋಜನೆಗಳು ಮತ್ತೆ ಜಾರಿಗೆ ಬರುತ್ತವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಇಂದು ಹಾವೇರಿ ಜಿಲ್ಲೆಯ ಸವಣೂರ ತಾಲೂಕಿನ ಮನ್ನಂಗಿ ಗ್ರಾಮದ ಶ್ರೀ ದ್ಯಾಮವ್ವದೇವಿ ದೇವಸ್ಥಾನ ಹಾಗೂ ಆಂಜನೇಯ ದೇವಸ್ಥಾನದ ಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಈ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣ ಆಗಿದೆ. ಎಲ್ಲಿ ಭಕ್ತಿ ಇದೆ ಅಲ್ಲಿ ತಾಯಂದಿರು ಇರುತ್ತಾರೆ. ಭಕ್ತಿ ಸಂಸ್ಕೃತಿ ನಮ್ಮ ಭಾರತದ ತಾಯಿ, ದ್ಯಾಮವ್ವನ ದೇವಸ್ಥಾನ ಸುಂದರವಾಗಿ ನಿರ್ಮಾಣ ಆಗಿದೆ. ಈ ಊರಿನ ಜನರು ಬಹಳ ದೈವ ಭಕ್ತರಿರುವುದರಿಂದ ಎಲ್ಲ ದೇವಸ್ಥಾನಗಳು ನಿರ್ಮಾಣ ಆಗಿವೆ. ಮಾರುತಿ ದೇವಸ್ಥಾನ. ಪರಮೇಶ್ವರ ದೇವಸ್ಥಾನ, ದ್ಯಾಮವ್ವ, ಮಾಯಮ್ಮನ ದೇವಸ್ಥಾನಗಳ ನಿರ್ಮಾಣ ಆಗಿವೆ ಎಂದು ಹೇಳಿದರು.

ಇವತ್ತಿನ ದಿನಮಾನಗಳಲ್ಲಿ ಧರ್ಮ ಜಾಗೃತಿ ಬಹಳ ಮುಖ್ಯವಾಗಿದೆ. ನಮ್ಮ ಬದುಕು ಧರ್ಮದಿಂದ ನಡೆಯಬೇಕು. ನ್ಯಾಯ, ನೀತಿ, ಧರ್ಮ ಈ ಮೂರು ಮನಷ್ಯರಿಗೆ ಅತ್ಯಂತ ಅವಶ್ಯಕತೆ ಇರುವ ಗುಣಗಳು. ಧರ್ಮದಿಂದ ನಡೆಯಬೇಕೆಂದರೆ ಧರ್ಮದ ಜಾಗೃತಿ ಬಹಳ ಮುಖ್ಯ. ನಮ್ಮ ಜನರಿಗೆ ದೈವದಿಂದ ಧರ್ಮ ಹೀಗಾಗಿ ದೇವಸ್ಥಾನಗಳು ಬಹಳ ಮುಖ್ಯ ದೇವಸ್ಥಾನಗಳಿಗೆ ಭಕ್ತರ ನಂಬಿಕೆಯಿಂದ ಶಕ್ತಿ ಬರುತ್ತದೆ. ಎಲ್ಲ ದೇವರ ಕೃಪಾಶೀರ್ವಾದ ನಿಮ್ಮ ನಂಬಿಕೆಯಿಂದ ದೈವದ ಅನುಗೃಹದಿಂದ ಈ ಊರಿಗೆ ಒಳ್ಳೆಯದಾಗುತ್ತದೆ. ಈ ಊರಿನಲ್ಲಿ ರೈತರಿದ್ದಾರೆ. ಕಾಯಕಯೋಗಿಗಳಿದ್ದಾರೆ. ಪಗತಿಪರ ಚಿಂತನೆ ಮಾಡುವ ಯುವಕರಿದ್ದಾರೆ. ಮಹಿಳಾ ಸಂಘಗಳಿವೆ. ನಿಮ್ಮ ಆದಾಯ ಕೃಷಿ ಮೇಲೆ ನಿಂತಿದೆ. ನಿಮ್ ಆದಾಯ ಹೆಚ್ಚಳ ಮಾಡಿಕೊಳ್ಳಬೇಕು

# ಒಳಮೀಸಲಾತಿ ತೀರ್ಮಾನ: ದಲಿತರ ಸಂಗಮ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ಪರಿಶಿಷ್ಟರ ಒಳಮೀಸಲಾತಿಯ ತೀರ್ಮಾನವನ್ನು ಸ್ವಾಗತಿಸಿ ಹುಣಸೂರಿನ ಡಾ. ಬಿ.ಆರ್ ಅಂಬೇಡ್ಕರ್ ಸಮುದಾಯ ಭವನದಲ್ಲಿ ಪರಿಶಿಷ್ಟ ಒಳಜಾತಿ ಮುಖಂಡರುಗಳು ಭಿನ್ನಾಭಿಪ್ರಾಯ ಮರೆತು ಸಂಗಮವಾಗಿ ಡಾ. ಬಿ.ಆರ್ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಸಿಹಿ ಹಂಚಿ ಸಂಭ್ರಮಿಸಲಾಯಿತು.



ಈ ಸಂದರ್ಭದಲ್ಲಿ ದಸಂಸ ರಾಜ್ಯ ಸಂಘಟನಾ ಸಂಚಾಲಕರಾದ ನಿಂಗರಾಜ್ ಮಲ್ಲಾಡಿರವರು ಮಾತನಾಡಿ ಪರಿಶಿಷ್ಟ ಒಳಜಾತಿಗಳಿಗೆ ಒಳಮೀಸಲಾತಿಯನ್ನು ಜಾರಿಗೊಳಿಸುವಂತೆ ಕಳೆದ 30 ವರ್ಷಗಳಿಂದಲೂ ದಸಂಸ ಮತ್ತು ದಲಿತರ ಪರ ಸಂಘಟನೆಗಳು ನಿರಂತರವಾಗಿ ಹೋರಾಟ ಮಾಡುತ್ತಾ ಬರುತ್ತಿತ್ತು. ಈ ಹಿನ್ನೆಲೆಯಲ್ಲಿ ಸರ್ಕಾರವು ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗವನ್ನು ರಚಿಸಿ ಈ ಆಯೋಗವು ರಾಜ್ಯದ ಪ್ರತಿ ಜಿಲ್ಲಾಕೇಂದ್ರಗಳಲ್ಲಿ ಪರಿಶಿಷ್ಟ ವಿವಿಧ ಜಾತಿಗೆ ಸೇರಿದ ಮುಖಂಡರುಗಳ ಅಭಿಪ್ರಾಯ ಅಹವಾಲುಗಳನ್ನು ಸಂಗ್ರಹಿಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿತ್ತು.

ಮುಖ್ಯಮಂತ್ರಿ ಸಿದ್ಧರಾಮಯ್ಯ ರವರು ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಕೂಲಂಕುಶವಾಗಿ ಪರಿಶೀಲಿಸಿ ಸಚಿವ ಸಂಪುಟದಲ್ಲಿ ಬಲಗೈಗೆ 6 ಎಡಗೈಗೆ 6 ಸ್ಪೃಶ್ಯ ಅಲೆಮಾರಿ ಸಮುದಾಯಗಳಿಗೆ 5 ಅನುಪಾತದಲ್ಲಿ ಒಳಮೀಸಲಾತಿಯನ್ನು ಜಾರಿಗೊಳಿಸಿತ್ತು. ಆದರೆ 17% ಮೀಸಲಾತಿಯ ಅನ್ವಯ ಒಳಮೀಸಲಾತಿಯನ್ನು ಜಾರಿಗೊಳಿಸುವುದು ಕಷ್ಟಸಾಧ್ಯವೆಂದು ತಿಳಿದ ಮೇಲೆ ಎಡಗೈ ಬಲಗೈ ಅಲೆಮಾರಿ ಸಮುದಾಯಗಳಲ್ಲೇ ತೀವ್ರ ರೀತಿಯ ಅಸಮಧಾನ ಉಂಟಾಗಿ ಬೀದಿ ಬೀದಿಗಳಲ್ಲಿ ಹೋರಾಟಗಳು ನಡೆದವು.

ಒಳಜಾತಿಗಳಲ್ಲೇ ಒಬ್ಬರಿಗೊಬ್ಬರು ಕೆಸರೆರಚಾಟಗಳಿಂದ ನಿಂದನೆಗೆ ಒಳಗಾಗಿ ಸಮಾಜದಲ್ಲಿ ಒಂದು ರೀತಿಯ ಮನಸ್ತಾಪ ಉಂಟಾಗಿ ದಲಿತರಲ್ಲೇ ಅಸಮಾನತೆ ತಾಂಡವವಾಡತೊಡಗಿತು. 17% ಆಧಾರದಲ್ಲಿ ಒಳ ಮೀಸಲಾತಿಯನ್ನು ಜಾರಿಗೊಳಿಸಲು ಸಾಧ್ಯವಿಲ್ಲವೆಂದು ತಿಳಿದ ಸರ್ಕಾರ 15% ಮೀಸಲಾತಿ ಆಧಾರದಲ್ಲಿ ಬಲಗೈಗೆ 5.25, ಎಡಗೈಗೆ 5.25, ಅಲೆಮಾರಿ ಸ್ಪೃಶ್ಯ ಜಾತಿಗಳಿಗೆ 4.50 ಅನುಪಾತದಲ್ಲಿ ಒಳಮೀಸಲಾತಿಯನ್ನು ಜಾರಿಗೊಳಿಸಿ ಸೇವಾಬಿಂದು ವಿಚಾರದಲ್ಲಿ 1-2 ಹುದ್ದೆಗಳು ಇದ್ದಾಗ ಈ ಹುದ್ದೆಗಳನ್ನು ಎಸ್ಸಿ ಜನರಲ್ ಎಂದು ಪರಿಗಣಿಸಿ ಒಳಮೀಸಲಾತಿಯನ್ನು ಜಾರಿಗೊಳಿಸಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಸಮಾಜ ಕಲ್ಯಾಣ ಸಚಿವರಾದ ಹೆಚ್. ಸಿ ಮಹದೇವಪ್ಪ ಇತರೆ ಸಂಪುಟದ ಸಚಿವರುಗಳು ತೀರ್ಮಾನಿಸಿರುವುದು ಬಸವಣ್ಣ ರವರ ಸಾಮಾಜಿಕ ನ್ಯಾಯ ಮತ್ತು ಡಾ. ಬಿ. ಆರ್ ಅಂಬೇಡ್ಕರ್ ರವರ ಸಮಪಾಲು, ಸಮಬಾಳು ಎಂಬ ಸಾಮಾಜಿಕ ಬದ್ಧತೆಯನ್ನು ತೋರಿಸುತ್ತದೆ. ಪರಿಶಿಷ್ಟರ ಹಲವಾರು ವರ್ಷಗಳ ಈ ಸಮಸ್ಯೆಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯರವರು ಬಹಳ ಎಚ್ಚರಿಕೆ ಮತ್ತು ಜವಾಬ್ದಾರಿಯಿಂದ ಈ ಸಮುದಾಯಗಳಿಗೆ ನ್ಯಾಯವನ್ನು ಕೊಡಿಸಿರುವುದಕ್ಕೆ ದಲಿತ ಸಮುದಾಯ ಪರವಾಗಿ ಅಭಿನಂದಿಸುತ್ತೇವೆ ಎಂದರು.

ಮಾದಿಗ ಸಮುದಾಯದ ಮುಖಂಡರಾದ ಡಿ. ಕುಮಾರ್ ರವರು ಮಾತನಾಡಿ ಒಳಮೀಸಲಾತಿ ವಿಚಾರದಲ್ಲಿ ಎಡಗೈ, ಬಲಗೈ ಜಾತಿಗಳಾದ ನಮಗೆ ಭಿನ್ನಾಭಿಪ್ರಾಯವಿತ್ತು. ಈಗ ಈ ಸಮಸ್ಯೆಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯರವರು ಎಲ್ಲರೂ ಒಪ್ಪುವ ರೀತಿ ಒಳಮೀಸಲಾತಿಯನ್ನು ಜಾರಿಗೊಳಿಸಿದ್ದಾರೆ. ನಮ್ಮಲ್ಲಿ ಈಗ ಯಾವುದೇ ಭಿನ್ನಾಭಿಪ್ರಾಯವಿಲ್ಲದೆ ದಲಿತ ಸಮುದಾಯದ ಒಳಜಾತಿಗಳು ಸಹೋದರತೆಯಿಂದ ಹೋಗಲಿದ್ದೇವೆ ಎಂದರು.

ವಾಸಿಸಲು ಮನೆಗಳಿಲ್ಲದೆ ಪಾಳು ಮಂಟಪಗಳಲ್ಲಿ ವಾಸ ಮಾಡುತ್ತಾ, ಅವಮಾನ ಹಂಗಿನ ಜೀವನ ಸಾಗಿಸುತ್ತಾ ಊರೂರು ಅಲೆಯುತ್ತಿದ್ದ ಅಲೆಮಾರಿ ಸಮುದಾಯಗಳಿಗೂ ಮುಖ್ಯಮಂತ್ರಿ ಸಿದ್ಧರಾಮಯ್ಯ ರವರು 4.50 ಅನುಪಾತದಲ್ಲಿ ಮೀಸಲಾತಿಯನ್ನು ಕಲ್ಪಿಸುತ್ತಿರುವುದು ಸಿದ್ಧರಾಮಯ್ಯರವರ ಸಾಮಾಜಿಕ ಬದ್ಧತೆಯನ್ನು ಎತ್ತಿ ತೋರಿಸುತ್ತದೆ. ಇವರ ಈ ತೀರ್ಮಾನವನ್ನು ಅಲೆಮಾರಿ ಸಮುದಾಯಗಳು ಸುವರ್ಣಾಕ್ಷರದಲ್ಲಿ ಬರೆದುಕೊಳ್ಳಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಬಸವಲಿಂಗಯ್ಯ, ದಸಂಸ ದ ರಾಜು ಚಿಕ್ಕಹುಣಸೂರು, ಬಲ್ಲೇನಹಳ್ಳಿ ಕೆಂಪರಾಜು, ದೇವೇಂದ್ರ ಕುಳುವಾಡಿ, ಕಿರಿಜಾಜಿ ಗಜೇಂದ್ರ, ನಾಗನಹಳ್ಳಿ ಮಹದೇವ, ಅಂಬೇಡ್ಕರ್ ಸ್ವಾಭಿಮಾನಿ ಸೇನೆಯ ನಾಗೇಶ್ ದೊಡ್ಡಹೆಜ್ಜೂರು ಸೋಮನಹಳ್ಳಿ ಕೆಂಪರಾಜು, ಮುಂತಾದವರು ಹಾಜರಿದ್ದು ಒಳಮೀಸಲಾತಿಯ ವೈಮನಷ್ಯವನ್ನು ಒಬ್ಬರಿಗೊಬ್ಬರು ಕುಶಲೋಪಚಾರಿಕೆಯಿಂದ ಮಾತನಾಡಿ ಸಿಹಿ ಹಂಚಿಸಿ ಸಂಭ್ರಮಿಸಿದರು.

## ಸಿಡಿಲು ಬಡಿದು 66 ಕುರಿಗಳ ಸಾವು

• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**

ತಾಲೂಕಿನ ಬೂದುರು ಗ್ರಾಮದಲ್ಲಿ ಗುಡುಗು-ಸಿಡಿಲು ಸಹಿತ ಸುರಿದ ಭಾರೀ ಮಳೆಯ ವೇಳೆ ದುರ್ಘಟನೆ ಸಂಭವಿಸಿ 66 ಕುರಿಗಳು ಸಾವನ್ನಪ್ಪಿದ ಘಟನೆ ಸೋಮವಾರ ಸಂಜೆ ನಡೆದಿದೆ.

ಸಂಜೆ ವೇಳೆಯಲ್ಲಿ ಅಕಸ್ಮಾತ್ ಮಳೆ ಆರಂಭವಾಗಿ, ಗಾಳಿ ಮತ್ತು ಮಿಂಚಿನ ತೀವ್ರತೆ ಹೆಚ್ಚಾಗಿತ್ತು. ಈ ವೇಳೆ ಮೇಯಿಸಲು ಹೊರತಂದಿದ್ದ ಕುರಿಗಳು ಮರದ ಕೆಳಗೆ ಆಶ್ರಯ ಪಡೆದಿದ್ದಾಗ ಸಿಡಿಲು ಬಡಿದ ಪರಿಣಾಮ ಈ ದುರ್ಘಟನೆ ನಡೆದಿದೆ ಎಂದು ಕುರಿಗಾಹಿ ಸಾಯಪ್ಪ ತಿಳಿಸಿದ್ದಾರೆ.

ಘಟನೆಯಲ್ಲಿ ಹಲವು ಕುರಿಗಳು ಸ್ಥಳದಲ್ಲೇ ಸಾವನ್ನಪ್ಪಿದ್ದು, ಕುರಿಗಾಹಿಗೆ ಭಾರೀ ಆರ್ಥಿಕ ನಷ್ಟ ಉಂಟಾಗಿದೆ.

ಘಟನಾ ಸ್ಥಳಕ್ಕೆ ತಹಸೀಲ್ದಾರ್ ಚನ್ನಮಲ್ಲಪ್ಪ ಘಂಟಿ, ಪಶುವೈದ್ಯರಾದ ಕಿರಣ್ ಹಜಾರೆ, ಮಹಿಪಾಲರೆಡ್ಡಿ



ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಕುರಿಗಾಹಿಗಳಾದ ಜಲ್ಲಪ್ಪ, ಸಾಯಪ್ಪ ಗಿರಪ್ಪ ಹಾಗೂ ಊರಿನ ಮುಖಂಡರಾದ ವಿಶ್ವನಾಥ ವಿಶ್ವಕರ್ಮ ಮತ್ತು ಭೀಮ ಮನ್ನೆ ಗ್ರಾಮಸ್ಥರು ಉಪಸ್ಥಿತರಿದ್ದರು.

## ಪರೀಕ್ಷೆ-2ಕ್ಕೆ ನೊಂದಾಯಿಸುವಂತೆ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

2026ನೇ ಸಾಲಿನಲ್ಲಿ ರಾಜ್ಯದ ಎಸ್.ಎಸ್.ಎಲ್.ಸಿ ಪರೀಕ್ಷೆ-1ರ ಫಲಿತಾಂಶ ಘೋಷಿಸಲಾಗಿದ್ದು, ಶೇ.94.1ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ. ರಾಜ್ಯದ ಶೈಕ್ಷಣಿಕ ಇತಿಹಾಸದಲ್ಲಿಯೇ ಅತ್ಯಂತ ಹೆಚ್ಚಿನ ಫಲಿತಾಂಶವನ್ನು ವಿದ್ಯಾರ್ಥಿಗಳು ಸಾಧಿಸಿರುತ್ತಾರೆ. ಈ ಫಲಿತಾಂಶವನ್ನು ಸಾಧಿಸಲು ಶ್ರಮಿಸಿದ ಉಪ ನಿರ್ದೇಶಕರು



(ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ಏಪ್ರಿಲ್ 27 ರ ಟಿಪ್ಪಣಿ ಬರೆದು ವೈಯಕ್ತಿಕ ಧನ್ಯವಾದಗಳನ್ನು ತಿಳಿಸಿದ್ದಾರೆ.

ಎಸ್.ಎಸ್.ಎಲ್.ಸಿ.ಪರೀಕ್ಷೆ-1ಕ್ಕೆ 7,70,209 ವಿದ್ಯಾರ್ಥಿಗಳು ಹಾಜರಾಗಿ 7,24,794 ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ. ಮುಂದುವರೆದು 45,415 ವಿದ್ಯಾರ್ಥಿಗಳು ಅನುತ್ತೀರ್ಣರಾಗಿರುತ್ತಾರೆ. ಪ್ರತೀ ವಿದ್ಯಾರ್ಥಿಯ ಶೈಕ್ಷಣಿಕ ಭವಿಷ್ಯವನ್ನು ರೂಪಿಸಬೇಕಾಗಿರುವ ಜವಾಬ್ದಾರಿ ಸರ್ಕಾರ ಮತ್ತು ಇಲಾಖೆಯದ್ದಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳು ತಮ್ಮ ಮುಂದಿನ ಶಿಕ್ಷಣದಿಂದ ವಂಚಿತರಾಗದಂತೆ ಶಿಕ್ಷಣ ಮುಂದುವರೆಸುವುದು ಸರ್ಕಾರದ ಆಶಯವಾಗಿದೆ ಎಂದು ತಿಳಿಸಿರುವ ಸಚಿವರು ಈ ನಿಟ್ಟಿನಲ್ಲಿ ಪರೀಕ್ಷೆ-1ರಲ್ಲಿ ಅನ್ನುತ್ತೀರ್ಣಗೊಂಡ ಎಲ್ಲಾ ವಿದ್ಯಾರ್ಥಿಗಳು ಪರೀಕ್ಷೆ-2ಕ್ಕೆ ನೊಂದಾಯಿಸುವಂತೆ ಹಾಗೂ ಪರೀಕ್ಷಾ ಶುಲ್ಕ ವಿನಾಯಿತಿ ಇರುವ ಬಗ್ಗೆ ವಿದ್ಯಾರ್ಥಿಗಳಿಗೆ ಶಾಲಾ ಮುಖ್ಯೋಪಾಧ್ಯಾಯರ ಮೂಲಕ ಮಾಹಿತಿ ನೀಡಿ, ಅನ್ನುತ್ತೀರ್ಣಗೊಂಡ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಪರೀ-ಕ್ಷೆಗೆ ನೋಂದಾಯಿಸಿ, ಹಾಜರಾಗುವಂತೆ ಸೂಕ್ತ ಕ್ರಮಕೈಗೊಳ್ಳುವಂತೆ ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ಇವರಿಗೆ ಸೂಚನೆ ನೀಡಿದ್ದಾರೆ.

# ತಳವಾರ ಸಮುದಾಯಕ್ಕೆ ಎಸ್ಟಿ ಪ್ರಮಾಣಪತ್ರ ನೀಡಲು ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಕಲಬುರಗಿಯಲ್ಲಿ ತಳವಾರ ಸಮುದಾಯದವರಿಗೆ ಪರಿಶಿಷ್ಟ ಪಂಗಡ (ಎಸ್ಟಿ) ಪ್ರಮಾಣ ಪತ್ರಕ್ಕಾಗಿ ಹೋರಾಟ ನಡೆಸುತ್ತಿದ್ದವರ ಮೇಲೆ ಲಾಠಿ ಪ್ರಹಾರ ಮಾಡಿ ಬಂಧಿಸಿ ಎಫೈಆರ್ ದಾಖಲಿಸಿರುವುದು ಸರಿಯಲ್ಲ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಧ್ಯಪ್ರವೇಶಿಸಿ ಕ್ರಮ ಕೈಗೊಳ್ಳಬೇಕು ಎಂದು ವಿಧಾನ ಪರಿಷತ್ತಿನ ವಿರೋಧಪಕ್ಷದ ಮುಖ್ಯ ಸಚೇತಕ ಎನ್ ರವಿಕುಮಾರ್ ಅವರು ಆಗ್ರಹಿಸಿದ್ದಾರೆ.

ಮಂಗಳವಾರ ಬೆಂಗಳೂರಿನ ರಾಜ್ಯ ಬಿಜೆಪಿ ಕಚೇರಿ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು. ತಳವಾರ ಸಮುದಾಯಕ್ಕೆ ಎಸ್ಟಿಕ ಪ್ರಮಾಣಪತ್ರ ಕೊಡುತ್ತಿಲ್ಲ ಎಂದು ಆ ಸಮುದಾಯದ ಅನೇಕ ಯುವಕರು, ಮುಖಂಡರು ಪ್ರತಿಭಟನೆ ನಡೆಸುತ್ತಿದ್ದರು. ಅವರ ಮೇಲೆ ಲಾಠಿ ಪ್ರಹಾರ ನಡೆಸಲಾಗಿದೆ. ಇದೇ ಬೇಡಿಕೆ ಇಟ್ಟುಕೊಂಡು ಬಹಳ ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ಮನವಿ ನೀಡಿದ್ದಾರೆ. ಆದರೂ ಪ್ರಯೋಜನ ಆಗಿಲ್ಲ ಎಂದು ದೂರಿದರು.

ಮೂರು ತಿಂಗಳ ಹಿಂದೆಯೂ ಇದೇ ವಿಷಯಕ್ಕೆ ಹೋರಾಟ ಆಗಿತ್ತು. ಆಗಲೂ ನಾನು ಭಾಗವಹಿಸಿದ್ದೆ ಎಂದು ಹೇಳಿದರು. ಈಗ ಮತ್ತೆ ಹೋರಾಟ ಆರಂಭವಾಗಿದೆ. ರಾತ್ರಿಯೂ ಧರಣಿ ನಡೆಸುತ್ತಿದ್ದಾಗ ಯುವಕರನ್ನು ಬಂಧಿಸಿ ಕರೆದೊಯ್ದು ಬೆಳಿಗ್ಗೆ ಬಿಡುಗಡೆ ಮಾಡಿದ್ದಾರೆ. ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಮಾತ್ರ ಹೋರಾಟ ನಡೆ-ಯುತ್ತಿದೆ. ರಾಜ್ಯದ ಉಳಿದ ಜಿಲ್ಲೆಗಳಲ್ಲಿ ಯಾಕೆ ಇಲ್ಲ ಎಂದು ಪ್ರಶ್ನಿಸಿದರು.

ರಾಜಕೀಯ ಕಾರಣಕ್ಕೆ ಹೋರಾಟ ಮಾಡ್ತಿದ್ದಾರೆ. ಪ್ರಮಾಣಪತ್ರ ಕೊಡ್ತಿದ್ದೇವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ಅವರು ಹೇಳಿದ್ದಾರೆ. ಹಾಗಾದರೆ ಪ್ರಮಾಣಪತ್ರ ನೀಡುತ್ತಿದ್ದರೆ ಯಾಕೆ



ಪ್ರತಿಭಟನೆ ನಡೆಯುತ್ತಿತ್ತು ಎಂದು ಕೇಳಿದರು.

ಸಚಿವ ಪ್ರಿಯಾಂಕ ಖರ್ಗೆ ಅವರು ಜಗತ್ತಿಗೆ ಬೋಧನೆ ಮಾಡುವುದನ್ನು ಬಿಟ್ಟು ತಮ್ಮ ಕ್ಷೇತ್ರದಲ್ಲಿ ಆಗುವ ಯಾವುದೇ ಸಮಸ್ಯೆಯನ್ನು ಪರಿಹರಿಸಲಿ. ಈ ಹೋರಾಟ ತೀವ್ರ ಸ್ವರೂಪ ಪಡೆಯುವ ಮೊದಲೇ ಎಚ್ಚೆತ್ತುಕೊಂಡು ಹರಿಗೆ ನ್ಯಾಯಯುತವಾಗಿ ಎಸ್ಟಿ ಪ್ರಮಾಣ ಪತ್ರ ಕೊಡಬೇಕು. ಇಲ್ಲದೇ ಇದ್ದರೆ ಹೋರಾಟ ತೀವ್ರವಾಗುತ್ತೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳು ಕಾನೂನು ಪ್ರಕಾರ ಆಡಳಿತ ನಡೆಸಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದರೆಂದು ಕೇಳಬಾರದು. ಸರಕಾರದ ನಿಯಮಗಳ ಪ್ರಕಾರವೇ ಅಧಿಕಾರಿಗಳು ಕೆಲಸ ಮಾಡಬೇಕು ಮತ್ತು ನಿರ್ಧಾರ ಕೈಗೊಳ್ಳಬೇಕು ಎಂದರು.

ಎಸ್ಟಿರ ಪ್ರಮಾಣಪತ್ರಕ್ಕಾಗಿ ಎಲ್ಲರೂ ಸೇರಿ ಕೇವಲ ತಮ್ಮ ಸ್ವಂತ ಹಿತಕ್ಕಾಗಿ ಪ್ರತಿಭಟನೆ ಮಾಡುತ್ತಿಲ್ಲ. ಪ್ರಮಾಣಪತ್ರ ಇಲ್ಲದಿದ್ದರೆ ಕೆಲಸ ಕಳೆದುಕೊಳ್ಳಬೇಕಾಗುತ್ತದೆ. ಉದ್ಯೋಗಕ್ಕಾಗಿ, ಶಾಲಾ ಕಾಲೇಜು ದಾಖಲಾತಿಗೆ ಪ್ರಮಾಣಪತ್ರ ಸಲ್ಲಿಸಲು ಪ್ರತಿಭಟನೆ ನಡೆಯುತ್ತಿದೆ. ಬಂಧಿಸಿ ಬಿಡುಗಡೆ ಮಾಡಿದವರ ಮೇಲಿನ ಎಫೈಆರ್ ಹಿಂದಕ್ಕೆ ಪಡೆಯಬೇಕು. ಇಲ್ಲದಿದ್ದರೆ ದೊಡ್ಡ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

# ಬದುಕು: ನಿರಂತರ ಅನ್ವೇಷಣೆ, ಒಂದು ತಾತ್ವಿಕ ಚಿಂತನೆ




**ಭೋಗ-ಐಭೋಗ**

• **ವೀರಣ್ಣ ಕಲಕೇರಿ**

**ಕೆಂಭಾವಿ**

ಹುಟ್ಟಿನಿಂದ ಸಾವಿನವರೆಗೆ ಮನುಷ್ಯ ಏನನ್ನೋ ಹುಡುಕುತ್ತಲೇ ಇರುತ್ತಾನೆ. ಈ ಹುಡುಕಾಟವೇ ಅವನನ್ನು ಸದಾ ಕಾರ್ಯನಿರತನನ್ನಾಗಿ ಮಾಡಿರುತ್ತದೆ. ಆದರೆ ಸತ್ಯವೇನೆಂದರೆ, ಈ ಹುಡುಕಾಟ ಹೆಚ್ಚಾಗಿ ಹೊರಜಗತ್ತಿನಲ್ಲೇ ನಡೆಯುತ್ತಿರುತ್ತದೆ. ಇಲ್ಲಿ ಹಂಬಲ ಮತ್ತು ಬೆಂಬಲ ಎರಡೂ ಇವೆ. ವ್ಯಕ್ತಿಯ ಹುಡುಕಾಟದಲ್ಲಿ ಹಂಬಲ ಬೆಂಬಲ ಸ್ವ-ಪರ ಇರಬಹುದು. ದೀರ್ಘಕಾಲದ ಹುಡುಕಾಟದ ನಂತರ, ಮನುಷ್ಯ ತನ್ನ ಅರಿವಿನ ನೆರವಿನಿಂದ ಬಾಹ್ಯ ಅನ್ವೇಷಣೆಯಿಂದ ಮುಕ್ತನಾಗಲು ಇಚ್ಚಿಸಿ, ಆಂತರ್ಯಕ್ಕಿಳಿದು ಸ್ವತಂತ್ರ ಸಂಶೋಧಕನಂತೆ ಅಂತರಂಗದ ದರ್ಶನಕ್ಕೆ ಮುಂದಾಗುತ್ತಾನೆ. ಆಗ ಬದುಕು ಹೊರಗಿನದ್ದಾಗಿರಲಿ ಅಥವಾ ಒಳಗಿನದ್ದಾಗಿರಲಿ, ಅದೊಂದು ನಿರಂತರ ಅನ್ವೇಷಣೆ ಎಂಬ ಸತ್ಯ ಅರಿವಾಗುತ್ತದೆ.

ಈ ಅರಿವಿನ ಹಂತಕ್ಕೆ ಬರುವ ಮುನ್ನ ಮನುಷ್ಯ ಲೌಕಿಕ ಜಗತ್ತಿನ ಭ್ರಮೆಯಲ್ಲೇ ಇರುತ್ತಾನೆ. ಸುಖ, ಶಾಂತಿ ಮತ್ತು ಸ್ಥಿರತೆಗಾಗಿ ಹೊರಗಿನ ವಸ್ತುಗಳ ಮೇಲೆ ಅವಲಂಬಿತನಾಗುತ್ತಾನೆ. ಅಧಿಕಾರ, ಸಂಪತ್ತು ಮತ್ತು ಸಂಬಂಧಗಳೇ ತನ್ನ ಬದುಕಿಗೆ ಭದ್ರವಾದ




'ಇಂಬು' (ಆಸರೆ) ನೀಡುತ್ತವೆ ಎಂದು ನಂಬುತ್ತಾನೆ. ಆದರೆ ಕಣ್ಣಿಗೆ ಕಾಣುವ ಈ ಸೌಂದರ್ಯ ಮತ್ತು ಸುಖಗಳು ಕಾಲನ ಕಪಿಮುಷ್ಟಿಯಲ್ಲಿದ್ದು, ಸಮಯ ಸರಿದಂತೆ ಕೇವಲ ಕಲ್ಪನೆಯಾಗುತ್ತವೆ ಎಂಬುದು ಅವನಿಗೆ ತಿಳಿಯುವುದಿಲ್ಲ. ಈ ಬದಲಾಗುವ ಕ್ಷಣಿಕ ಸತ್ಯವನ್ನೇ 'ಶಾಶ್ವತ' ಎಂದು ನಂಬುವುದೇ ಅಜ್ಞಾನ. ಈ ಅಜ್ಞಾನದ ಕಾರಣದಿಂದ ಮನುಷ್ಯ ಕಣ್ಣಿಗೆ ಕಂಡದ್ದೇ ನಿಜವೆಂದು ನಂಬಿ, ಅದರ ಹಿಂದಿರುವ ಅದೃಶ್ಯ ಶಕ್ತಿಯ ಸೂತ್ರಧಾರನನ್ನು ಮರೆಯುತ್ತಾನೆ.

ಯಾವಾಗ ಮನುಷ್ಯ ಈ ತತ್ವವನ್ನು ಅರಿಯಲು ಸಿದ್ಧನಾಗುತ್ತಾನೋ, ಆಗ ಜಗತ್ತಿನ ನಶ್ವರತೆ ಅರ್ಥವಾಗತೊಡಗುತ್ತದೆ. ಆಗ ಅವನ ದೃಷ್ಟಿ ಹೊರಗಿನಿಂದ ಒಳಗಡೆಗೆ ತಿರುಗುತ್ತದೆ; ಇದನ್ನೇ 'ಅಂತರ್ಮುಖಿ' ಎನ್ನಲಾಗುತ್ತದೆ. ಸರಳ ವಿರಳ ಎಂಬಂತೆ ಮನುಷ್ಯ ತನ್ನ ಆತ್ಮಬಲದ ಮೊರೆ ಹೋಗುತ್ತಾನೆ. ಈ ಅಂತರಂಗದ ಹುಡುಕಾಟದಲ್ಲಿ ಲೌಕಿಕ ಕಣ್ಣಿಗೆ ಕಾಣದ, ಆದರೆ ಅನುಭವಕ್ಕೆ ನಿಲುಕುವ 'ಅಂತರ್ ಶಕ್ತಿ'ಯ ಅರಿವು ಮೂಡಿದ ಮೇಲೆ ಅವನು ಲೌಕಿಕ ಹಂಬಲಗಳಿಗೆ ಬಲಿಯಾಗದೆ ಸ್ವಯಂ ಸಾಧನೆಯ ಹಾದಿ ಹಿಡಿಯುತ್ತಾನೆ.

ವ್ಯಕ್ತಿ ಸ್ವಯಂ ಸಾಧನೆಗೆ ಅಣಿಯಾದಾಗ ಅಹಂಭಾವದಿಂದ ಮುಕ್ತನಾಗುತ್ತಾನೆ. ತನ್ನೊಳಗಿನ ದಿವ್ಯತೆಯನ್ನು ಕಂಡು, ಹೊರಗಿನ ಭ್ರಮೆಯನ್ನು ಗೆದ್ದು ಸಾರ್ಥಕತೆಯ ಹಾದಿಯಲ್ಲಿ ಸಾಗುತ್ತಾನೆ. ಹೊರಜಗತ್ತಿನ ಬದುಕು ಸುಳ್ಳಲ್ಲ, ಆದರೆ ಬದುಕಿನ ಬಗೆಗಿನ ನಮ್ಮ ಭ್ರಮೆ ಸುಳ್ಳು ಎಂಬ ಅರಿವು ಅವನಲ್ಲಿ ಮೂಡುತ್ತದೆ. ಬಾಹ್ಯ ಹಂಬಲಗಳ ಮಿಥ್ಯೆಯನ್ನು ಅರಿತು, ಸರಳ ಸಾತ್ವಿಕತೆಯನ್ನು ಮೈಗೂಡಿಸಿಕೊಳ್ಳುತ್ತಾನೆ. ಲೌಕಿಕದಲ್ಲಿದ್ದೂ ಅಂತರಂಗದ ಅರಿವಿನ ದೀವಿಗೆಯನ್ನು ಹಿಡಿದು ಸಾಮಾನ್ಯರಲ್ಲಿ ಸಾಮಾನ್ಯನಾಗಿ ಬದುಕುತ್ತಲೇ, ಅಲೌಕಿಕ ಸುಖವನ್ನು ಅನುಭವಿಸುವ ಸಾಮಾನ್ಯರೊಳು ಸಾಮಾನ್ಯನೆನಿಸಿ 'ಅಸಾಮಾನ್ಯ' ವ್ಯಕ್ತಿಯಾಗುತ್ತಾನೆ. ಇದನ್ನೆ ಶರಣರು 'ಜಲದೊಳಗಣ ಕಮಲದಂತೆ' ಎಂದರು. ಇದೇ ಅಲ್ಲವೆ ನಿಜವಾದ ತಾತ್ವಿಕ ಲೋಕ. ಈ ಸುಂದರ ಸ್ಥಿತಿಯನ್ನು ಈ ಕೆಳಗಿನ ಸಾಲುಗಳಲ್ಲಿ ಹೀಗೆ ಬಿಂಬಿಸಬಹುದಲ್ಲವೆ?

**ಹಂಬಲವು ಕಂಡೆ ಬೆಂಬಲವು ಕಂಡೆ**
**ಬಾಹ್ಯದ ಬದುಕಿಗೆ ಇಂಬೆಂದು ಕಂಡೆ**
**ಕಂಡದ್ದು ಸುಳ್ಳೆಂದು**
**ತಿಳಿಯದ ತಿಳಿಗೇಡಿ ನನ್ನೊಳಗೆ ನಾ ಕಂಡೆ**
**ಕಾಣದ ಸೃಷ್ಟಿಬಲೇಶ ನೀನೆ ದಿಟವೆಂದೂ ಕಂಡೆ**

ಎನ್ನುವ ಹಾಗೆ ಹೊರಗಿನ ತೋರಿಕೆಯ ಬದುಕಿಗಿಂತ, ಅಂತರಂಗದಲ್ಲಿ ಕಾಣುವ ಅರಿವಿನ ಅಸ್ತಿತ್ವವೇ ಶ್ರೇಷ್ಠ ಅಲ್ಲವೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)